ವಾರ್ಡ್ ಇವರ ಅನುಸೂಚಿ ನಿರ್ದಿಷ್ಟಪಡಿಸಿದ ಆಸ್ತಿಗಳು, ವಾರ್ಡ್ ನಂ-178 ಸಾರಕ್ಕಿ ವಾರ್ಡ್‌ನಲ್ಲಿ ಸಾರ್ವಜನಿಕ ಉದ್ದೇಶಗಳಿಗಾಗಿ ಅಂದರೆ ಸಾರಕ್ಕಿ ಮುಖ್ಯರಸ್ತೆಯನ್ನು ಏಕಮುಖ ರಸ್ತೆಯನ್ನಾಗಿ ಮಾಡಿ ರಸ್ತೆ ಸಂಪರ್ಕ ಕಲ್ಪಿಸಲು ಮತ್ತು ಶೌಚಾಲಯ ನಿರ್ಮಾಣಕ್ಕೆ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಸಾರಕ್ಕಿ ಗ್ರಾಮದ ಸರ್ವೆ ನಂ-60/6ಎ, 60/3 ರಲ್ಲಿನ 3297.94 ಚ.ಅಡಿ ಜಾಗವನ್ನು ಭೂಸ್ವಾಧೀನ ಪಡಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಕಂಡುಬಂದಿರುವುದರಿಂದ:

1976ರ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆಯ ಕಲಂ 177 ಮತ್ತು ಕರ್ನಾಟಕ ಅಧಿನಿಯಮ ಸಂಖ್ಯೆ:33ರ ಮೂಲಕ ತಿದ್ದುಪಡಿಯಾದ 1991ನೇ ಸಾಲಿನ ಭೂ ಸ್ವಾಧೀನ ಅಧಿನಿಯಮ 1894ರ (ಕೇಂದ್ರ ಅಧಿನಿಯಮ ಸಂಖ್ಯೆ1894ರ 1) 4ನೇ ಪ್ರಕರಣದ-(1)ನೇ ಉಪ ಪ್ರಕರಣದ ಉಪಬಂದಗಳ ಅನುಸಾರವಾಗಿ, ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಈ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ ಹಾಗೂ ಕರ್ನಾಟಕ ಸರ್ಕಾರವು ಆ ಅಧಿನಿಯಮದ 4(2)ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಭೂ ಅರ್ಜನೆ ಅಧಿಕಾರಿ, ಅವರ ಸಿಬ್ಬಂದಿ ಹಾಗೂ ಕೆಲಸಗಾರರಿಗೆ ಈ ಮೂಲಕ ಅಧಿಕಾರ ನೀಡಲಾಗಿದೆ.

[illegible] ಅಧಿನಿಯಮದ 3(ಸಿ) ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರವು ಅಧಿನಿಯಮದ 5(ಎ) ಪ್ರಕರಣದ ಮೇರೆಗೆ ಉಪ ಆಯುಕ್ತರು (ಭೂಸ್ವಾಧೀನ) ರವರ ಪ್ರಕಾರ್ಯಗಳನ್ನು ನಿರ್ವಹಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು, ಇವರನ್ನು ನೇಮಕ ಮಾಡಿದೆ.

ಭೂಮಿಯಲ್ಲಿ/ಆಸ್ತಿಯಲ್ಲಿ ಹಿತಾಸಕ್ತಿ ಹೊಂದಿರುವ ಯಾವನೇ ವ್ಯಕ್ತಿಯು ತನ್ನ ಆಕ್ಷೇಪಣೆಗಳು ಯಾವುದಾದರೂ ಇದ್ದರೆ ಅವುಗಳನ್ನು ಅಧಿಸೂಚನೆಯು ಪ್ರಕಟವಾದ ತಾರೀಖಿನಿಂದ ಮೂವತ್ತು ದಿನಗಳ ಒಳಗಾಗಿ ಅಥವಾ ಅದಕ್ಕಿಂತ ಮುಂಚೆ ಕರ್ನಾಟಕ ಅಧಿನಿಯಮ 1961ರ 17ರ ಮೂಲಕ ತಿದ್ದುಪಡಿಯಾದ ಭೂ ಅರ್ಜನೆ ಅಧಿನಿಯಮ 1894ರ 3(ಸಿ) ಪ್ರಕರಣದ ಮೇರೆಗೆ ಉಪ ಆಯುಕ್ತರು(ಭೂಸ್ವಾಧೀನ) ರವರ ಪ್ರಕಾರ್ಯಗಳನ್ನು ನಿರ್ವಹಿಸಲು ನೇಮಕವಾದ ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಇವರಿಗೆ ಲಿಖಿತ ಮೂಲಕ ಸಲ್ಲಿಸತಕ್ಕದ್ದು.

ಸದರಿ ಅರ್ಜನೆ ಉದ್ದೇಶಕ್ಕಾಗಿ ಸದರಿ ಭೂಮಿಗಳ/ಆಸ್ತಿಗಳ ಮೇಲೆ ನಿಯೋಜಿತರಾದ ಯಾವುದೇ ಮೋಜಣಿದಾರರು ಅಥವಾ ಇತರೇ ವ್ಯಕ್ತಿಗಳಿಗೆ ಅಡ್ಡಿಯನ್ನುಂಟು ಮಾಡಬಾರದೆಂದು ಅಥವಾ ಅವರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡಬಾರದೆಂದು ಸದರಿ ಭೂಮಿ/ಆಸ್ತಿಗಳಲ್ಲಿ ಹಿತಾಸಕ್ತಿ ಹೊಂದಿರುವ ಎಲ್ಲಾ ವ್ಯಕ್ತಿಗಳಿಗೆ ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಈ ಅಧಿಸೂಚನೆಯು ಪ್ರಕಟವಾದ ದಿನಾಂಕದ ನಂತರ ಉಪ ಆಯುಕ್ತರು (ಭೂಸ್ವಾಧೀನ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರ ಅನುಮತಿಯಿಲ್ಲದೆ ಮಾರಾಟ, ಗುತ್ತಿಗೆ, ಅಡಮಾನ, ವಿನಿಮಯದ ಮೂಲಕ ಅಥವಾ ಬೇರೆ ರೀತಿಯ ಮೂಲಕ ಸದರಿ ಭೂಮಿಗಳ/ಆಸ್ತಿಗಳ ಮೇಲೆಗಾಗಿ ಮಾಡಿಕೊಂಡ ಯಾವುದೇ ಕರಾರುಗಳನ್ನು ಅಥವಾ ಅದರಲ್ಲಿ ಮಾಡಲಾದ ವೆಚ್ಚ ಅಥವಾ ಅಭಿವೃದ್ಧಿಗಳನ್ನು ಅಂತಿಮವಾಗಿ ಅರ್ಜನೆ ಮಾಡಿಕೊಳ್ಳಲಾಗುವ ಸದರಿ ಭೂಮಿ/ಆಸ್ತಿಗಳ ಅಂತಹ ಭಾಗಗಳಿಗೆ ಪರಿಹಾರಕ್ಕಾಗಿ ನಿರ್ಧರಣೆ ಮಾಡುವ ಸಂದರ್ಭದಲ್ಲಿ ಸದರಿ ಅಧಿನಿಯಮದ(ಒಳನೇ ಖಂಡ) 2ನೇ ಪ್ರಕರಣದ ಮೇರೆಗೆ ಗಣನೆಗೆ ತೆಗೆದುಕೊಳ್ಳಬಾರದು.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಕೇಂದ್ರ ಕಛೇರಿ, ನರಸಿಂಹರಾಜು ವೃತ್ತ, ಬೆಂಗಳೂರು. ಇವರ ಕಛೇರಿಯಲ್ಲಿ ಭೂಮಿಗಳ/ಆಸ್ತಿಗಳ ಸ್ಥೂಲ ನಕಾಶೆಯನ್ನು ಪರಿಶೀಲನೆಗಾಗಿ [illegible]ಲಾಗಿದೆ

ಅನುಸೂಚಿ

ವಾರ್ಡ್ ನಂ-178 ಸಾರಕ್ಕಿ ವಾರ್ಡ್‌ನಲ್ಲಿ ಮುಖ್ಯರಸ್ತೆಯನ್ನು ಏಕಮುಖ ರಸ್ತೆಯನ್ನಾಗಿ ಮಾಡಿ ರಸ್ತೆ ಸಂಪರ್ಕ ಕಲ್ಪಿಸಲು ಮತ್ತು ಶೌಚಾಲಯ ನಿರ್ಮಾಣಕ್ಕಾಗಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿಹೋಬಳಿ.ಸಾರಕ್ಕಿ ಗ್ರಾಮದ ಸರ್ವೆ ನಂ- 60/6ಎ, 60/3 ರಲ್ಲಿನ ಒಟ್ಟು 3297.94 ಚ.ಅಡಿ ಜಾಗವನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಸದರಿ ಸ್ವತ್ತುಗಳ ವಿವರ ಈ ಕೆಳಕಂಡಂತೆ ಇರುತ್ತವೆ.

ಕ್ರ. ಸಂ.	ಖಾತೇದಾರರ ಹೆಸರು	ಅನುಭವದಾರರ ಹೆಸರು	ಗ್ರಾಮ ಸರ್ವೆ ನಂ.	ಆರ್.ಟಿ.ಸಿ. ಪ್ರಕಾರ ಒಟ್ಟು ವಿಸ್ತೀರ್ಣ (ಎ.ಗುಂ.)	ಭೂಸ್ವಾಧೀನಕ್ಕೆ ಬೇಕಾಗಿರುವ ವಿಸ್ತೀರ್ಣ ಚ.ಅ.ಗಳಲ್ಲಿ	ತರಹೆ	ಚಕ್ಕುಬಂದಿ				ಷರಾ
							ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ	
1	2	3	4	5	6	7	8	9	10	11	12

ಕ್ರ. ಸಂ.	ಖಾತೇದಾರರ ಹೆಸರು	ಅನುಭವದಾರರ ಹೆಸರು	ಗ್ರಾಮ ಸರ್ವೆ ನಂ.	ಆರ್.ಟಿ.ಸಿ. ಪ್ರಕಾರ ಒಟ್ಟು ವಿಸ್ತೀರ್ಣ (ಎ.ಗುಂ.)	ಭೂಸ್ವಾಧೀನಕ್ಕೆ ಬೇಕಾಗಿರುವ ವಿಸ್ತೀರ್ಣ ಚ.ಅ.ಗಳಲ್ಲಿ	ತರಹೆ	ಚಕ್ಕುಬಂದಿ				ಷರಾ
							ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ	
1	2	3	4	5	6	7	8	9	10	11	12
1	ಜಯರಾಂ	ಜಯರಾಂ	ಸಾರಕ್ಕಿ 60/6ಎ	0–18 ಗುಂಟೆ	2657.72	ಖಾಲಿ ಜಮೀನು ಖುಷ್ಕಿ	60/6ಎ ರ ಜಾಗ	60/3 ಬಿ	60/3	ರಸ್ತೆ	–
2	ಜಯರಾಂ	ಜಯರಾಂ	ಸಾರಕ್ಕಿ 60/3	2.00 ಎಕರೆ 0–01 (ಖರಾಬು) ಜಾತಾ 1–39	640.22	ಖಾಲಿ ಜಮೀನು ಖುಷ್ಕಿ	60/3 ರ ಉಳಿಕೆ ಜಾಗ	60/3 ರ ಉಳಿಕೆ ಜಾಗ	80 ಅಡಿ ರಸ್ತೆ	60/3 ರ ಉಳಿಕೆ ಜಾಗ ಮತ್ತು 60/6ಎ ರ ಜಾಗ	–
				ಒಟ್ಟು	3297.94						

ಬೆಂಗಳೂರು:
ದಿನಾಂಕ: 12–05–2011

ಉಪ ಆಯುಕ್ತರು (ಭೂಸ್ವಾಧೀನ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪಿಡಿ–58

ಉಪ ಆಯುಕ್ತರು(ಭೂಸ್ವಾಧೀನ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಾರ್ಯಾಲಯ, ಬೆಂಗಳೂರು

ಭೂ ಅರ್ಜನೆ ಅಧಿನಿಯಮದ 4(1)ನೇ ಪ್ರಕರಣದ ಮೇರೆಗೆ ಅಧಿಸೂಚನೆ

ಕ್ರಮಾಂಕ:ಎಲ್1/ಪಿಆರ್/67/1984–85, ದಿನಾಂಕ: 9ನೇ ಮೇ 2011

ಇದರ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಆಸ್ತಿಗಳು, ಸಾರ್ವಜನಿಕ ಉದ್ದೇಶಗಳಿಗಾಗಿ ಅಂದರೆ ವಾರ್ಡ್ ನಂ–141 (ಹಳೆ ವಾರ್ಡ್ ನಂ–45) ರಲ್ಲಿ ಬರುವ ವಿಠಲನಗರ (ವಾಲ್ಮೀಕಿನಗರ) ದಲ್ಲಿನ ಸ್ಥಳೀಯ ಕ್ಷೇತ್ರ ಎಲ್ಎ ನಂ–50. ಸಿಟಿಎಸ್ ನಂ.233 ರಲ್ಲಿನ ಸ್ವತ್ತಿನ ಸಂಖ್ಯೆ: 90/15–2 ರ ಪೈಕಿ 625 ಚ.ಅಡಿ ಜಾಗವನ್ನು ರಸ್ತೆ ನಿರ್ಮಾಣಕ್ಕೆ ಅಗತ್ಯವಾಗಿ ಬೇಕಾಗಿದೆ ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಕಂಡುಬಂದಿರುವುದರಿಂದ:

1976ರ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆಯ ಕಲಂ 177 ಮತ್ತು ಕರ್ನಾಟಕ ಅಧಿನಿಯಮ ಸಂಖ್ಯೆ:33ರ ಮೂಲಕ ತಿದ್ದುಪಡಿಯಾದ 1991ನೇ ಸಾಲಿನ ಭೂ ಸ್ವಾಧೀನ ಅಧಿನಿಯಮ 1894ರ (ಕೇಂದ್ರ ಅಧಿನಿಯಮ, ಸಂಖ್ಯೆ:1894ರ 1) 4ನೇ ಪ್ರಕರಣದ–(1)ನೇ ಉಪ ಪ್ರಕರಣದ ಉಪಬಂದಗಳ ಅನುಸಾರವಾಗಿ, ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಈ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ ಹಾಗೂ ಕರ್ನಾಟಕ ಸರ್ಕಾರವು ಆ ಅಧಿನಿಯಮದ 4(2)ನೇ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು– ಭೂ ಅರ್ಜನೆ ಅಧಿಕಾರಿ, ಅವರ ಸಿಬ್ಬಂದಿ ಹಾಗೂ ಕೆಲಸಗಾರರಿಗೆ ಈ ಮೂಲಕ ಅಧಿಕಾರ ನೀಡಲಾಗಿದೆ.

ಸದರಿ ಅಧಿನಿಯಮದ 3(ಸಿ) ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರವು ಅಧಿನಿಯಮದ 5(ಎ) ಪ್ರಕರಣದ ಮೇರೆಗೆ ಉಪ ಆಯುಕ್ತರು (ಭೂಸ್ವಾಧೀನ) ರವರ ಪ್ರಕಾರ್ಯಗಳನ್ನು ನಿರ್ವಹಿಸಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು, ಇವರನ್ನು ನೇಮಕ ಮಾಡಿದೆ.

ಭೂಮಿಯಲ್ಲಿ/ಆಸ್ತಿಯಲ್ಲಿ ಹಿತಾಸಕ್ತಿ ಹೊಂದಿರುವ ಯಾವನೇ ವ್ಯಕ್ತಿಯು ತನ್ನ ಆಕ್ಷೇಪಣೆಗಳು ಯಾವುದಾದರೂ ಇದ್ದರೆ ಅವುಗಳನ್ನು ಅಧಿಸೂಚನೆಯು ಪ್ರಕಟವಾದ ತಾರೀಖಿನಿಂದ ಮೂವತ್ತು ದಿನಗಳ ಒಳಗಾಗಿ ಅಥವಾ ಅದಕ್ಕಿಂತ ಮುಂಚೆ ಕರ್ನಾಟಕ ಅಧಿನಿಯಮ 1961ರ 17ರ ಮೂಲಕ ತಿದ್ದುಪಡಿಯಾದ ಭೂ ಅರ್ಜನೆ ಅಧಿನಿಯಮ 1894ರ 3(ಸಿ) ಪ್ರಕರಣದ ಮೇರೆಗೆ ಉಪ ಆಯುಕ್ತರು(ಭೂಸ್ವಾಧೀನ) ರವರ ಪ್ರಕಾರ್ಯಗಳನ್ನು ನಿರ್ವಹಿಸಲು ನೇಮಕವಾದ ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು, ಇವರಿಗೆ ಲಿಖಿತ ಮೂಲಕ ಸಲ್ಲಿಸತಕ್ಕದ್ದು.

ಸದರಿ ಅರ್ಜನೆ ಉದ್ದೇಶಕ್ಕಾಗಿ ಸದರಿ ಭೂಮಿಗಳ/ಆಸ್ತಿಗಳ ಮೇಲೆ ನಿಯೋಜಿತರಾದ ಯಾವುದೇ ಮೋಜಣಿದಾರರು ಅಥವಾ ಇತರೇ ವ್ಯಕ್ತಿಗಳಿಗೆ ಅಡ್ಡಿಯನ್ನುಂಟು ಮಾಡಬಾರದೆಂದು ಅಥವಾ ಅವರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡಬಾರದೆಂದು ಸದರಿ ಭೂಮಿ/ಆಸ್ತಿಗಳಲ್ಲಿ ಹಿತಾಸಕ್ತಿ ಹೊಂದಿರುವ ಎಲ್ಲಾ ವ್ಯಕ್ತಿಗಳಿಗೆ ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಈ ಅಧಿಸೂಚನೆಯು ಪ್ರಕಟವಾದ ದಿನಾಂಕದ ನಂತರ ಉಪ ಆಯುಕ್ತರು (ಭೂಸ್ವಾಧೀನ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.ರವರ ಅನುಮತಿಯಿಲ್ಲದೆ ಮಾರಾಟ, ಗುತ್ತಿಗೆ, ಅಡಮಾನ, ವಿನಿಮಯದ ಮೂಲಕ ಅಥವಾ ಬೇರೆ ರೀತಿಯ ಮೂಲಕ ಸದರಿ ಭೂಮಿಗಳ/ಆಸ್ತಿಗಳ ವಿಲೇಗಾಗಿ ಮಾಡಿಕೊಂಡ ಯಾವುದೇ ಕರಾರುಗಳನ್ನು ಅಥವಾ ಅದರಲ್ಲಿ ಮಾಡಲಾದ ವೆಚ್ಚ ಅಥವಾ ಅಭಿವೃದ್ಧಿಗಳನ್ನು ಅಂತಿಮವಾಗಿ ಅರ್ಜನೆ ಮಾಡಿಕೊಳ್ಳಲಾಗುವ ಸದರಿ ಭೂಮಿ/ಆಸ್ತಿಗಳ ಅಂತಹ ಭಾಗಗಳಿಗೆ ಪರಿಹಾರಕ್ಕಾಗಿ ನಿರ್ಧರಣೆ ಮಾಡುವ ಅಧಿಕಾರಿಯು ಸದರಿ ಅಧಿನಿಯಮದ(ಏಳನೇ ಖಂಡ) 2ನೇ ಪ್ರಕರಣದ ಮೇರೆಗೆ ಗಣನೆಗೆ ತೆಗೆದುಕೊಳ್ಳಬಾರದು.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಕೇಂದ್ರ ಕಛೇರಿ, ನರಸಿಂಹರಾಜು ವೃತ್ತ, ಬೆಂಗಳೂರು. ಇವರ ಕಛೇರಿಯಲ್ಲಿ ಭೂಮಿಗಳ/ಆಸ್ತಿಗಳ ಸ್ಥೂಲ ನಕಾಶೆಯನ್ನು ಪರಿಶೀಲನೆಗಾಗಿ ಇಡಲಾಗಿದೆ.

ಅನುಸೂಚಿ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ನಂ–141 (ಹಳೆ ವಾರ್ಡ್ ನಂ–45) ರಲ್ಲಿ ಬರುವ ವಿಠಲನಗರ (ವಾಲ್ಮೀಕಿನಗರ) ದಲ್ಲಿನ ಸ್ಥಳೀಯ ಕ್ಷೇತ್ರ (ಎಲ್‌ಎ) ನಂ–50, ಸಿಟಿಎಸ್ ನಂ.233 ರಲ್ಲಿನ ಸ್ವತ್ತಿನ ಸಂಖ್ಯೆ: 90/15–2 ರ ಪೈಕಿ 625 ಚ.ಅಡಿ ಜಾಗವನ್ನು ರಸ್ತೆ ನಿರ್ಮಾಣಕ್ಕೆ ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಸದರಿ ಸ್ವತ್ತಿನ ವಿವರ ಈ ಕೆಳಕಂಡಂತಿದೆ.

ಕ್ರ. ಸಂ.	ಖಾತೇದಾರರ ಹೆಸರು	ಅನುಭವದಾರರ ಹೆಸರು	ಸಿಟಿಎಸ್ ನಂಬರ್	ಪಾಲಿಕೆ ಖಾತೆ ನಂ:	ಭೂಸ್ವಾಧೀನಕ್ಕೆ ಬೇಕಾಗಿರುವ ವಿಸ್ತೀರ್ಣ ಚ.ಅ.ಗಳಲ್ಲಿ	ತರಹೆ	ಚಕ್ಕುಬಂದಿ				ಷರಾ
							ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ	
1	2	3	4	5	6	7	8	9	10	11	12
1	ಮಲ್ಲಿಕ್.ಕೆ.ವಿ	ಮಲ್ಲಿಕ್.ಕೆ.ವಿ	ಎಲ್‌ಎ–50 ಸಿಟಿಎಸ್ ನಂ–233	90/15–2 ಪಿ.ಐ.ಡಿ ನಂ–45–16–90/15–2	625	ಖಾಲಿ ಜಾಗ	3ನೇಅಡ್ಡರಸ್ತೆ	2ನೇಮುಖ್ಯರಸ್ತೆ	ಸಿಟಿಎಸ್ ನಂ–213 ಹಾಗೂ ಮನೆ ನಂ–67	ಸಿಟಿಎಸ್ ನಂ–233 ರ ಪೈಕಿ ಮನೆ ನಂ–68/1	–

ಬೆಂಗಳೂರು:
ದಿನಾಂಕ: 09–05–2011

ಉಪ ಆಯುಕ್ತರು (ಭೂಸ್ವಾಧೀನ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಉಪ ಆಯುಕ್ತರು(ಭೂಸ್ವಾಧೀನ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಾರ್ಯಾಲಯ, ಬೆಂಗಳೂರು

ಭೂ ಅರ್ಜನೆ ಅಧಿನಿಯಮದ 4(1)ನೇ ಪ್ರಕರಣದ ಮೇರೆಗೆ ಅಧಿಸೂಚನೆ

ಕ್ರಮಾಂಕ:ಎಲ್‌ಎಕ್ಯೂ/ಸಿಆರ್/58/2008–09, ದಿನಾಂಕ: 9ನೇ ಮೇ 2011

ಇದರ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಆಸ್ತಿಗಳು, ಸಾರ್ವಜನಿಕ ಉದ್ದೇಶಗಳಿಗಾಗಿ ಅಂದರೆ ವಾರ್ಡ್ ನಂ–172 (ಹಳೆ ವಾರ್ಡ್ ನಂ–66) ಮಡಿವಾಳದಲ್ಲಿ ಬರುವ ತಾವರೆಕೆರೆ ಮುಖ್ಯರಸ್ತೆಯಲ್ಲಿರುವ ತಾವರೆಕೆರೆ ಗ್ರಾಮದ ಸರ್ವೆ ನಂ- 108 ... ಸಂಖ್ಯೆ: 20, 20ಎ ಗಳಲ್ಲಿ ... ಮತ್ತು ರಸ್ತೆ ಅಗಲೀಕರಣಕ್ಕಾಗಿ ಹೆಚ್ಚುವರಿಯಾಗಿ ಉಪಯೋಗಿಸಿಕೊಳ್ಳಲಾಗಿದೆ ಎಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಕಂಡುಬಂದಿರುವುದರಿಂದ:

1976ರ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆಯ ಕಲಂ 177 ಮತ್ತು ಕರ್ನಾಟಕ ಅಧಿನಿಯಮ ಸಂಖ್ಯೆ:33ರ ಮೂಲಕ ತಿದ್ದುಪಡಿಯಾದ 1991ನೇ ಸಾಲಿನ ಭೂ ಸ್ವಾಧೀನ ಅಧಿನಿಯಮ [illegible] ಪ್ರಕರಣದ–(1)ನೇ ಉಪ ಪ್ರಕರಣದ ಉಪಬಂಧಗಳ ಅನುಸಾರವಾಗಿ, ಅದಕ್ಕೆ ಸಂಬಂಧಪಟ್ಟ ಎಲ್ಲರಿಗೂ ಈ ಬಗ್ಗೆ ಈ ಮೂಲಕ ನೋಟೀಸನ್ನು ಕೊಡಲಾಗಿದೆ ಹಾಗೂ [illegible] ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು- [illegible]

ಸದರಿ ಅಧಿನಿಯಮದ 3(ಸಿ) ಪ್ರಕರಣದ ಮೇರೆಗೆ ಕರ್ನಾಟಕ ಸರ್ಕಾರವು ಅಧಿನಿಯಮದ 4(1) ಪ್ರಕರಣದ ಮೇರೆಗೆ ಉಪ ಆಯುಕ್ತರು (ಭೂಸ್ವಾಧೀನ) ರವರ ಪ್ರಾಧಿಕಾರಗಳನ್ನು [illegible] ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು, ಇವರನ್ನು ನೇಮಕ ಮಾಡಿದೆ.

ಭೂಮಿಯಲ್ಲಿ/ಆಸ್ತಿಯಲ್ಲಿ ಹಿತಾಸಕ್ತಿ ಹೊಂದಿರುವ ಯಾವನೇ ವ್ಯಕ್ತಿಯು ತನ್ನ ಆಕ್ಷೇಪಣೆಗಳು ಯಾವುದಾದರೂ ಇದ್ದರೆ ಅವುಗಳನ್ನು ಅಧಿಸೂಚನೆಯು ಪ್ರಕಟವಾದ ತಾರೀಖಿನಿಂದ ಮೂವತ್ತು [illegible] ಅದಕ್ಕಿಂತ ಮುಂಚೆ ಕರ್ನಾಟಕ ಅಧಿನಿಯಮ 1961ರ 17ರ ಮೂಲಕ ತಿದ್ದುಪಡಿಯಾದ ಭೂ ಅರ್ಜನೆ ಅಧಿನಿಯಮ 1894ರ 3(ಸಿ) ಪ್ರಕರಣದ ಮೇರೆಗೆ ಉಪ ಆಯುಕ್ತರು(ಭೂಸ್ವಾಧೀನ) ರವರ ಪ್ರಾಧಿಕಾರಗಳನ್ನು [illegible] ನೇಮಕವಾದ ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು, ಇವರಿಗೆ ಲಿಖಿತ ಮೂಲಕ ಸಲ್ಲಿಸತಕ್ಕದ್ದು.

ಸದರಿ ಅರ್ಜನೆ ಉದ್ದೇಶಕ್ಕಾಗಿ ಸದರಿ ಭೂಮಿಗಳ/ಆಸ್ತಿಗಳ ಮೇಲೆ ನಿಯೋಜಿತರಾದ ಯಾವುದೇ ಮೋಜಣಿದಾರರು ಅಥವಾ ಇತರೇ ವ್ಯಕ್ತಿಗಳಿಗೆ ಅಡ್ಡಿಯನ್ನುಂಟು ಮಾಡಬಾರದೆಂದು ಅಥವಾ ಅವರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡಬಾರದೆಂದು ಸದರಿ ಭೂಮಿ/ಆಸ್ತಿಗಳಲ್ಲಿ ಹಿತಾಸಕ್ತಿ ಹೊಂದಿರುವ ಎಲ್ಲಾ ವ್ಯಕ್ತಿಗಳಿಗೆ ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಈ ಅಧಿಸೂಚನೆಯು ಪ್ರಕಟವಾದ ದಿನಾಂಕದ ನಂತರ ಉಪ ಆಯುಕ್ತರು (ಭೂಸ್ವಾಧೀನ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರುರವರ ಅನುಮತಿಯಿಲ್ಲದೆ ಮಾರಾಟ, ಗುತ್ತಿಗೆ, ಅಡಮಾನ, ವಿನಿಮಯದ ಮೂಲಕ ಅಥವಾ ಬೇರೆ ರೀತಿಯ ಮೂಲಕ ಸದರಿ ಭೂಮಿಗಳ/ಆಸ್ತಿಗಳ ವಿಲೇವಾರಿ ಮಾಡಿಕೊಂಡ ಯಾವುದೇ ಕರಾರುಗಳನ್ನು ಅಥವಾ ಅದರಲ್ಲಿ ಮಾಡಲಾದ ವೆಚ್ಚ ಅಥವಾ ಅಭಿವೃದ್ಧಿಗಳನ್ನು ಅಂತಿಮವಾಗಿ ಅರ್ಜನೆ ಮಾಡಿಕೊಳ್ಳಲಾಗುವ ಸದರಿ ಭೂಮಿ/ಆಸ್ತಿಗಳ ಅಂತಹ ಭಾಗಗಳಿಗೆ ಪರಿಹಾರಕ್ಕಾಗಿ [illegible] ಅಧಿಕಾರಿಯು ಸದರಿ ಅಧಿನಿಯಮದ(ಏಳನೇ ಖಂಡ) 2ನೇ ಪ್ರಕರಣದ ಮೇರೆಗೆ ಗಣನೆಗೆ ತೆಗೆದುಕೊಳ್ಳಬಾರದು.

ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಕೇಂದ್ರ ಕಛೇರಿ, ನರಸಿಂಹರಾಜು ವೃತ್ತ, ಬೆಂಗಳೂರು. ಇವರ ಕಛೇರಿಯಲ್ಲಿ ಭೂಮಿಗಳ/ಆಸ್ತಿಗಳ ಸ್ಕೆಚ್ [illegible] ಇಡಲಾಗಿದೆ.

ಅ ನು ಸೂ ಚಿ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ನಂ-172 (ಹಳೆ ವಾರ್ಡ್ ನಂ-66) ಮಡಿವಾಳದಲ್ಲಿ ಬರುವ ತಾವರೆಕೆರೆ ಮುಖ್ಯರಸ್ತೆಯಲ್ಲಿರುವ ತಾವರೆಕೆರೆ ಗ್ರಾಮದ ಸರ್ವೆ ನಂ- 108/3ಎ ರಲ್ಲಿನ ಸ್ವತ್ತಿನ ಸಂಖ್ಯೆ 20, 20ಎ ಗಳಲ್ಲಿ ಒಳಚರಂಡಿ ಮತ್ತು ರಸ್ತೆ ಅಗಲೀಕರಣಕ್ಕಾಗಿ ಹೆಚ್ಚುವರಿಯಾಗಿ ಉಪಯೋಗಿಸಿಕೊಂಡಿರುವ ವಿಸ್ತೀರ್ಣವನ್ನು ಭೂಸ್ವಾಧೀನಪಡಿಸಿಕೊಳ್ಳುತ್ತಿದ್ದು, ಸದರಿ ಸ್ವತ್ತುಗಳ ವಿವರ ಈ ಕೆಳಕಂಡಂತಿದೆ.

ಕ್ರ ಸಂ	ಖಾತೆದಾರರ ಹೆಸರು	ಅನುಭವದಾರರ ಹೆಸರು	ಗ್ರಾಮ, ಸರ್ವೆ ನಂಬರ್	ಸ್ವತ್ತಿನ ಸಂಖ್ಯೆ:	ಭೂಸ್ವಾಧೀನಕ್ಕೆ ಬೇಕಾಗಿರುವ ವಿಸ್ತೀರ್ಣ ಚ.ಅ.ಗಳಲ್ಲಿ	ತರಹೆ	ಚಕ್ಕು ಬಂದಿ				ಷರಾ
							ಪೂರ್ವ	ಪಶ್ಚಿಮ	ಉತ್ತರ	ದಕ್ಷಿಣ	
1	2	3	4	5	6	7	8	9	10	11	12
1	ಹನುಮಂತರೆಡ್ಡಿ	ಹನುಮಂತರೆಡ್ಡಿ	ತಾವರೆಕೆರೆ, 108/3ಎ	20ಎ ಪೈಕಿ	110.62	ಖಾಲಿ ಜಾಗ	ತಾವರೆಕೆರೆ ಮುಖ್ಯರಸ್ತೆ	ಸರ್ವೆನಂ-108/3ರ ಉಳಿಕೆ ಜಾಗ	ಸರ್ವೆನಂ-108/3ಬ ಉಳಿಕೆ ಜಾಗ	ಸರ್ವೆನಂ-108/3ರ(ಆಸ್ತಿ.ಸಂ.20ರ ಯಲಮ್ಮನ ಸ್ವತ್ತು)	–
2	ಯಲ್ಲಮ್ಮ ಕೋಂ ಹನುಮಂತರೆಡ್ಡಿ	ಯಲ್ಲಮ್ಮ ಕೋಂ ಹನುಮಂತರೆಡ್ಡಿ	ತಾವರೆಕೆರೆ, 108/3ಎ	20 ಪೈಕಿ	172.09	ಖಾಲಿ ಜಾಗ	ತಾವರೆಕೆರೆ ಮುಖ್ಯರಸ್ತೆ	ಸರ್ವೆನಂ-108ರ ಉಳಿಕೆ ಜಾಗ	ಸರ್ವೆ ನಂ-108/3ರ ಉಳಿಕೆ ಪ್ರದೇಶ (ಆಸ್ತಿ ಸಂಖ್ಯೆ:20ಎ ರ ಸ್ವತ್ತು)	ಸರ್ವೆನಂ-108/2ರ ಜಾಗ	–
				ಒಟ್ಟು	282.71						

ಬೆಂಗಳೂರು:
ದಿನಾಂಕ: 09-05-2011

ಉಪ ಆಯುಕ್ತರು (ಭೂಸ್ವಾಧೀನ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪಿಡಿ-60

OFFICE OF THE XI th AddL. CHIEF METROPOLITON MAGISTRATE, MAYOHALL UNIT, BANGALORE

DRAFT NOTIFICATION

To.No. /11, Bangalore, Dated:23.05.2011

It is hereby Notifide to the General Public that the following Unclaimed Vehicles are in the Custody of BHARATHINAGAR POLICE STATION, BANGALORE CITY. which are Siezed under the verious Crime Cases/ C-mise and NCR Cases.

Sl. No.	Type of Vehicle	Reg. No.	Engine No.	Chassis No.	P.F No.	C-mise No.
1	T.V.S.HAVY. DUTY.	KA-02-HB-5811	0D1B81357500	MD621B63049	48/10	274/10
2	T.V.S.X.L. SUPER.	KA-02-ED-9313	P3110F494362	P1110M489567	49/10	275/10
3	YAMHA ENTICER	KA-02-EF-8104	5US0032979	02H5US003279	50/10	275/10
4	KENETIK HONDA	KA-03-EG-8850	MIEUK288023	NIFUK291317	52/10	281/10
5	T.V.S.VICTOR.	KA-03-EQ-279	0F1K41266614	MD825A1641K01015	51/10	280/10
6	HERO HONDA GLMARE	KA-02-EY-5172	07A15E32895	07A16F35735	53/10	283/10
7	K.BAJAJ	CAZ-6869	30E068630	800R00549	56/10	286/10
8	SUZKI	KA-04-AN-1991	9111M13406	9111F078731	55/10	285/10
9	BAJAJ PULSER	KA-09-ES-587	DHGBLD27214	DHDALD2700	67/10	307/10
10	BAJAJ PULSER	KA-03-EM-6973	DHGBKK87347	DHVBKK87758	70/10	317/10
11	BAJAJ CHETHAK	KA-14-H-3989	-	08E94E54128	71/10	318/10
12	TVS CHAMP	KA-03-ED-8683	P1109M469754	P1109F2571B	75/10	353/10
13	KINETIC HONDA	KA-05-L-4782	NIEKM469322	NIKM479862	76/10	354/10
14	HONDA ACTIVE	KA-50-H-688	JF08E0304190	ME4JF082A68125459	77/10	358/10
15	Hero Honda CBZ	KA-04-EB-3310	01041M01866	01041C00794	78/10	359/10

Any person having rights to claim the above Vehicles Shall Approach the Bharathinagar Police with necessary Documents with in 30 Days from the date of the publication failing which the above vehicles will be Confiscated to GOVERNMENT.

Any Claims recieved after the due date will not be entertained.

XI th Addl. Chief Metropoliton Magistrate,
Mayohall Unit, Bangalore City.

PR-565

REVENUE DEPARTMENT

No.RD 94 AQB 2011, Bangalore Dated:25th May, 2011

Corrigendum to Property Attachment Notification

The Sy.No.61/1 shown at Sl.No.4 of the Schedule-1 in the Government Notification bearing No.RD 52 AQB 2009(1) Dated:16.09.2009 shall stand corrected as Sy.No.63/1 and hence forth this shall be read as "Sy.No.63/1 only".

By Order and in the name of the Governor of Karnataka,

M. VENKATESHAMURTHY

Under Secretary to Government,
Revenue Department (LAQ-2)

PR-567

COMMERCIAL TAXES DEPARTMENT

PROCEEDINGS OF THE COMMISSIONER OF COMMERCIAL TAXES, (KARNATAKA), BANGALORE-CLARIFICATION UNDER SECTION 59(4) OF THE KARNATAKA VALUE ADDED TAX ACT, 2003

Sub: KVAT Act, 2003-Clarification under Section 59(4) regarding the rate of tax applicable on certain commodities-reg.

Ref: Application Dated:22.11.2010 of Varsha Sales Corporation, No.154/1, 1st Floor, 4th Main, 8th Cross, Chamarajapet, Bangalore-560 018.

In the application cited above, Varsha Sales Corporation, Bangalore, has sought clarification regarding the rate of tax applicable on certain commodities.

2. Section 59(4) of the Karnataka Value Added Tax Act, 2003 empowers the Commissioner of Commercial Taxes to clarify the rate of tax payable under the Act, if he considers it necessary or expedient so to do, for the purpose of maintaining uniformity in the work of assessments and collection of revenue. It is examined and found that the clarification requested by the petitioner is within the scope of the aforesaid provision and it is necessary that the clarification be issued for the purpose of maintaining uniformity in the work of assessments and collection of revenue.

3. Hence the following clarification is issued.

CLARIFICATION NO.CLR.CR.154/10-11, DATED:03.02.2011

It is hereby clarified that the rates of tax applicable on the following goods are as indicated under:

Sl. No.	Goods	Rate of tax/ Section
1.	Anoo's henna	13.5% under Section 4(1)(b) of the KVAT Act, 2003.
2.	Anoo's hair care	
3.	Anoo's fair & fresh	
[illegible]	Anoo's herbal hair oil	

PRADEEP SINGH KHAROLA

Commissioner of Commercial Taxes,

(Karnataka), Bangalore.

ಕೃಷಿ ಮಾರಾಟ ಇಲಾಖೆ

ಕೃಷಿ ಮಾರಾಟ ನಿರ್ದೇಶಕರ ಕಛೇರಿ, ನಂ.16, 2ನೇ ರಾಜಭವನ ರಸ್ತೆ, ಬೆಂಗಳೂರು

ಅಧಿಸೂಚನೆ

ಸಂಖ್ಯೆ: ಕೃಮಾಇ/417/ನಿಯವಿ/2011, ಬೆಂಗಳೂರು, ದಿನಾಂಕ:25.02.2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 6(2) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕದಲ್ಲಿ ಕೃಷಿ ಮಾರಾಟ ನಿರ್ದೇಶಕನಾಗಿರುವ ವಿ.ಬಿ. ಪಾಟೀಲ್ ಆದ ನಾನು ಎಳನೀರು ಉತ್ಪನ್ನ ಮಾರಾಟ ನಿಯಂತ್ರಣಕ್ಕಾಗಿ ಮದ್ದೂರು ತಾಲ್ಲೂಕಿನ ಗುಡಿಗೆರೆ ಗ್ರಾಮದ ಪರಿಮಿತಿಯೊಳಗಿನ ಪ್ರದೇಶವನ್ನು ಉಪ ಮಾರುಕಟ್ಟೆ ಎಂದು ಮತ್ತು ಈ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಸ್ಥಳವನ್ನು ಉಪ ಮಾರುಕಟ್ಟೆ ಪ್ರಾಂಗಣವೆಂದು ಈ ಮೂಲಕ ಘೋಷಿಸಿದ್ದೇನೆ.

ಅನುಸೂಚಿ

ಮದ್ದೂರು ತಾಲ್ಲೂಕಿನ ಗುಡಿಗೆರೆ ಗ್ರಾಮದ ಸರ್ವೆ ನಂ.54 ರಲ್ಲಿನ 2.32 ಎಕರೆ ಜಮೀನಿನ ವ್ಯಾಪ್ತಿಯಲ್ಲಿ ವ್ಯಾಪಾರ ವಹಿವಾಟು ನಡೆಯುವ [illegible]

[illegible]

ಪಶ್ಚಿಮಕ್ಕೆ: ಬೋರೆಗೌಡ ಚಿಕ್ಕಸಿದ್ದೆಗೌಡರ ಜಮೀನು

[illegible]

[illegible] ಜಮೀನು

[illegible]

ವಿ.ಬಿ. ಪಾಟೀಲ್,

ನಿರ್ದೇಶಕರು.

ಗಣಿ ಮತ್ತು ಭೂವಿಜ್ಞಾನ ಇಲಾಖೆ, ಬೆಂಗಳೂರು, ನಿರ್ದೇಶಕರ ನಡವಳಿ

[illegible], ಸಿರಾ ತಾಲ್ಲೂಕು, ಮದ್ದಕ್ಕನಹಳ್ಳಿ ಗ್ರಾಮದ ಸರ್ವೆ ನಂ.26ರಲ್ಲಿ 1-30 ಎಕರೆಗೆ ಗ್ರೇ ಗ್ರಾನೈಟ್‌ಗಾಗಿ ಶ್ರೀಮತಿ ಜಯಮ್ಮ ರವರಿಗೆ ಮಂಜೂರಾಗಿದ್ದ ಕಲ್ಲು ಗಣಿ ಗುತ್ತಿಗೆ ಸಂಖ್ಯೆ: 788ರ ಗುತ್ತಿಗೆಯನ್ನು ಪುನರ್ ಸ್ಥಾಪಿಸಿರುವ ಬಗ್ಗೆ.

[illegible]: ಸರ್ಕಾರದ ಪತ್ರ ಸಂಖ್ಯೆ: ಸಿಐ 67 ಎಂಎಂಎನ್ 2011, ಬೆಂಗಳೂರು, ದಿನಾಂಕ:05.03.2011.

ತುಮಕೂರು ಜಿಲ್ಲೆ, ಸಿರಾ ತಾಲ್ಲೂಕು, ಮದ್ದಕ್ಕನಹಳ್ಳಿ ಗ್ರಾಮದ ಸರ್ವೆ ನಂ.26ರಲ್ಲಿ 1-30 ಎಕರೆ ವಿಸ್ತೀರ್ಣದಲ್ಲಿ ಗ್ರೇ ಗ್ರಾನೈಟ್‌ಗಾಗಿ ಕಲ್ಲು ಗಣಿ [illegible] ಗುತ್ತಿಗೆಯನ್ನು ಶ್ರೀಮತಿ ಜಯಮ್ಮ ರವರ ಹೆಸರಿನಲ್ಲಿ ದಿನಾಂಕ:28.02.2007 ರಿಂದ 05 ವರ್ಷಗಳಿಗಾಗಿ ಗುತ್ತಿಗೆ ಮಂಜೂರು [illegible] ಗುತ್ತಿಗೆ ಮೇಲಿನ ಬಾಕಿಯನ್ನು ಪಾವತಿಸದೆ ಇದ್ದ ಕಾರಣ ದಿನಾಂಕ:07.01.2011 ರಿಂದ ಜಾರಿಗೆ ಬರುವಂತೆ [illegible]ಜಿಸಿರುವ ಅಧಿಕಾರದ ಅಡಿಯಲ್ಲಿ ಗುತ್ತಿಗೆಯನ್ನು ರದ್ದುಗೊಳಿಸಲಾಗಿತ್ತು.

[illegible] ಗುತ್ತಿಗೆದಾರರು ಪರಿಷ್ಕರಣ ಅರ್ಜಿಯನ್ನು ನಿಯಮ 53(2)ರ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮ 1994 ರಂತೆ [illegible] ಹಾಗೂ ಗುತ್ತಿಗೆ ಮೇಲಿನ ಪೂರ್ಣ ಬಾಕಿಯನ್ನು ಪಾವತಿಸಿರುವುದರಿಂದ ಸರ್ಕಾರವು ಉಲ್ಲೇಖಿತ ಪತ್ರದಲ್ಲಿ ಅರ್ಜಿಯನ್ನು [illegible]ಯನ್ನು ಪುನರ್ ಸ್ಥಾಪಿಸಲು ಆದೇಶಿಸಿರುವುದರಿಂದ ಈ ಕೆಳಕಂಡ ಆದೇಶ ಮಾಡಲಾಗಿದೆ.

ಆದೇಶ

ಸಂಖ್ಯೆ: ಗಭೂಇ/ಡಿಸಿಬಿ/ಕಗಗು/788/ 2010-11/17600, ದಿನಾಂಕ:15.03.2011

[illegible] ಮತ್ತು ಭೂವಿಜ್ಞಾನ ಇಲಾಖೆಯ, ನಿರ್ದೇಶಕರಿಗೆ ಸರ್ಕಾರದ ಪತ್ರದ ದಿನಾಂಕ:05.03.2011ರಲ್ಲಿ ನಿರ್ದೇಶಿಸಿರುವಂತೆ ಜಿಲ್ಲೆ, ತುಮಕೂರು [illegible] ಗ್ರಾಮದ ಸರ್ವೆ ನಂ.26ರಲ್ಲಿ 1-30 ಎಕರೆ ವಿಸ್ತೀರ್ಣದಲ್ಲಿ ಗ್ರೇ ಗ್ರಾನೈಟ್‌ಗಾಗಿ ಕಲ್ಲು ಗಣಿ ಗುತ್ತಿಗೆ ಸಂಖ್ಯೆ:788ರ ಗುತ್ತಿಗೆಯನ್ನು

ಶ್ರೀಮತಿ ಜಯಮ್ಮ ರವರ ಹೆಸರಿನಲ್ಲಿ ಮಂಜೂರಾಗಿದ್ದ ಕಲ್ಲು ಗುತ್ತಿಗೆಯನ್ನು ಗುತ್ತಿಗೆ ರದ್ದುಗೊಳಿಸಿದ ದಿನಾಂಕ:07.01.2011 ರಿಂದ ಗುತ್ತಿಗೆಯನ್ನು ಕರ್ನಾಟಕ ಉಪ ಖನಿಜ ರಿಯಾಯತಿ ನಿಯಮ 1994ರ ನಿಯಮಗಳ ಷರತ್ತಿಗೆ ಒಳಪಡಿಸಿ ಕಲ್ಲು ಗಣಿ ಗುತ್ತಿಗೆ ಅವಧಿ ಹಾಗೂ ಇನ್ನಿತರ ಷರತ್ತಿನಂತೆ ಗುತ್ತಿಗೆಯನ್ನು ಪುನರ್ ಸ್ಥಾಪಿಸಲಾಗಿದೆ.

ನಿರ್ದೇಶಕರು,
ಪಿ.ಆರ್.351 ಗಣಿ ಮತ್ತು ಭೂವಿಜ್ಞಾನ ಇಲಾಖೆ,
ಬೆಂಗಳೂರು.

ಗಣಿ ಮತ್ತು ಭೂವಿಜ್ಞಾನ ಇಲಾಖೆ, ಬೆಂಗಳೂರು, ನಿರ್ದೇಶಕರ ನಡವಳಿ

ವಿಷಯ: ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಚನ್ನಸಂದ್ರ ಗ್ರಾಮದಲ್ಲಿ ಗ್ರೀನ್ ಗ್ರಾನೈಟ್‌ಗಾಗಿ ಶ್ರೀ ಎಂ.ಸಂಪತ್‌ಕುಮಾರ್ ರವರಿಗೆ ಮಂಜೂರಾಗಿದ್ದ ಕಲ್ಲು ಗಣಿ ಗುತ್ತಿಗೆ ಸಂಖ್ಯೆ:700ರ ಗುತ್ತಿಗೆಯನ್ನು ಗುತ್ತಿಗೆ ಮೇಲಿನ ಬಾಕಿ ರೂ.2,73,884/- ಗಳನ್ನು ಪಾವತಿಸದೆ ಇದ್ದ ಕಾರಣ ರದ್ದುಗೊಳಿಸುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಅಂತಿಮ ನೋಟೀಸ್ ಪತ್ರ ಸಂಖ್ಯೆ: ಗಭೂಇ/ ಡಿಸಿಬಿ/ ಕಗಗು/ 700/ 2008-09/ 12618-19, ದಿನಾಂಕ:16.01.2009.

2) ಉಪ ನಿರ್ದೇಶಕರು, ರಾಮನಗರ ರವರ 2009-10ನೇ ಸಾಲಿನ ಲೆಕ್ಕ ಪರಿಶೀಲನಾ ವರದಿ.

ಪ್ರಸ್ತಾವನೆ:

ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಚನ್ನಸಂದ್ರ ಗ್ರಾಮದ ಸರ್ವೆ ನಂ.9ರಲ್ಲಿ ಶ್ರೀ ಎಂ. ಸಂಪತ್ ಕುಮಾರ್ ರವರಿಗೆ ಗ್ರೀನ್ ಗ್ರಾನೈಟ್‌ಗಾಗಿ 2-19 ಎಕರೆಗೆ ದಿನಾಂಕ:01.04.2005 ರಿಂದ 10 ವರ್ಷಗಳಿಗಾಗಿ ಕಲ್ಲು ಗಣಿ ಗುತ್ತಿಗೆ ಸಂಖ್ಯೆ:700ರಲ್ಲಿ ಗುತ್ತಿಗೆಯನ್ನು ಮಂಜೂರು ಮಾಡಲಾಗಿತ್ತು. ಈ ಕಛೇರಿಯ ಉಲ್ಲೇಖಿತ ಪತ್ರದಂತೆ ಗುತ್ತಿಗೆದಾರರಿಗೆ ನಿಯಮಾನುಸಾರ ಅಂತಿಮ ನೋಟೀಸ್‌ನ್ನು ನೀಡಿ 2007-08ರ ಮಾರ್ಚ್ ಅಂತ್ಯದವರೆಗೆ ಬಾಕಿ ರೂ.1,79,127/-ಗಳನ್ನು 60 ದಿನಗಳೊಳಗೆ ಸಂದಾಯಿಸುವಂತೆ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮ 1994ರ ನಿಯಮ 39ರಡಿ ನೋಟೀಸು ಜಾರಿಗೊಳಿಸಲಾಗಿತ್ತು. 2009-10ನೇ ಸಾಲಿನ ಲೆಕ್ಕ ಪರಿಶೀಲನಾ ವರದಿಯಂತೆ ಗುತ್ತಿಗೆದಾರರು ಬಾಕಿ ರೂ.2,73,884/- ಗಳನ್ನು ಪಾವತಿಸಬೇಕಾಗಿರುತ್ತದೆ ಎಂದು ಉಪ ನಿರ್ದೇಶಕರು, ರಾಮನಗರ ರವರು ವರದಿ ಮಾಡಿರುತ್ತಾರೆ. ಆದರೆ ಸದರಿ ಗುತ್ತಿಗೆದಾರರಿಂದ ಇದೂವರೆವಿಗೂ ಬಾಕಿ ಪಾವತಿಯಾಗಿರುವುದಿಲ್ಲ ಹಾಗೂ ಗುತ್ತಿಗೆಯು ನಿಷ್ಕ್ರಿಯವಾಗಿರುವುದಾಗಿ ಉಪ ನಿರ್ದೇಶಕರು, ರಾಮನಗರ ರವರು ವರದಿ ಮಾಡಿರುತ್ತಾರೆ.

ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ, ನಿರ್ದೇಶಕರು ಗಮನಕ್ಕೆ ಬಂದಂತೆ ಗುತ್ತಿಗೆದಾರರು ಮೇಲಿನ ಉಲ್ಲೇಖಿತ ನೋಟೀಸ್‌ಗೆ ಯಾವ ರೀತಿಯು ಸ್ಪಂದಿಸಿಲ್ಲದ ಕಾರಣ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮ 1994ರ ನಿಯಮ 39ರಡಿ ಸರ್ಕಾರದ ಅಧಿಸೂಚನೆ III ಸಂಖ್ಯೆ: ಸಿಐ:418:ಎಂ.ಆರ್.ಸಿ:92, ದಿನಾಂಕ:02.07.1994 ಪ್ರತ್ಯೋಜಿಸಿರುವ ಅಧಿಕಾರದಂತೆ ಕಲ್ಲು ಗಣಿ ಗುತ್ತಿಗೆ ಸಂಖ್ಯೆ: 700ರ ಗುತ್ತಿಗೆಯನ್ನು ರದ್ದುಪಡಿಸುವ ಕ್ರಮ ಜರುಗಿಸುವುದು ಅವಶ್ಯಕವಾಗಿರುವುದರಿಂದ ಈ ಕೆಳಗಿನಂತೆ ಆದೇಶಿಸಿದೆ.

ಆದೇಶ

ಸಂಖ್ಯೆ: ಗಭೂಇ/ಡಿಸಿಬಿ/ಕಗಗು/700/ 2010-11/17636, ದಿನಾಂಕ:16.03.2011

ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮ 1994ರ ನಿಯಮ 39ರಂತೆ ಗಣಿ ಮತ್ತು ಭೂವಿಜ್ಞಾನ ಇಲಾಖೆಯ, ನಿರ್ದೇಶಕರಿಗೆ ಪ್ರತ್ಯೋಜಿಸಿರುವ ಅಧಿಕಾರದಡಿಯಲ್ಲಿ ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಚನ್ನಸಂದ್ರ ಗ್ರಾಮದ ಸರ್ವೆ ಸಂಖ್ಯೆ:9 ರಲ್ಲಿ 2-19 ಎಕರೆಗೆ ಗ್ರೀನ್ ಗ್ರಾನೈಟ್‌ಗಾಗಿ ನೀಡಿದ್ದ ಕಲ್ಲು ಗಣಿ ಗುತ್ತಿಗೆ ಸಂಖ್ಯೆ: 700ರ ಗುತ್ತಿಗೆಯನ್ನು ಗುತ್ತಿಗೆ ಮೇಲಿನ ಬಾಕಿ ಪಾವತಿಸದೇ ಇರುವ ಕಾರಣ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ ಹಾಗೂ ಈ ಗುತ್ತಿಗೆ ಮಂಜೂರಾತಿ ಸಮಯದಲ್ಲಿ ಸಲ್ಲಿಸಿದ್ದ ಭದ್ರತಾ ಠೇವಣಿಯನ್ನು ಇಲಾಖೆಯು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

ನಿರ್ದೇಶಕರು,
ಪಿ.ಆರ್.352 ಗಣಿ ಮತ್ತು ಭೂವಿಜ್ಞಾನ ಇಲಾಖೆ,
ಬೆಂಗಳೂರು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ, ಬಾಗಲಕೋಟೆ

ಅಧಿಸೂಚನೆ

ಸಂಖ್ಯೆ: ಇ2: ಪ್ರಾಶಾಶಿ:ಗೈರು ಹಾಜರಿ: ಶಿಸ್ತುಕ್ರಮ:46:10-11, ದಿನಾಂಕ:05.03.2011

ವಿಷಯ: ಶಾಲಾ ಕೆಲಸಕ್ಕೆ ದೀರ್ಘಾವಧಿಯಿಂದ ಅನಧಿಕೃತ ಗೈರು ಉಳಿದ ಶ್ರೀಮತಿ ಭಾರತಿ ಎಂ. ಸಹಿ.ಸ.ಕಿ.ಪ್ರಾ.ಶಾಲೆ ಕಿತ್ತೂರ ತೋಟ ಹಿಪ್ಪರಗಿ, ತಾ: ಜಮಖಂಡಿ, ಇವರ ಮೇಲೆ ಶಿಸ್ತು ಕ್ರಮ ಕುರಿತು.

ಉಲ್ಲೇಖ: 1) ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಮಖಂಡಿ ಇವರ ವರದಿ ದಿನಾಂಕ:02.02.2011.

2) ದಿನಾಂಕ:23.02.2011ರ ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ಪ್ರಕಟವಾದ ನೋಟೀಸು.

3) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ:18:ಸೇಇವಿ:2001 ಬೆಂಗಳೂರು ದಿನಾಂಕ:14.09.2001.

ಪ್ರಸ್ತಾವನೆ:

ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಮಖಂಡಿ ಇವರು ತಮ್ಮ ವಲಯದಲ್ಲಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕಿತ್ತೂರ ತೋಟ ಹಿಪ್ಪರಗಿ, ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶ್ರೀಮತಿ ಭಾರತಿ ಎಂ. ಸಹ-ಶಿಕ್ಷಕರು, ಇವರು ದಿನಾಂಕ:31.12.2010 ರಿಂದ ಶಾಲಾ ಕೆಲಸಕ್ಕೆ ಅನಧಿಕೃತ ಗೈರು ಉಳಿದಿದ್ದು ಇವರಿಗೆ ಸೇವೆಗೆ ಹಾಜರಾಗುವಂತೆ ಸೂಚಿಸಿ ಸೂಚನಾ ಪತ್ರ ಕಳುಹಿಸಿದರೂ ಸೇವೆಗೆ ಹಾಜರಾಗಿಲ್ಲ. ಇವರ ಅನಧಿಕೃತ ಗೈರು-ಹಾಜರಾತಿಯಿಂದ ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆಯಾಗಿರುವುದಾಗಿ ಉಲ್ಲೇಖ 01 ರಡಿ ಈ ಕಛೇರಿಗೆ ವರದಿ ಸ್ವೀಕೃತವಾಗಿರುತ್ತದೆ. ಸದರಿ ಶಿಕ್ಷಕರ ಮಾಹಿತಿಗೆ ಉಲ್ಲೇಖ 2 ರಡಿ ದಿನಾಂಕ:23.02.2011ರ ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಮೂಲಕ ತಿಳುವಳಿಕೆ ನೀಡಲಾಗಿದ್ದರೂ ಈ ವರೆಗೂ ಸದರಿ ಶಿಕ್ಷಕರು ಸೇವೆಗೆ ಹಾಜರಾಗುವ ಬಗ್ಗೆ ಪ್ರತಿಕ್ರಿಯಿಸಿರುವುದಿಲ್ಲ. ಇದರಿಂದ ಇವರಿಗೆ ಸೇವೆಯಲ್ಲಿ ಮುಂದುವರೆಯುವ ಇಚ್ಛೆ ಇಲ್ಲವೆಂಬುದಾಗಿ ಪರಿಗಣಿಸಿ ಹಾಗೂ ಇವರ ಗೈರು ಹಾಜರಾತಿಯಿಂದ ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆಯಾಗಿರುವುದನ್ನು ಗಮನಿಸಿ ಸದರಿ ಶಿಕ್ಷಕರ ಮೇಲೆ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿಷದೀಕರಿಸಿದಂತೆ ಶಾಲಾ ಕೆಲಸಕ್ಕೆ ದೀರ್ಘಾವಧಿಯಿಂದ ಅನಧಿಕೃತ ಗೈರು ಉಳಿದು ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆ ಮಾಡಿದ ಶ್ರೀಮತಿ ಭಾರತಿ ಎಂ, ಸಹ-ಶಿಕ್ಷಕರು, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕಿತ್ತೂರ ತೋಟ ಹಿಪ್ಪರಗಿ, ತಾ: ಜಮಖಂಡಿ ಇವರ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ, 1957)ರ ನಿಯಮಗಳ ನಿಯಮ 9(2) ಸಿ ದಲ್ಲಿಯ ಅಧಿಕಾರ ಚಲಾಯಿಸಿ ಉಲ್ಲೇಖ 03ರ ಸರ್ಕಾರದ ಅಧಿಸೂಚನೆ ಮತ್ತು ಕ.ನಾ.ಸೇ. ನಿಯಮಾವಳಿಗಳ ನಿಯಮ 108 ರನ್ವಯ ಕೂಡಲೇ ಜಾರಿಗೆ ಬರುವಂತೆ ಸದರಿ ಶಿಕ್ಷಕರನ್ನು ಸೇವೆಯಿಂದ ವಜಾಗೊಳಿಸಿ ಆದೇಶಿಸಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಜಮಖಂಡಿ ಇವರು ಸದರಿ ಆದೇಶದ ವಿವರವನ್ನು ಸಂಬಂಧಿಸಿದ ಶಿಕ್ಷಕರ ಸೇವಾಪುಸ್ತಕದಲ್ಲಿ ತಪ್ಪದೇ ನಮೂದಿಸಿ ಮುಂದಿನ ಅವಶ್ಯಕ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

ಉಪನಿರ್ದೇಶಕರು (ಆಡಳಿತ),
ಸಾರ್ವಜನಿಕ ಶಿಕ್ಷಣ ಇಲಾಖೆ, ಬಾಗಲಕೋಟೆ.

ಪಿ.ಆರ್.332

ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ, ಬಾಗಲಕೋಟೆ

ಅಧಿಸೂಚನೆ

ಸಂಖ್ಯೆ: ಇ2: ಪ್ರಾಶಾಶಿ:ಗೈರು ಹಾಜರಿ: ಶಿಸ್ತುಕ್ರಮ:46:10-11/, ದಿನಾಂಕ:05.03.2011

ವಿಷಯ: ಶಾಲಾ ಕೆಲಸಕ್ಕೆ ದೀರ್ಘಾವಧಿಯಿಂದ ಅನಧಿಕೃತ ಗೈರು ಉಳಿದ ಶ್ರೀಮತಿ ಎಚ್.ಸಿ. ಮಂಜುಳಾ, ಸಹಿ.ಸ.ಹಿ.ಪ್ರಾ.ಶಾಲೆ ರಂಜಣಗಿ, ತಾ: ಮುಧೋಳ ಇವರ ಮೇಲೆ ಶಿಸ್ತು ಕ್ರಮ ಕುರಿತು.

ಉಲ್ಲೇಖ: 1) ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಧೋಳ ಇವರ ವರದಿ ದಿನಾಂಕ:24.01.2011.
2) ದಿನಾಂಕ:23.02.2011ರ ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ಪ್ರಕಟವಾದ ನೋಟೀಸು.
3) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ:18:ಸೇಇವಿ:2001 ಬೆಂಗಳೂರು ದಿನಾಂಕ:14.09.2001.

ಪ್ರಸ್ತಾವನೆ:

ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಧೋಳ ಇವರು ತಮ್ಮ ವಲಯದಲ್ಲಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ರಂಜಣಗಿ, ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶ್ರೀಮತಿ ಎಚ್.ಸಿ. ಮಂಜುಳಾ, ಸಹ-ಶಿಕ್ಷಕರು, ಇವರು ದಿನಾಂಕ:01.06.2010 ರಿಂದ ಶಾಲಾ ಕೆಲಸಕ್ಕೆ ಅನಧಿಕೃತ ಗೈರು ಉಳಿದಿದ್ದು ಇವರಿಗೆ ಸೇವೆಗೆ ಹಾಜರಾಗುವಂತೆ ಸೂಚಿಸಿ ಸೂಚನಾ ಪತ್ರ ಕಳುಹಿಸಿದರೂ ಸೇವೆಗೆ ಹಾಜರಾಗಿಲ್ಲ. ಇವರ ಅನಧಿಕೃತ ಗೈರು-ಹಾಜರಾತಿಯಿಂದ ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆಯಾಗಿರುವುದಾಗಿ ಉಲ್ಲೇಖ 01 ರಡಿ ಈ ಕಛೇರಿಗೆ ವರದಿ ಸ್ವೀಕೃತವಾಗಿರುತ್ತದೆ. ಸದರಿ ಶಿಕ್ಷಕರ ಮಾಹಿತಿಗೆ ಉಲ್ಲೇಖ 2 ರಡಿ ದಿನಾಂಕ:23.02.2011ರ ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಮೂಲಕ ತಿಳುವಳಿಕೆ ನೀಡಲಾಗಿದ್ದರೂ ಈ ವರೆಗೂ ಸದರಿ ಶಿಕ್ಷಕರು ಸೇವೆಗೆ ಹಾಜರಾಗುವ ಬಗ್ಗೆ ಪ್ರತಿಕ್ರಿಯಿಸಿರುವುದಿಲ್ಲ. ಇದರಿಂದ ಇವರಿಗೆ ಸೇವೆಯಲ್ಲಿ ಮುಂದುವರೆಯುವ ಇಚ್ಛೆ ಇಲ್ಲವೆಂಬುದಾಗಿ ಪರಿಗಣಿಸಿ ಹಾಗೂ ಇವರ ಗೈರು ಹಾಜರಾತಿಯಿಂದ ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆಯಾಗಿರುವುದನ್ನು ಗಮನಿಸಿ ಸದರಿ ಶಿಕ್ಷಕರ ಮೇಲೆ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿಷದೀಕರಿಸಿದಂತೆ ಶಾಲಾ ಕೆಲಸಕ್ಕೆ ದೀರ್ಘಾವಧಿಯಿಂದ ಅನಧಿಕೃತ ಗೈರು ಉಳಿದು ವಿದ್ಯಾರ್ಥಿಗಳ ಪಾಠ ಬೋಧನೆಗೆ ತೊಂದರೆ ಮಾಡಿದ ಶ್ರೀಮತಿ ಎಚ್.ಸಿ. ಮಂಜುಳಾ. ಸಹಿ.ಸ.ಹಿ.ಪ್ರಾ.ಶಾಲೆ ರಂಜಣಗಿ, ತಾ: ಮುಧೋಳ ಇವರ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ, 1957)ರ ನಿಯಮಗಳ ನಿಯಮ 9(2) ಸಿ ದಲ್ಲಿಯ ಅಧಿಕಾರ ಚಲಾಯಿಸಿ ಉಲ್ಲೇಖ 03ರ ಸರ್ಕಾರದ ಅಧಿಸೂಚನೆ ಮತ್ತು ಕ.ನಾ.ಸೇ. ನಿಯಮಾವಳಿಗಳ ನಿಯಮ 108 ರನ್ವಯ ಕೂಡಲೇ ಜಾರಿಗೆ ಬರುವಂತೆ ಸದರಿ ಶಿಕ್ಷಕರನ್ನು ಸೇವೆಯಿಂದ ವಜಾಗೊಳಿಸಿ ಆದೇಶಿಸಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಧೋಳ ಇವರು ಸದರಿ ಆದೇಶದ ವಿವರವನ್ನು ಸಂಬಂಧಿಸಿದ ಶಿಕ್ಷಕರ ಸೇವಾಪುಸ್ತಕದಲ್ಲಿ ತಪ್ಪದೇ ನಮೂದಿಸಿ ಮುಂದಿನ ಅವಶ್ಯಕ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

ಉಪನಿರ್ದೇಶಕರು (ಆಡಳಿತ),
ಸಾರ್ವಜನಿಕ ಶಿಕ್ಷಣ ಇಲಾಖೆ, ಬಾಗಲಕೋಟೆ.

ಪಿ.ಆರ್.333

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಮೇ ೨೬, ೨೦೧೧ (ಜೇಷ್ಠ ೫, ಶಕ ವರ್ಷ ೧೯೩೩)	ಸಂಚಿಕೆ ೨೧

ಭಾಗ – ೪ಎ

ರಾಜ್ಯದ ವಿಧೇಯಕಗಳ ಮತ್ತು ಅವುಗಳ ಮೇಲೆ ಪರಿಶೀಲನಾ ಸಮಿತಿಯ ವರದಿಗಳು, ರಾಜ್ಯದ ಅಧಿನಿಯಮಗಳು ಮತ್ತು ಅಧ್ಯಾದೇಶಗಳು, ಕೇಂದ್ರದ ಮತ್ತು ರಾಜ್ಯದ ಶಾಸನಗಳ ಮೇರೆಗೆ ರಾಜ್ಯ ಸರ್ಕಾರವು ಹೊರಡಿಸಿದ ಸಾಮಾನ್ಯ ಶಾಸನಬದ್ಧ ನಿಯಮಗಳು ಮತ್ತು ರಾಜ್ಯಾಂಗದ ಮೇರೆಗೆ ರಾಜ್ಯಪಾಲರು ಮಾಡಿದ ನಿಯಮಗಳು, ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯವು ಮಾಡಿದ ನಿಯಮಗಳು.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 149 ಎಂಆರ್‌ಇ 2011, ಬೆಂಗಳೂರು, ದಿನಾಂಕ : 05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1) (ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಲಕ್ಷ್ಮೇಶ್ವರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ :

ಕ್ರ. ಸಂ.	ಸದಸ್ಯರ ಹೆಸರು
01	ಶ್ರೀ ನಿಂಗಪ್ಪ ಹೊನ್ನಕೇರಪ್ಪ ಬನ್ನಿ, ಲಕ್ಷ್ಮೇಶ್ವರ, ಶಿರಹಟ್ಟಿ ತಾಲ್ಲೂಕು.
02	ಶ್ರೀ ಚಂಬಣ್ಣಾ ನಾಗಪ್ಪ ಬಾಳಿಕಾಯಿ, ಲಕ್ಷ್ಮೇಶ್ವರ, ಶಿರಹಟ್ಟಿ ತಾಲ್ಲೂಕು.
03	ಶ್ರೀ ಸುರೇಶ್‌ಗೌಡ ಬಿನ್ ವೆಂಕನಗೌಡ ಪಾಟೀಲ್, ಸಾರಿಕೊಪ್ಪ, ಶಿರಹಟ್ಟಿ ತಾಲ್ಲೂಕು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.440

ನಂಜುಂಡಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ–2, ಸಹಕಾರ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 145 ಎಂಆರ್‌ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಬೇಲೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ :

ಕ್ರ.ಸಂ.	ಸದಸ್ಯರ ಹೆಸರು
01	ಶ್ರೀ ನಾಗೇಶ್ ಬಿನ್ ಬಾಬು ಶೆಟ್ಟಿ, ಅರೇಹಳ್ಳಿ ಗ್ರಾಮ & ಅಂಚೆ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ.
02	ಶ್ರೀ ನಿಜಗುಣ ಬಿನ್ ಲೇ॥ ನಂಜೇಗೌಡ, ಮಾಯಗೊಂಡನಹಳ್ಳಿ, ಚಟಚಟನಹಳ್ಳಿ ಅಂಚೆ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ.
03	ಶ್ರೀ ಆನಂದ್ ಬಿನ್ ಸಗನೇ ತಿಮ್ಮಯ್ಯ, ನಂಜಾಪುರ ಹಳ್ಳಿ, ಮತ್ತಿಕಟ್ಟೆ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಪಿ.ಆರ್.441

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಹಕಾರ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 147 ಎಂಆರ್ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಹೊನ್ನಾವರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ :

ಕ್ರ. ಸಂ.	ಸದಸ್ಯರ ಹೆಸರು
01	ಶ್ರೀ ಪ್ರಭು ಈಶ್ವರ ಹಳ್ಳೇರ್, ಸಂಶಿ ಅಂಚೆ (ಕುದ್ರಗಿ ಪಂಚಾಯತ್), ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
02	ಶ್ರೀ ಮಂಜುನಾಥ ಮಂಜಪ್ಪ ನಾಯಕ, ಮಡಿಕೇರಿ, ಬೈಲೂರು ಅಂಚೆ, ಭಟ್ಕಳ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
03	ಶ್ರೀಮತಿ ವಿಜಯ ಆನಂದ ನಾಯಕ, ಅನಂತವಾಡಿ, ಮುರುಡೇಶ್ವರ ಅಂಚೆ, ಭಟ್ಕಳ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಪಿ.ಆರ್.448

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಹಕಾರ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 143 ಎಂಆರ್ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ರಾಮದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ.

ಕ್ರ.ಸಂ.	ಸದಸ್ಯರ ಹೆಸರು
01	ಶ್ರೀ ಜಗದೀಶ್ ಗಣಶ್ಯಾಮದಾಸ್ ಲಾಹೊಟಿ, ಸಾ॥ ರಾಮದುರ್ಗ.

ಕ್ರ.ಸಂ.	ಸದಸ್ಯರ ಹೆಸರು
02	ಶ್ರೀ ಗೋವಿಂದಪ್ಪ ಪಾನಾಯಕ್, ಸಾ॥ ಹೊಸಕೋಟೆ.
03	ಶ್ರೀ ಈರಪ್ಪ ಸಂಗಪ್ಪ ಮಾಂತನ್ನವರ, ಸಾ॥ ದಾಡಿಬಾಯಿ ತೋಟದ ಮನೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಹಕಾರ ಇಲಾಖೆ.

ಪಿ.ಆರ್.446

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 144 ಎಂಆರ್ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಬೀದರ್ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ :

ಕ್ರ. ಸಂ.	ಸದಸ್ಯರ ಹೆಸರು
01	ಶ್ರೀ ಜಗನ್ನಾಥ್ ಪಾಟೀಲ್ ಬಿನ್ ಸಿದ್ಧರಾಮಪ್ಪ ಪಾಟೀಲ್, ಸಂಗುಳಿಗಿ, ಬೀದರ್ ತಾಲ್ಲೂಕು.
02	ಶ್ರೀ ರಾಜಕುಮಾರ್ ಬಿನ್ ಸಿದ್ಧರಾಮಪ್ಪ ತೋರನೆ, ಯರನಳ್ಳಿ 'ಡಿ', ಬೀದರ್ ತಾಲ್ಲೂಕು.
03	ಶ್ರೀ ಅರ್ಜುನ್ ಬಿನ್ ಮಾಹಾಳಗೊಂಡ, ಬೆನಕನಳ್ಳಿ, ಬೀದರ್ ತಾಲ್ಲೂಕು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಹಕಾರ ಇಲಾಖೆ.

ಪಿ.ಆರ್.447

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 142 ಎಂಆರ್ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಸುರಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ.

ಕ್ರ. ಸಂ.	ಸದಸ್ಯರ ಹೆಸರು
01	ಶ್ರೀ ಗ್ಯಾನಚಂದ್ ಚಂಪಲಾಲ್ ಜೈನ್, ಮುಜುಂದಾರ್ ಗಲ್ಲಿ, ಸುರಪುರ.
02	ಶ್ರೀ ಗುರುರಾಜ ತಂದೆ ರಾಮಣ್ಣ ಸುರಪುರ, ಬೋವಿಗಲ್ಲಿ, ಮಾರ್ಕೆಟ್ ರಸ್ತೆ, ಸುರಪುರ.
03	ಶ್ರೀಮತಿ ಶಕುಂತಲಾಬಾಯಿ ಗಂಡ ಬಲಭೀಮರಾಯ (ಅಂಗಡಿ), ಜೈರಮಡ್ಡಿ ಕಬಡಗೇರಾಓಣಿ, ಕಡ್ಲೆಪ್ಪಮಠದಹತ್ತಿರ, ಸುರಪುರ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಹಕಾರ ಇಲಾಖೆ.

ಪಿ.ಆರ್.445

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 146 ಎಂಆರ್‌ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1) (ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಹಿರೇಕೆರೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ :

ಕ್ರ. ಸಂ.	ಸದಸ್ಯರ ಹೆಸರು
01	ಶ್ರೀ ವೀರಬಸಪ್ಪ ಫಕೀರಪ್ಪ ಮತ್ತೂರ. ಸಾ॥ ಹುಲ್ಲತ್ತಿ.
02	ಶ್ರೀ ಸಂಜೀವಯ್ಯ ಚನ್ನಬಸಯ್ಯ ಕಬ್ಬಿಣಕಂತಿಮಠ. ಸಾ॥ ಚಿನ್ನಮುಳಗುಂದ.
03	ಶ್ರೀ ಮಲ್ಲಿಕಾರ್ಜುನಗೌಡ ಮುರಿಗೆಪ್ಪಗೌಡ ಬಸನಗೌಡ, ಸಾ॥ ಮಾರ್ವಿ ಕೋಪಾ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಪಿ.ಆರ್.443

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಹಕಾರ ಇಲಾಖೆ.

ಸಹಕಾರ ಸಚಿವಾಲಯ

ಅಧಿಸೂಚನೆ

ಸಂಖ್ಯೆ : ಸಇ 148 ಎಂಆರ್‌ಇ 2011, ಬೆಂಗಳೂರು, ದಿನಾಂಕ:05ನೇ ಮೇ, 2011

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966 ರ ಕಲಂ 11(1)(ix) ರಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಯಲಬುರ್ಗಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಈ ಕೆಳಕಂಡ ಮೂವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿದೆ :

ಕ್ರ. ಸಂ.	ಸದಸ್ಯರ ಹೆಸರು
01	ಶ್ರೀ ಅರ್ಜುನ್‌ರಾವ್ ಮದ್ದುರಾವ್ ಜಗತಾಪ್, ಸಾ॥ ದ್ಯಾಂಪುರ, ಯಲಬುರ್ಗಾ ತಾಲ್ಲೂಕು.
02	ಶ್ರೀ ದೇವೇಂದ್ರಪ್ಪ ಹನುಮಂತಪ್ಪ ಸೋಬಾನದ, ಕುಕನೂರು, ಯಲಬುರ್ಗಾ ತಾಲ್ಲೂಕು.
03	ಶ್ರೀ ಶಂಭುಲಿಂಗಪ್ಪ ಗುರಪ್ಪ ಮ್ಯಾಗೇರಿ, ಸಾ॥ ಯಲಬುರ್ಗಾ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ನಂಜುಂಡಪ್ಪ

ಪಿ.ಆರ್.442

ಸರ್ಕಾರದ ಅಧೀನ ಕಾರ್ಯದರ್ಶಿ-2, ಸಹಕಾರ ಇಲಾಖೆ.

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ.34.ವಿಮಕ.2011, ಬೆಂಗಳೂರು, ದಿನಾಂಕ:04.05.2011

ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 4(1)(ಬಿ) ಅಡಿಯಲ್ಲಿ ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ಸಚಿವಾಲಯಕ್ಕೆ ಸಂಬಂಧಿಸಿದಂತೆ ಮಾಹಿತಿಯನ್ನು ಸಾರ್ವಜನಿಕ ತಿಳುವಳಿಕೆಗಾಗಿ ಈ ಕೆಳಕಂಡಂತೆ ಪ್ರಕಟಿಸಲಾಗಿದೆ.

2005ರ ಮಾಹಿತಿ ಹಕ್ಕು ಅಧಿನಿಯಮದ ಕಲಂ 4(1) (ಬಿ) ರಡಿ ಕಂದಾಯ ಇಲಾಖೆಯ ಸಚಿವಾಲಯ ಹಂತದ ಸೂಚನಾ ಪಟ್ಟಿ

(i) ಕಂದಾಯ ಇಲಾಖೆಯ ಸಚಿವಾಲಯದ ಅಂಗ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳು


ಸಚಿವ ಸಂಪುಟದ ಹಿರಿಯ ಸದಸ್ಯರಾದ ಕಂದಾಯ ಸಚಿವರು, ಕಂದಾಯ ಇಲಾಖೆಯ ಮುಖ್ಯಸ್ಥರಾಗಿರುತ್ತಾರೆ. ಸಚಿವಾಲಯದ ಕಂದಾಯ ಇಲಾಖೆಯಲ್ಲಿ ಒಬ್ಬರು ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ಮತ್ತೊಬ್ಬರು ಕಾರ್ಯದರ್ಶಿಗಳಿರುತ್ತಾರೆ. ಪ್ರಧಾನ ಕಾರ್ಯದರ್ಶಿ ಇವರು ಭೂ ಮಾಪನ ಮತ್ತು ಭೂ ದಾಖಲೆ, ಭೂ ಸುಧಾರಣೆ, ಕಂದಾಯ ಸೇವೆಗಳು, ಭೂ ಸ್ವಾಧೀನ; ಮತ್ತು ಇಲಾಖೆಯ ಸಮಗ್ರ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ. ಕಾರ್ಯದರ್ಶಿ ಇವರು ಪ್ರಕೃತಿ ವಿಕೋಪ ನಿರ್ವಹಣೆ (Disaster Management), ನೋಂದಣಿ ಮತ್ತು ಮುಜರಾಯಿ, ಭೂ ಮಂಜೂರಾತಿ ವಿಷಯಗಳನ್ನು ನಿರ್ವಹಿಸುತ್ತಾರೆ. ಕಂದಾಯ ಇಲಾಖೆಯಲ್ಲಿ ಇ-ಗವರ್ನೆನ್ಸ್‌ನ ಪರಿಣಾಮಕಾರಿ ನಿರ್ವಹಣೆಗಾಗಿ ಕಾರ್ಯದರ್ಶಿ (ಭೂಮಿ ಮತ್ತು ಯುಪಿಓಆರ್) ಅವರು ಕಂದಾಯ ಇಲಾಖೆಯಲ್ಲಿ ಗಣಕೀಕರಣ ವ್ಯವಸ್ಥೆಯನ್ನು ಅಳವಡಿಸುವ ಬಗ್ಗೆ ಪರಿಶೀಲಿಸುತ್ತಾರೆ.

ಕಂದಾಯ ಇಲಾಖೆಯಲ್ಲಿ ಮುಜರಾಯಿ ಖಾತೆಯನ್ನು ನಿರ್ವಹಿಸಲು ಪ್ರತ್ಯೇಕವಾಗಿ ಒಬ್ಬರು ಹಿರಿಯ ಸಚಿವರಿರುತ್ತಾರೆ. ಕಾರ್ಯದರ್ಶಿ(ವಿಪತ್ತು ನಿರ್ವಹಣೆ), ಕಂದಾಯ ಇಲಾಖೆ ಅವರು ಮುಜರಾಯಿ ಇಲಾಖೆಗೆ ಸಂಬಂಧಿಸಿದ ಮೇಲ್ವಿಚಾರಣೆ ಕಾರ್ಯವನ್ನು ನಿರ್ವಹಿಸುತ್ತಾರೆ.

ಕಂದಾಯ ಇಲಾಖೆಯ ಸಚಿವಾಲಯದ ಅಂಗರಚನೆಯನ್ನು ಈ ಮುಂದಿನ ಚಾರ್ಟ್‌ನಲ್ಲಿ ತೋರಿಸಲಾಗಿದೆ.

ಅಂಗರಚನೆ

ಕಂದಾಯ ಇಲಾಖೆಯ ಸಂಘಟನಾ ಚಾರ್ಟ್ (ಸಚಿವಾಲಯದಲ್ಲಿ)



ಕಂದಾಯ ಇಲಾಖೆಯು ತನ್ನ ವ್ಯಾಪ್ತಿಯಲ್ಲಿ ಬರುವ ಈ ಕೆಳಕಂಡ ಕ್ಷೇತ್ರ ಇಲಾಖೆ: ನಿಗಮ:ಸಂಸ್ಥೆಗಳಿಗೆ ಸಂಬಂಧಿಸಿದಂತೆ ಆಡಳಿತಾತ್ಮಕ, ಆರ್ಥಿಕ ಹಾಗೂ ಸೇವೆಗಳಿಗೆ ಸಂಬಂಧಿಸಿದ ಕೆಲಸ ಕಾರ್ಯಗಳನ್ನು ನಿರ್ವಹಿಸಲಾಗುತ್ತಿದೆ:

ಕ್ರ ಸಂ.	ಕಂದಾಯ ಇಲಾಖೆಯ ಅಧೀನಕ್ಕೊಳಪಡುವ ಅಧೀನ ಇಲಾಖೆಗಳು: ಶಾಸನ ಬದ್ಧ ಸ್ವಾಯತ್ತ ಸಂಸ್ಥೆಗಳು
1	ಪ್ರಾದೇಶಿಕ ಆಯುಕ್ತರು, ಬೆಂಗಳೂರು
2	ಪ್ರಾದೇಶಿಕ ಆಯುಕ್ತರು, ಮೈಸೂರು
3	ಪ್ರಾದೇಶಿಕ ಆಯುಕ್ತರು, ಗುಲ್ಬರ್ಗಾ
4	ಪ್ರಾದೇಶಿಕ ಆಯುಕ್ತರು, ಬೆಳಗಾವಿ
5	ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕ ಆಯುಕ್ತರು
6	ಆಯುಕ್ತರು, ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆ
7	ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು
8	ಅಧ್ಯಕ್ಷರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ
9	ಆಯುಕ್ತರು, ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳು
10	ಆಯುಕ್ತರು, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರ
11	ಆಯುಕ್ತರು, ಕೂಡಲಸಂಗಮ ಅಭಿವೃದ್ಧಿ ಮಂಡಳಿ
12	ಆಯುಕ್ತರು, ಬಸವಕಲ್ಯಾಣ ಅಭಿವೃದ್ಧಿ ಮಂಡಳಿ
13	ಆಯುಕ್ತರು, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ
14	ಆಯುಕ್ತರು, ಸನ್ನತಿ ಅಭಿವೃದ್ಧಿ ಮಂಡಳಿ
15	ಆಯುಕ್ತರು, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ
16	ಆಯುಕ್ತರು, ಕರ್ನಾಟಕ ಸಾರ್ವಜನಿಕ ಜಮೀನುಗಳ ನಿಗಮ ನಿಯಮಿತ

ಕಂದಾಯ ಇಲಾಖೆಯು ನಿರ್ವಹಿಸುವ ಪ್ರಮುಖ ಕಾರ್ಯಗಳು ಕೆಳಕಂಡಂತಿವೆ:

1. ರಾಜ್ಯದಲ್ಲಿ ಭೂದಾಖಲೆಗಳ ನಿರ್ವಹಣೆ ಮತ್ತು ಎಲ್ಲಾ ಜಮೀನುಗಳ ಭೂಮಾಪನ
2. ಭೂ ಕಂದಾಯ, ನೀರು ತೆರಿಗೆ, ಮತ್ತಿತರ ಸರ್ಕಾರಿ ಬಾಕಿ, ಉಪಕರ ಮತ್ತು ತೆರಿಗೆಗಳ ವಸೂಲಾತಿ
3. ಗ್ರಾಮಠಾಣ, ಗೋಮಾಳ, ಗುಂಡುತೋಪು, ಕೆರೆ ಅಂಗಳ, ಉಪವನಗಳು ಇತ್ಯಾದಿ ಸಾಮುದಾಯಿಕ ಜಮೀನುಗಳೂ ಸೇರಿದಂತೆ ಎಲ್ಲಾ ಸರ್ಕಾರಿ ಜಮೀನುಗಳ ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆ
4. ಭೂ ಮಂಜೂರಾತಿ
5. ಭೂ ಸುಧಾರಣೆ ಮತ್ತು ಗೇಣಿದಾರಿಕೆಯ ನಿರ್ಬಂಧನೆಗಳ ನಿರ್ವಹಣೆ
6. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಜಮೀನು ರಕ್ಷಣೆ
7. ಭೂ ಪರಿವರ್ತನೆ
8. ಸ್ಥಿರಾಸ್ತಿಗಳ ಮೇಲಿನ ಬಾಡಿಗೆ ನಿಯಂತ್ರಣ
9. ಸಾರ್ವಜನಿಕ ಉದ್ದೇಶಕ್ಕಾಗಿ ಖಾಸಗಿ ಆಸ್ತಿಗಳನ್ನು ಸ್ವಾಧೀನಪಡಿಸುವುದು
10. ಸ್ಥಿರಾಸ್ತಿಗಳ ವ್ಯವಹಾರ, ಉಯಿಲು, ಒಪ್ಪಂದ ಇತ್ಯಾದಿಗಳ ನೋಂದಣಿ ಮತ್ತು ಮುದ್ರಾಂಕ ಶುಲ್ಕ ವಸೂಲಾತಿ
11. ಹಿಂದೂ ಧಾರ್ಮಿಕ ಸ್ಥಳಗಳ ನಿಯಂತ್ರಣ ಮತ್ತು ಅಭಿವೃದ್ಧಿ

(ii) ಕಂದಾಯ ಇಲಾಖೆಯ ಸಚಿವಾಲಯದ ಅಧಿಕಾರಿಗಳು ಮತ್ತು ನೌಕರರ ವಿವರ ಹಾಗೂ ಕರ್ತವ್ಯಗಳು

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
1.	ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ ಕೊಠಡಿ ಸಂ:505, 5ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಅಧಿಕೃತ ಮುಖ್ಯಸ್ಥರಾಗಿದ್ದು, ಇಲಾಖಾ ಸಚಿವರ ನಿರ್ದೇಶನಗಳನ್ನು ಕಾಯ್ದೆ ಮತ್ತು ನಿಯಮಗಳ ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳಿಗೆ ಒಳಪಟ್ಟು ಕಂದಾಯ ಇಲಾಖೆಯ ವಿಷಯಗಳನ್ನು ವಿಲೇವಾರಿ ಮಾಡುವ ಮತ್ತು ಎಲ್ಲಾ ವ್ಯವಹಾರದ ಜವಾಬ್ದಾರಿ ಹೊಂದಿರುತ್ತಾರೆ ಮತ್ತು ಇಲಾಖೆಯ ಅಧೀನ ಸಿಬ್ಬಂದಿಯ ಮೇಲ್ವಿಚಾರಣೆ ಮತ್ತು ನಿಯಂತ್ರಣದ ಅಧಿಕಾರವನ್ನು ಹೊಂದಿರುವರು. ಇಲಾಖೆಗೆ ಸಂಬಂಧಿಸಿದ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಇಲಾಖಾ ಸಚಿವರಿಗೆ ಸಲಹೆ ಸಹಕಾರ ನೀಡುವರು.

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
2.	ಸರ್ಕಾರದ ಕಾರ್ಯದರ್ಶಿ (ಭೂಮಿ ಮತ್ತು ಯುಪಿಒಆರ್) ಕೆ.ಆರ್.ವೃತ್ತ, ಬೆಂಗಳೂರು–560 001	ಭೂಮಿ ಯೋಜನೆ ಮತ್ತು ನಗರ ಆಸ್ತಿ ಮಾಲೀಕತ್ವದ ಹಕ್ಕು (Urban Property Ownership Right) (UPOR)ಯೋಜನೆಯ ಪರಿಣಾಮಕಾರಿ ನಿರ್ವಹಣೆಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವರು ಹಾಗೂ ಸದರಿ ವಿಷಯಗಳಲ್ಲಿ ನೀತಿ ನಿರ್ಧಾರ ತೆಗೆದುಕೊಳ್ಳಲು ಇಲಾಖಾ ಸಚಿವರಿಗೆ ಸಲಹೆ ಸಹಕಾರ ನೀಡುವರು.
3.	ಸರ್ಕಾರದ ಕಾರ್ಯದರ್ಶಿ (ವಿಪತ್ತು ನಿರ್ವಹಣೆ) ಕೊಠಡಿ ಸಂ:547, 5ನೇ ಮಹಡಿ, 2ನೇ ಹಂತ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯಲ್ಲಿ ಅಧಿಕಾರ ಪ್ರತ್ಯಾಯೋಜನೆ ಪ್ರಕಾರ ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ, ಮುಜರಾಯಿ ಮತ್ತು ಭೂ ಮಂಜೂರಾತಿ ವಿಷಯಗಳ ಬಗ್ಗೆ ಇಲಾಖಾ ಸಚಿವರುಗಳ ನಿರ್ದೇಶನಗಳನ್ನು ಕಾನೂನು ಚೌಕಟ್ಟಿನಲ್ಲಿ ಹಾಗೂ ಕರ್ನಾಟಕ ಸರ್ಕಾರಿ (ವ್ಯವಹಾರ ನಿರ್ವಹಣೆ) ನಿಯಮಗಳಿಗೆ ಒಳಪಟ್ಟು ವಿಲೇವಾರಿ ಮಾಡುವ ಜವಾಬ್ದಾರಿ ಹೊಂದಿರುವರು ಹಾಗೂ ಸದರಿ ವಿಷಯಗಳಿಗೆ ಸಂಬಂಧಿಸಿದ ನೀತಿ ನಿರ್ಧಾರಗಳನ್ನು ತೆಗೆದುಕೊಳ್ಳಲು ಇಲಾಖಾ ಸಚಿವರುಗಳಿಗೆ ಸಲಹೆ ಸಹಕಾರಗಳನ್ನು ನೀಡುವರು.
4.	ಸರ್ಕಾರದ ಉಪ ಕಾರ್ಯದರ್ಶಿ (ಭೂ ಸುಧಾರಣೆ ಮತ್ತು ಮುಜರಾಯಿ) 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕಂದಾಯ ಇಲಾಖೆಯ ಭೂ ಸುಧಾರಣೆ, ಭೂಸುಧಾರಣೆ ಕೋಶ ಹಾಗೂ ಮುಜರಾಯಿ ಶಾಖೆಗಳಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಸದರಿ ಶಾಖೆಗಳ ಅಧೀನ ಸಿಬ್ಬಂದಿ ಮೇಲೆ ನಿಯಂತ್ರಣ ಹೊಂದಿರುವರು.
5.	ಸರ್ಕಾರದ ಅಧೀನ ಕಾರ್ಯದರ್ಶಿ, (ಭೂ ಸುಧಾರಣೆ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ಸುಧಾರಣಾ ಶಾಖೆಯಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಅಧೀನ ಸಿಬ್ಬಂದಿಯ ನಿಯಂತ್ರಣ ಹೊಂದಿರುವರು
6.	ಶಾಖಾಧಿಕಾರಿ ಭೂಸುಧಾರಣೆ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಕರ್ನಾಟಕ ಭೂ ಸುಧಾರಣೆ ಕಾಯ್ದೆ ಮತ್ತು ಅದರಡಿಯ ನಿಯಮಗಳು, ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ನಿಯಮಗಳಿಗೆಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು. **ಅ) ಹಿರಿಯ ಸಹಾಯಕರು:** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ, ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ಕಾಯ್ದೆ ಮತ್ತು ನಿಯಮಗಳಿಗೆ ತಿದ್ದುಪಡಿ. 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ). 3. ಕರ್ನಾಟಕ ಭೂಸುಧಾರಣೆ ಕಾಯ್ದೆ ಕಲಂ 48ರಂತೆ ಪಿ.ಟಿ.ಸಿ.ಎಲ್ ಕಾಯ್ದೆ ಅಡಿ ಬರುವ ಜಮೀನು ಪರಭಾರೆ ವಿಷಯ. 4. ವಿಧಾನ ಸಭೆ, ವಿಧಾನ ಪರಿಷತ್ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಬೆಂಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ). 5. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಬೆಂಗಳೂರು ವಿಭಾಗ). 6. ಇತರೇ (ಮಿಸಲೇನಿಯಸ್) ವಿಷಯಗಳು. **ಆ) ಸಹಾಯಕರು–1:** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 61ರಂತೆ ಮತ್ತು ಪಿ.ಟಿ.ಸಿ.ಎಲ್ ಕಾಯ್ದೆ ಕಲಂ 4(2)ರ ಅಡಿ ಬರುವ ಜಮೀನು ಪರಭಾರೆ ವಿಷಯ (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ).

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		3. ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗಕ್ಕೆ ಸಂಬಂಧಿಸಿದಂತೆ). 4. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಬೆಳಗಾವಿ ಮತ್ತು ಗುಲ್ಬರ್ಗಾ ವಿಭಾಗ). **ಇ) ಸಹಾಯಕರು–2** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 109ರಡಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಖರೀದಿಸಲು ಅನುಮತಿ ನೀಡುವ ವಿಚಾರ (ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ). 2. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 61ರಂತೆ ಮತ್ತು ಪಿ.ಟಿ.ಸಿ.ಎಲ್ ಕಾಯ್ದೆ ಕಲಂ 4(2)ರ ಅಡಿ ಬರುವ ಜಮೀನು ಪರಭಾರೆ ವಿಷಯ (ಮೈಸೂರು ವಿಭಾಗಕ್ಕೆ ಸಂಬಂಧಿಸಿದಂತೆ). 3. ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು, ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳು (ಮೈಸೂರು ವಿಭಾಗ). 4. ಕಾಯ್ದೆ ಮತ್ತು ನಿಯಮದಡಿ ಬರುವ ರಿಟ್ ಅರ್ಜಿಗಳು (ಮೈಸೂರು ವಿಭಾಗ). 5. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಕಲಂ 48ರಡಿ ಭೂ ನ್ಯಾಯ ಮಂಡಳಿಯ ಸದಸ್ಯರ ನಾಮ ನಿರ್ದೇಶನ ಇತ್ಯಾದಿ ವಿಷಯ. 6. ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿ ಬರುವ ನೀತಿ ವಿಷಯಗಳು. **ಈ) ಸಹಾಯಕರು–3 (ಸಾಂಖ್ಯಿಕ ನಿರೀಕ್ಷಕರು):** 1. ಕರ್ನಾಟಕ ಭೂ ಸುಧಾರಣೆ ಕಾಯ್ದೆ ಮತ್ತು ವಿವಿಧ ಇನಾಂ ರದ್ದಿಯಾತಿ ಕಾಯ್ದೆ ಅಡಿಯಲ್ಲಿ ಬರುವ ನಿಯತಕಾಲಿಕ ಅಂಕಿ ಅಂಶಗಳ ಕ್ರೂಢೀಕೃತ ಮಾಹಿತಿ. 2. ಅಂಕಿ–ಅಂಶಗಳಿಗೆ ಸಂಬಂಧಪಟ್ಟ ವಿಧಾನ ಸಭೆ, ವಿಧಾನ ಪರಿಷತ್‌ನ ಪ್ರಶ್ನೆಗಳು ಗಮನ ಸೆಳೆಯುವ ಸೂಚನೆ ಮತ್ತು ಭರವಸೆಗಳ ವಿಷಯಕ್ಕೆ ಸಂಬಂಧಿಸಿದಂತೆ. 3. ಆಯವ್ಯಯಕ್ಕೆ ಸಂಬಂಧಿಸಿದ ಮಾಹಿತಿ, ರಾಜ್ಯಪಾಲರ ಭಾಷಣಕ್ಕೆ ಮಾಹಿತಿ, ಕೇಂದ್ರ ಸರ್ಕಾರಕ್ಕೆ ಮಾಹಿತಿ ಒದಗಿಸುವ ವಿಚಾರ. 4. ತಾಲ್ಲೂಕು ಭೂ ನ್ಯಾಯ ಮಂಡಳಿಗಳ ಪ್ರಕರಣಗಳ ವಿಲೇ ವರದಿ ಕ್ರೂಢೀಕರಣ. 5. ಗೇಣಿ ಅರ್ಜಿಗಳ ಮತ್ತು ಹೆಚ್ಚುವರಿ ಭೂಮಿ ಹಂಚಿಕೆ ಪ್ರಗತಿ ವರದಿಗಳು. **ಉ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
7.	ಸರ್ಕಾರದ ಅಧೀನ ಕಾರ್ಯದರ್ಶಿ, (ಭೂ ಸುಧಾರಣೆ ಕೋಶ ಮತ್ತು ಭೂ ಕಂದಾಯ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ಸಲ್ಲಿಸುವ ರಿಟ್ ಅರ್ಜಿ/ ರಿಟ್‌ಅಪೀಲು/ ಎಸ್.ಎಲ್.ಪಿ./ ಅಧೀನ ನ್ಯಾಯಾಲಯಗಳ ಪ್ರಕರಣಗಳ ಕುರಿತು ಕ್ರಮವಹಿಸುವುದು. ಜಿಲ್ಲಾ ಕಛೇರಿ ಸಂಕೀರ್ಣ, ಮಿನಿ ವಿಧಾನಸೌಧಗಳ ನಿರ್ಮಾಣ ಕುರಿತು ಆಡಳಿತಾತ್ಮಕ ಅನುಮೋದನೆ, ಅನುದಾನ ಮಂಜೂರಾತಿ, ವಾಹನ ಖರೀದಿ ಮಂಜೂರಾತಿ, ವೇತನೇತರ (ಯೋಜನೇತರ) ಅನುದಾನ ಬಿಡುಗಡೆ ಹಾಗೂ ಭೂ ಕಂದಾಯ ವಿಷಯಗಳ ನಿರ್ವಹಣೆ.
8.	ಶಾಖಾಧಿಕಾರಿ (ಭೂ ಸುಧಾರಣಾ ಕೋಶ) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ಸಲ್ಲಿಸುವ ರಿಟ್ ಅರ್ಜಿ/ ರಿಟ್‌ಅಪೀಲು/ ಎಸ್.ಎಲ್.ಪಿ./ ಅಧೀನ ನ್ಯಾಯಾಲಯ ಪ್ರಕರಣಗಳ ಕುರಿತು ಕ್ರಮವಹಿಸುವುದು. ಜಿಲ್ಲಾ ಕಛೇರಿ ಸಂಕೀರ್ಣ, ಮಿನಿ ವಿಧಾನಸೌಧಗಳ ನಿರ್ಮಾಣ ಕುರಿತು ಆಡಳಿತಾತ್ಮಕ ಅನುಮೋದನೆ, ಅನುದಾನ ಮಂಜೂರಾತಿ, ವಾಹನ ಖರೀದಿ ಮಂಜೂರಾತಿ, ವೇತನೇತರ (ಯೋಜನೇತರ) ಅನುದಾನ ಬಿಡುಗಡೆ.

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	**ಅ) ಹಿರಿಯ ಸಹಾಯಕರು:** ಕಂದಾಯ ಇಲಾಖೆಯ ಜಿಲ್ಲಾ ಕಛೇರಿ ಸಂಕೀರ್ಣ, ಮಿನಿವಿಧಾನಸೌಧ ನಿರ್ಮಾಣ, ಭೂ ನ್ಯಾಯ ಮಂಡಳಿಗಳ ತೀರ್ಮಾನಗಳನ್ನು ಪ್ರಶ್ನಿಸಿ ರಿಟ್‌ಅರ್ಜಿ/ಅಪೀಲು ಮತ್ತು ಎಸ್.ಎಲ್.ಪಿ.ಗಳ ಕುರಿತ ವಿಷಯಗಳು **ಆ) ಸಹಾಯಕರು–1:** ಕಂದಾಯ ಇಲಾಖೆಯ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದ ವಿಷಯ, ವಾಹನ ಖರೀದಿ ಮಂಜೂರಾತಿ, ನ್ಯಾಯಾಲಯ ವಿಷಯಗಳು, ಕಾರ್ಯನೀತಿ ವಿಷಯ. **ಇ) ಸಹಾಯಕರು–2** ಕಂದಾಯ ಇಲಾಖೆಯ ವೇತನೇತರ ಅನುದಾನ ಬಿಡುಗಡೆಗೆ ಸಂಬಂಧಿಸಿದ ವಿಷಯಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
9.	ಶಾಖಾಧಿಕಾರಿ ಭೂ ಕಂದಾಯ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂ ಕಂದಾಯ ಕಾಯ್ದೆ ಮತ್ತು ಅದರಡಿಯ ನಿಯಮಗಳ ವಿಷಯಗಳು, ಭೂ ಕಂದಾಯ ಮನ್ನಾ, ಖಾತಾ ಬದಲಾವಣೆ ಮತ್ತು ದೂರುಗಳು, ಮ್ಯುಟೇಷನ್ ವಿವಾದ, ಡಿ.ಸಿ.ಬಿ., ಬ್ಯಾಂಕ್ ಸಾಲ ವಸೂಲಿ, ಎಸ್.ಎಲ್. ಬಿ.ಸಿ. ವಿಷಯಗಳು, ಸರ್ಕಾರಿ ಬಾಕಿಯನ್ನು ಭೂ ಕಂದಾಯ ಬಾಕಿಯೆಂದು ಪರಿಗಣಿಸಿ ವಸೂಲಿ ಮಾಡುವುದು. **ಅ) ಹಿರಿಯ ಸಹಾಯಕರು:** **ಮೈಸೂರು ಮತ್ತು ಗುಲ್ಬರ್ಗಾ ವಿಭಾಗಗಳಿಗೆ ಸಂಬಂಧಿಸಿದ ಈ ಕೆಳಕಾಣಿಸಿದ ವಿಷಯಗಳು** 1 ಎಲ್ಲಾ ವಿಭಾಗಗಳ ಭೂ ಕಂದಾಯ ಮನ್ನಾ ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸುವುದು 2 ಖಾತಾ ಬದಲಾವಣೆಯ ಬಗ್ಗೆ ಬಂದ ದೂರುಗಳ ಬಗ್ಗೆ ಕ್ರಮ ಕೈಗೊಳ್ಳುವುದು. ಮ್ಯುಟೇಷನ್ ವಿವಾದ ಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸುವುದು. 3 ಖಾತೆ:ಮ್ಯುಟೇಷನ್‌ವಿವಾದಗಳಿಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳು. 4 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ವಿಧಾನ ಸಭೆ/ ಪರಿಷತ್ ಪ್ರಶ್ನೆಗಳು,ಅರ್ಜಿ ಸಮಿತಿ, ಭರವಸೆ ಇತ್ಯಾದಿ ವಿಷಯಗಳು. 5 ಮೇಲಿನ ವಿಷಯಗಳಿಗೆ ಸಂಬಂಧಿಸಿದ ಮಾಹಿತಿ ಹಕ್ಕು ಅಧಿನಿಯಮದ ಅಡಿಯಲ್ಲಿ ಸಲ್ಲಿಸಿದ ಅರ್ಜಿಗಳು. 6 ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ಭೂ ಕಂದಾಯ ಕಾಯಿದೆಗೆ ತಿದ್ದುಪಡಿ ಮಾಡುವ ವಿಷಯಗಳು. **ಆ) ಸಹಾಯಕರು–1:** **ಬೆಳಗಾಂ ಮತ್ತು ಬೆಂಗಳೂರು ವಿಭಾಗಗಳಿಗೆ ಸಂಬಂಧಿಸಿದ ವಿಷಯಗಳು** 1 ಖಾತಾ ಬದಲಾವಣೆಯ ಬಗ್ಗೆ ಬಂದ ದೂರುಗಳ ಬಗ್ಗೆ ಕ್ರಮ ಕೈಗೊಳ್ಳುವುದು. ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸುವುದು. 2 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ನ್ಯಾಯಾಲಯ ಪ್ರಕರಣಗಳು 3 ಖಾತೆ:ಮ್ಯುಟೇಷನ್ ವಿವಾದಗಳಿಗೆ ಸಂಬಂಧಿಸಿದ ವಿಧಾನ ಸಭೆ/ ಪರಿಷತ್ ಪ್ರಶ್ನೆಗಳು, ಅರ್ಜಿಸಮಿತಿ, ಭರವಸೆ ಇತ್ಯಾದಿ ವಿಷಯಗಳು

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಇ) ಸಹಾಯಕರು–2 1 ಡಿ.ಸಿ.ಬಿಯನ್ನು ತಯಾರಿಸುವುದು. 2 ಬ್ಯಾಂಕ್ ಸಾಲ ವಸೂಲು ಮಾಡುವುದು 3 ಸರ್ಕಾರಿ ಬಾಕಿಯನ್ನು ಭೂ ಕಂದಾಯ ಬಾಕಿಯೆಂದು ವಸೂಲು ಮಾಡುವುದು 4 ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿ ಸಭೆಗೆ ಸಂಬಂಧಿಸಿದ ವಿಷಯಗಳು (ಎಸ್.ಎಲ್.ಬಿ.ಸಿ). 5 ಬೆಳೆ ಅಂಕಿ ಅಂಶಗಳ ಯೋಜನೆಗೆ ಸಂಬಂಧಿಸಿದ ವಿಷಯಗಳು. 6 ಆಣೇವಾರಿಗೆ ಸಂಬಂಧಿಸಿದ ವಿಷಯಗಳು. 7. ವಿಧಾನಸಭೆ:ವಿಧಾನ ಪರಿಷತ್‌ಗೆ ಸಂಬಂಧಿಸಿದ ಅರ್ಜಿ, ಭರವಸೆ, ಪ್ರಶ್ನೆ ಇತ್ಯಾದಿ ವಿಷಯಗಳು 8 ಮೇಲ್ಕಂಡ ವಿಷಯಗಳಿಗೆ ಸಂಬಂಧಿಸಿದ ನ್ಯಾಯಾಲಯದ ಪ್ರಕರಣಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿಗೆ ಕಳುಹಿಸುವುದು
10.	ಸರ್ಕಾರದ ಅಧೀನ ಕಾರ್ಯದರ್ಶಿ (ಮುಜರಾಯಿ) 5ನೇಮಹಡಿ,ಬಹುಮಹಡಿ ಕಟ್ಟಡ, ಬೆಂಗಳೂರು–560 001	ಬೆಂಗಳೂರು ಮತ್ತು ಗುಲ್ಬರ್ಗಾ ವಿಭಾಗಗಳಿಗೆ ಸೇರಿದ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿಗಳ ಮತ್ತು ಜೀರ್ಣೋದ್ಧಾರದ ಬಗ್ಗೆ, ಸದರಿ ವಿಭಾಗಗಳಿಗೆ ಸೇರಿದ ದೇವಸ್ಥಾನಗಳ ಆಸ್ತಿ ವಿಷಯ ಅಂದರೆ ಗುತ್ತಿಗೆ/ಬಾಡಿಗೆ/ ನವೀಕರಣ ಹಾಗೂ ಸ್ಥಿರೀಕರಣ ಇತ್ಯಾದಿ ಮತ್ತು ಈ ಎರಡು ವಿಭಾಗಗಳಿಗೆ ಸೇರಿದ ದೇವಸ್ಥಾನಗಳಿಗೆ ಸಹಾಯಾನುದಾನ ಬಿಡುಗಡೆ ಮಾಡುವುದು. ರಾಜ್ಯದ 224 ವಿಧಾನ ಸಭಾ ಕ್ಷೇತ್ರಗಳಿಗೆ ಆರಾಧನಾ ಸಮಿತಿ ರಚಿಸುವ ಬಗ್ಗೆ ಮತ್ತು ವಿಧಾನ ಪರಿಷತ್ ಮತ್ತು ವಿಧಾನ ಸಭೆಗಳ ಪ್ರಶ್ನೆಗಳಿಗೆ ಉತ್ತರ ತಯಾರಿಸುವುದು ಹಾಗೂ ಅರ್ಜಿ ಸಮಿತಿ ಭರವಸೆ ಸಮಿತಿ ಮತ್ತು ಸಾರ್ವತ್ರಿಕ ಲೆಕ್ಕ ಪತ್ರಗಳ ಸಮಿತಿ ವಿಷಯ ಹಾಗೂ ನ್ಯಾಯಾಲಯದ ಪ್ರಕರಣಗಳ ಕುರಿತಂತೆ, ಕೈಲಾಸ ಮಾನಸ ಸರೋವರ ಯಾತ್ರೆ ಯೋಜನೆ ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಗ್ರೂಪ್ – ಎ ಅಧಿಕಾರಿಗಳಿಗೆ ಸಂಬಂಧಿಸಿದ ಸೇವಾ ವಿಷಯಗಳ ನಿರ್ವಹಣೆ, ಮುಜರಾಯಿ ಇಲಾಖೆಯ ದೇವಸ್ಥಾನಗಳ ಇನಾಂ ಆಬಾಲಿಷನ್ ಕಾಯ್ದೆ ಅನ್ವಯ ತಸ್ಥೀಕ್ ಬಿಡುಗಡೆ ಮಾಡುವುದು, ಸರ್ಕಾರಿ ಸಂಸ್ಕೃತ ಕಾಲೇಜುಗಳ ಗ್ರೂಪ್–ಎ ಉಪಾನ್ಯಾಸಕರುಗಳ ಸೇವಾ ವಿಷಯಗಳು ಮತ್ತು ಮುಜರಾಯಿ ಕಾಯ್ದೆ ನಿಯಮಗಳನ್ನು ತಿದ್ದುಪಡಿ ಮಾಡುವ ಬಗ್ಗೆ
11.	ಪೀಠಾಧಿಕಾರಿ ಮುಜರಾಯಿ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಮೈಸೂರು ಮತ್ತು ಬೆಳಗಾಂ ವಿಭಾಗಕ್ಕೆ ಸೇರಿದ ದೇವಸ್ಥಾನಗಳ ಅಭಿವೃದ್ಧಿ ಕಾಮಗಾರಿ ಮತ್ತು ಜೀರ್ಣೋದ್ಧಾರದ ಬಗ್ಗೆ, ಸದರಿ ವಿಭಾಗಗಳಿಗೆ ಸೇರಿದ ಮುಜರಾಯಿ ದೇವಸ್ಥಾನಗಳ ಆಸ್ತಿವಿಷಯ ಅಂದರೆ, ಗುತ್ತಿಗೆ / ಬಾಡಿಗೆ / ನವೀಕರಣ ಹಾಗೂ ಸ್ಥಿರೀಕರಣ ಇತ್ಯಾದಿ. ಈ ಎರಡೂ ವಿಭಾಗಗಳಿಗೆ ಸೇರಿದ ದೇವಸ್ಥಾನಗಳಿಗೆ ಸಹಾಯಾನುದಾನ ಬಿಡುಗಡೆ ಮಾಡುವುದು. ಧಾರ್ಮಿಕ ದತ್ತಿ ಇಲಾಖೆಯ ಗ್ರೂಪ್ – ಬಿ ಅಧಿಕಾರಿಗಳಿಗೆ ಸಂಬಂಧಿಸಿದ ಸೇವಾ ವಿಷಯಗಳ ನಿರ್ವಹಣೆ ಅ) ಹಿರಿಯ ಸಹಾಯಕರು: ಧಾರ್ಮಿಕ ದತ್ತಿ ಇಲಾಖೆಯ ಗ್ರೂಪ್ – ಎ ಮತ್ತು ಗ್ರೂಪ್ – ಬಿ ಅಧಿಕಾರಿಗಳಿಗೆ ಸಂಬಂಧಿಸಿದ ಸೇವಾ ವಿಷಯಗಳು, ಇಲಾಖಾ ವಿಚಾರಣೆಗಳು, ಇಲಾಖೆಯ ಅಧಿನಿಯಮ, ನಿಯಮಗಳಿಗೆ ಸಂಬಂಧಿಸಿದ ವಿಷಯಗಳು, ಸರ್ಕಾರಿ ಸಂಸ್ಕೃತ ಕಾಲೇಜುಗಳಿಗೆ ಸಂಬಂಧಿಸಿದ ವಿಷಯಗಳು, ಮುಜರಾಯಿ ಇಲಾಖೆಯ ದೇವಾಲಯಗಳ ಇನಾಂ ಆಬಾಲಿಷನ್ ಕಾಯ್ದೆಯನ್ವಯ ತಸ್ಥೀಕ್ ಕುರಿತ ವಿಷಯಗಳು, ಸಮನ್ವಯ ಶಾಖೆಯ

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ) ಸಹಾಯಕರು–2 ಈ) ಕಿರಿಯ ಸಹಾಯಕರು ಉ) ದಲಾಯತ್	ವಿಷಯಗಳು ಹಾಗೂ ಮೇಲ್ಕಂಡ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ವಿಧಾನ ಸಭೆ/ ಪರಿಷತ್ತಿನ ಪ್ರಶ್ನೋತ್ತರಗಳು, ಭರವಸೆಗಳು ಮತ್ತು ಇದಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಗಳ ಪ್ರಕರಣಗಳನ್ನು ನಿರ್ವಹಿಸುವುದು. **ಆ) ಸಹಾಯಕರು–1:** ದೇವಾಲಯಗಳು ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಎಲ್ಲಾ ರೀತಿಯ ದುರಸ್ಥಿ / ಜೀರ್ಣೋದ್ಧಾರ / ಹೊಸ ನಿರ್ಮಾಣ / ಆರಾಧನಾ ಯೋಜನೆಯಡಿ ನೀಡಬಹುದಾದ ಅನುದಾನ ಹಾಗೂ ನಗದು ಅನುದಾನ, ದೇವಾಲಯಗಳು ಹಾಗೂ ಧಾರ್ಮಿಕ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಅಭಿವೃದ್ಧಿ ನಿರ್ಮಾಣ / ಆಡಳಿತಾತ್ಮಕ ಮಂಜೂರಾತಿ, ಧಾರ್ಮಿಕ ಸಂಸ್ಥೆಗಳ ಸಹಾಯಾನುದಾನದ ಬಗ್ಗೆ ಕಾಲ ವಿಳಂಬ ವಿನಾಯಿತಿ ಹಾಗೂ ಮೇಲ್ಕಂಡ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ವಿಧಾನ ಸಭೆ / ಪರಿಷತ್ತಿನ ಪ್ರಶ್ನೋತ್ತರಗಳು, ಭರವಸೆಗಳು, ಅರ್ಜಿ ಸಮಿತಿಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು. **ಇ) ಸಹಾಯಕರು–2** ದೇವಾಲಯಗಳು ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಸ್ಥಿರಾಸ್ತಿಗಳಾದ ಜಮೀನು/ನಿವೇಶನ/ಕಟ್ಟಡಗಳು/ಚರಾಸ್ತಿಗಳಾದ ದೇವಾಲಯದ ಆಭರಣ, ಅನುಪಯುಕ್ತ ಆಭರಣಗಳ ವಗೈರೆಗಳ ಮಾರಾಟ/ ಗುತ್ತಿಗೆ ನೀಡುವುದು / ಬಾಡಿಗೆ ನೀಡಬಹುದಾದ ವಿಷಯ, ಸರ್ಕಾರದ/ಇಲಾಖಾ/ಜಿಲ್ಲಾ/ಕ್ಷೇತ್ರ ಮಟ್ಟಗಳಲ್ಲಿ ರಚಿಸಬಹುದಾದ, ಮುಂದುವರಿಸಬಹುದಾದ ಹಾಗೂ ಆಯಾಯ ಧಾರ್ಮಿಕ ಸಂಸ್ಥೆಗಳ ನಿಯಮಾನುಸಾರ ರಚಿಸಬಹುದಾದ/ಮುಂದುವರಿಸಬಹುದಾದ ಸಮಿತಿಗಳು ಹಾಗೂ ಮೇಲ್ಕಂಡ ಎಲ್ಲಾ ವಿಷಯಗಳಿಗೆ ಸಂಬಂಧಿಸಿದಂತೆ ವಿಧಾನ ಸಭೆ / ಪರಿಷತ್ತಿನ ಪ್ರಶ್ನೋತ್ತರಗಳು, ಭರವಸೆಗಳು, ಅರ್ಜಿ ಸಮಿತಿ ಮತ್ತು ಇದಕ್ಕೆ ಸಂಬಂಧಪಟ್ಟಂತೆ ನ್ಯಾಯಾಲಯಗಳ ಪ್ರಕರಣಗಳನ್ನು ನಿರ್ವಹಿಸುವುದು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
12.	ಸರ್ಕಾರದ ಉಪಕಾರ್ಯದರ್ಶಿ (ಸಮನ್ವಯ, ವಿಶೇಷ ಕೋಶ, ನೋಂದಣಿ ಮುದ್ರಾಂಕ ಮತ್ತು ಕೆಎಟಿ.) 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಸಮನ್ವಯ,ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ,ನೋಂದಣಿ ಮತ್ತು ಮುದ್ರಾಂಕ ಹಾಗೂ ವಿಶೇಷಕೋಶ ಶಾಖೆಗಳಲ್ಲಿ ನಿರ್ವಹಿಸುವ ವಿಷಯಗಳ ಮೇಲ್ವಿಚಾರಣೆ ಹಾಗೂ ಅಧೀನ ಸಿಬ್ಬಂದಿಗಳ ನಿಯಂತ್ರಣ. ಇಲಾಖೆಯಲ್ಲಿನ ಸಮನ್ವಯ ಕಾರ್ಯ ಹಾಗೂ ಸಂಘಟನಾ ಮತ್ತು ವಿಧಾನಾಧಿಕಾರಿಯಾಗಿ ಕಾರ್ಯನಿರ್ವಹಿಸುವುದು.
13.	ಸರ್ಕಾರದ ಅಧೀನ ಕಾರ್ಯದರ್ಶಿ, ಸಮನ್ವಯ, ಸ್ವೀಕೃತಿ & ರವಾನೆ ಭೂಮಂಜೂರಾತಿ–3 ಶಾಖೆಗಳು. 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ಕಂದಾಯ ಇಲಾಖೆಯ ಸಮನ್ವಯ, ಸ್ವೀಕೃತಿ ಮತ್ತು ರವಾನೆ ಶಾಖೆ ಹಾಗೂ ಭೂ ಮಂಜೂರಾತಿ–3 ಶಾಖೆಗಳಿಗೆ ಸಂಬಂಧಿಸಿದಂತೆ ಹಾಗೂ 14 ಜಿಲ್ಲೆಗಳ ಭೂ ಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳು,
14.	ಶಾಖಾಧಿಕಾರಿ ಸಮನ್ವಯ ಶಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು–560 001	ಕಂದಾಯ ಇಲಾಖೆಯ ಸಮನ್ವಯ ಕಾರ್ಯ, ಎಂಪಿಕ್ ಮತ್ತು ಕಡತ /ಪತ್ರಗಳ ವಿಲೇವಾರಿಯ ಮಾಸಿಕ ಸಭೆ ನಡೆಸುವುದು. **ಅ) ಹಿರಿಯ ಸಹಾಯಕರು:** ಕಡತ /ಪತಗಳ ವಿಲೇವಾರಿಯ ಮಾಸಿಕ ಸಭೆ.

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	**ಆ) ಸಹಾಯಕರು-1:** ವಿಧಾನಸಭೆ ಪ್ರಶ್ನೆಗಳು/ ಭರವಸೆಗಳು, ಗಮನ ಸೆಳೆಯುವ ಸೂಚನೆ, ಆಯವ್ಯಯ ಭಾಷಣ ತಯಾರಿಕೆ ಹಾಗೂ ಕಾರ್ಯನೀತಿ ವಿಷಯ, ಆಡಿಟ್ ವಿಷಯ, ಅರ್ಜಿ ಸಮಿತಿಯ ವಿಷಯ ಹಾಗೂ ಸಾಮಾನ್ಯ ವಿಷಯಗಳ ನಿರ್ವಹಣೆ **ಇ) ಸಹಾಯಕರು-2** ವಿಧಾನ ಪರಿಷತ್ ಪ್ರಶ್ನೆಗಳು/ ಭರವಸೆಗಳು, ಗಮನ ಸೆಳೆಯುವ ಸೂಚನೆ, ಅರ್ಜಿಸಮಿತಿ, ಮಾಹಿತಿ ಹಕ್ಕು ವಿಷಯಗಳ ನಿರ್ವಹಣೆ, ವಾರ್ಷಿಕ ವರದಿ ತಯಾರಿಕೆ, ರಾಜ್ಯಪಾಲರ ಭಾಷಣ, ಜಂಟಿ ಅಧಿವೇಶನದ ವಿಷಯಗಳು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
15.	ಶಾಖಾಧಿಕಾರಿ ಸ್ವೀಕೃತಿ ಮತ್ತು ರವಾನೆ ಶಾಖೆ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು-560 001 ಅ) ಸಹಾಯಕರು ಆ) ಕಿರಿಯ ಸಹಾಯಕರು-1 ಇ) ಕಿರಿಯ ಸಹಾಯಕರು-2 ಈ) ಕಿರಿಯ ಸಹಾಯಕರು-3 ಉ) ಬೆರಳಚ್ಚುಗಾರರು-1 ಊ) ದಲಾಯತ್-3 ಹುದ್ದೆ	ಕಂದಾಯ ಇಲಾಖೆಗೆ ಸಂಬಂಧಿಸಿದ ಪತ್ರಗಳನ್ನು ಸ್ವೀಕರಿಸುವುದು, ಶಾಖಾವಾರು ವಿಂಗಡಿಸಿ ಸಂಬಂಧಿಸಿದ ಶಾಖೆಗಳಿಗೆ ವಿತರಿಸುವುದು ಹಾಗೂ ಇಲಾಖೆಯಿಂದ ಹೊರಗಡೆ ಹೋಗುವ ಪತ್ರಗಳ ರವಾನೆಗೆ ಸಂಬಂಧಿಸಿದ ವಿಷಯಗಳನ್ನು ನಿರ್ವಹಿಸುವುದು ಹಾಗೂ ಇಲಾಖೆಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳನ್ನು ಸರ್ಕಾರಿ ಮುದ್ರಣಾಲಯದಿಂದ ಪಡೆಯುವುದು, ಮುದ್ರಣಾಲಯದಿಂದ ಸರಬರಾಜು ಮಾಡದಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ಖರೀದಿ, ದಾಸ್ತಾನು ಮತ್ತು ವಿತರಣೆ. **ಅ) ಸಹಾಯಕರು:** ಇಲಾಖೆಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ದಾಸ್ತಾನಿಗೆ ಸಂಬಂಧಿಸಿದ ವಿಷಯ ನಿರ್ವಹಣೆ. **ಆ) ಕಿರಿಯ ಸಹಾಯಕರು-1** ಶಾಖೆಯಲ್ಲಿ ಸ್ವೀಕೃತವಾಗುವ ಎಲ್ಲಾ ಸ್ವೀಕೃತಿಗಳನ್ನು ಸ್ವೀಕರಿಸುವುದು, ವಿಂಗಡಿಸುವುದು ಮತ್ತು ಸಂಬಂಧಿಸಿದ ಶಾಖೆಗಳಿಗೆ ವಿತರಿಸುವುದು. **ಇ) ಕಿರಿಯ ಸಹಾಯಕರು-2** ಇಲಾಖೆಗೆ ಅಗತ್ಯವಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳನ್ನು ಸರ್ಕಾರಿ ಮುದ್ರಣಾಲಯದಿಂದ ಪಡೆಯುವುದು, ಮುದ್ರಣಾಲಯದಿಂದ ಸರಬರಾಜು ಮಾಡದಿರುವ ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ಖರೀದಿಗೆ ಸಂಬಂಧಿಸಿದ ವಿಷಯ **ಈ) ಕಿರಿಯ ಸಹಾಯಕರು-3** ಲೇಖನ ಸಾಮಗ್ರಿ ಮತ್ತು ಸಲಕರಣೆಗಳ ದಾಸ್ತಾನು ಮತ್ತು ವಿತರಣೆಗೆ ಸಂಬಂಧಿಸಿದ ವಿಷಯ.
16.	ಶಾಖಾಧಿಕಾರಿ ಭೂ ಮಂಜೂರಾತಿ-3 ಶಾಖೆ 5ನೇಮಹಡಿ,ಬಹುಮಹಡಿ ಕಟ್ಟಡ, ಬೆಂಗಳೂರು-560 001 ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಸಹಾಯಕರು-2 ಈ) ಕಿರಿಯ ಸಹಾಯಕರು ಉ) ದಲಾಯತ್	ಭೂ ಮಂಜೂರಾತಿ-3 ಶಾಖೆಗೆ ಸಂಬಂಧಿಸಿದಂತೆ 14 ಜಿಲ್ಲೆಗಳ ಭೂ ಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಗಳಿಗೆ ಸಂಬಂಧಿಸಿದ ವಿಷಯಗಳು, ನ್ಯಾಯಾಲಯ ಪ್ರಕರಣಗಳು, ವಿಧಾನ ಮಂಡಲದ ವಿಷಯಗಳ ನಿರ್ವಹಣೆ. **ಅ) ಹಿರಿಯ ಸಹಾಯಕರು:** ಬೆಳಗಾವಿ, ಬಾಗಲಕೋಟೆ, ಬಿಜಾಪುರ, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳ ಪರಿಶೀಲನೆ, ಭೂ ಮಂಜೂರಾತಿ ಹಾಗೂ ಪಿ.ಟಿ.ಸಿ.ಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು ಹಾಗೂ ನ್ಯಾಯಾಲಯ ಪ್ರಕರಣಗಳು ಮತ್ತು ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿಧಾನ ಮಂಡಲದ ವಿಷಯಗಳು **ಆ) ಸಹಾಯಕರು-1:** ರಾಯಚೂರು, ಕೊಪ್ಪಳ, ಬೀದರ್, ಬಳ್ಳಾರಿ, ಗುಲ್ಬರ್ಗಾ, ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳ

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
		ಪರಿಶೀಲನೆ ಭೂ ಮಂಜೂರಾತಿ ಹಾಗೂ ಪಿಟಿಸಿಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು ಹಾಗೂ ನ್ಯಾಯಾಲಯ ಪ್ರಕರಣಗಳು ಮತ್ತು ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿಧಾನ ಮಂಡಲದ ವಿಷಯಗಳು. **ಇ) ಸಹಾಯಕರು–2** ತುಮಕೂರು, ಧಾರವಾಡ, ಗದಗ್, ಹಾವೇರಿ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳ ಪರಿಶೀಲನೆ, ಭೂ ಮಂಜೂರಾತಿ ಹಾಗೂ ಪಿಟಿಸಿಎಲ್ ಪ್ರಕರಣಕ್ಕೆ ಸಂಬಂಧಿಸಿದ ವಿಷಯಗಳು ಹಾಗೂ ನ್ಯಾಯಾಲಯ ಪ್ರಕರಣಗಳು ಮತ್ತು ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ವಿಧಾನ ಮಂಡಳದಿಂದ ಬರುವ ಪ್ರಶ್ನೆಗಳಿಗೆ ಉತ್ತರ ತಯಾರಿಸುವುದು. **ಈ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
17.	ಸರ್ಕಾರದ ಅಧೀನ ಕಾರ್ಯದರ್ಶಿ,ವಿಶೇಷ ಕೋಶ 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001 ಅ) ಹಿರಿಯ ಸಹಾಯಕರು ಆ) ಸಹಾಯಕರು–1 ಇ)ಬೆರಳಚ್ಚುಗಾರರು ಈ) ಕಿರಿಯ ಸಹಾಯಕರು ಉ) ದಲಾಯತ್	ಕಂದಾಯ ಇಲಾಖೆಯ ಆಡಳಿತ ನಿಯಂತ್ರಣದಲ್ಲಿರುವ ಕ್ಷೇತ್ರ ಇಲಾಖೆಯ ಮುಖ್ಯಸ್ಥರನ್ನು ಹೊರತುಪಡಿಸಿ, ವಿವಿಧ ಹಂತದಲ್ಲಿನ ಅಧಿಕಾರಿಗಳು ಮತ್ತು ನೌಕರರ ಬಗ್ಗೆ ದೂರುಗಳು, ಕಿರುಕುಳ, ದುರ್ನಡತೆ, ಭ್ರಷ್ಟಾಚಾರ, ವಿಳಂಬದ ಬಗ್ಗೆ ಬರುವ ದೂರು / ಮನವಿಗಳ ಕುರಿತು ತನಿಖೆ ಮಾಡುವುದು, ಕಛೇರಿಗಳ Random ತಪಾಸಣೆ ನಡೆಸುವುದು. **ಅ) ಹಿರಿಯ ಸಹಾಯಕರು:** ಬೆಂಗಳೂರು ಮತ್ತು ಬೆಳಗಾವಿ ವಿಭಾಗಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಕಛೇರಿಗಳಲ್ಲಿ ಅಧಿಕಾರಿಗಳು/ಸಿಬ್ಬಂದಿಗಳ ವಿರುದ್ಧದ ದುರ್ನಡತೆ, ಕಿರುಕುಳ, ಭ್ರಷ್ಟಾಚಾರ ಮತ್ತು ವಿಳಂಬದ ದೂರುಗಳ ನಿರ್ವಹಣೆ. ಕಛೇರಿ ತಪಾಸಣೆಗೆ ಸಹಕಾರ. **ಆ) ಸಹಾಯಕರು–1:** ಮೈಸೂರು ಮತ್ತು ಗುಲ್ಬರ್ಗ ವಿಭಾಗಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಕಛೇರಿಗಳಲ್ಲಿ ಅಧಿಕಾರಿಗಳು/ಸಿಬ್ಬಂದಿಗಳು ನೀಡುವ ಕಿರುಕುಳ ಮತ್ತು ವಿಳಂಬದ ದೂರುಗಳ ನಿರ್ವಹಣೆ. Random ತಪಾಸಣೆಗೆ ಸಹಕಾರ. **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
18.	ಸರ್ಕಾರದ ಅಧೀನ ಕಾರ್ಯದರ್ಶಿ, ನೋಂದಣಿ & ಮುದ್ರಾಂಕ ಶಾಖೆ, 5ನೇ ಮಹಡಿ, ಬಹುಮಹಡಿ ಕಟ್ಟಡ ಬೆಂಗಳೂರು–560 001	ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಸಂಬಂಧಿಸಿಧ ವಿಷಯಗಳು, ನೋಂದಣಿ ಕಾಯ್ದೆ ಮತ್ತು ಮುದ್ರಾಂಕ ಕಾಯ್ದೆ ಹಾಗೂ ಅವುಗಳಡಿಯ ನಿಯಮಗಳಿಗೆ ಸಂಬಂದಿಸಿದ ವಿಷಯಗಳು. ಗ್ರೂಪ್–ಎ ಮತ್ತು ಬಿ ಅಧಿಕಾರಿಗಳ ಸೇವಾ ವಿಷಯಗಳು, ಮುದ್ರಾಂಕ ಮತ್ತು ನೋಂದಣಿ ಶುಲ್ಕ ವಿನಾಯಿತಿ/ರಿಯಾಯಿತಿ, ಕಟ್ಟಡಗಳ ಬಾಡಿಗೆ, ಸಂಚಿತ ಮುದ್ರಾಂಕ ಶುಲ್ಕ ಪಾವತಿ ವಿಷಯಗಳು.
19.	ಪೀಠಾಧಿಕಾರಿ/ಶಾಖಾಧಿಕಾರಿ ನೋಂದಣಿ ಮತ್ತು ಮುದ್ರಾಂಕ ಶಾಖೆ	ಗ್ರೂಪ್–ಸಿ ಮತ್ತು ಡಿ ನೌಕರರುಗಳ ಸೇವಾ ವಿಷಯಗಳು, ಮುದ್ರಾಂಕ ಶುಲ್ಕದ ಮರುಪಾವತಿ. **ಅ) ಹಿರಿಯ ಸಹಾಯಕರು:** ನೋಂದಣಿ ಮತ್ತು ಮುದ್ರಾಂಕ ಇಲಾಖೆಗೆ ಸಂಬಂಧಿಸಿದ ವಿಷಯಗಳು, ನೋಂದಣಿ ಕಾಯ್ದೆ ಮತ್ತು ಮುದ್ರಾಂಕ ಕಾಯ್ದೆ ಹಾಗೂ ಅವುಗಳಡಿಯ ನಿಯಮಗಳಿಗೆ ಸಂಬಂದಿಸಿದ ವಿಷಯಗಳು. ಗ್ರೂಪ್–ಎ ಮತ್ತು ಬಿ ಅಧಿಕಾರಿಗಳ ಸೇವಾ ವಿಷಯಗಳು, ಮುದ್ರಾಂಕ ಮತ್ತು ನೋಂದಣಿ ಶುಲ್ಕ ವಿನಾಯಿತಿ/ರಿಯಾಯಿತಿ, ಕಟ್ಟಡಗಳ ಬಾಡಿಗೆ, ಸಂಚಿತ ಮುದ್ರಾಂಕ ಶುಲ್ಕ ಪಾವತಿ ವಿಷಯಗಳು.

ಕ್ರ.ಸಂ.	ಹುದ್ದೆ ಹಾಗೂ ಕಛೇರಿ ವಿಳಾಸ	ನಿರ್ವಹಿಸಲಾಗಿರುವ ಕರ್ತವ್ಯಗಳು
	ಅ) ಹಿರಿಯ ಸಹಾಯಕರು ಆ) ಸಹಾಯಕರು-1 ಇ) ಕಿರಿಯ ಸಹಾಯಕರು ಈ) ದಲಾಯತ್	ಆ) ಸಹಾಯಕರು ಗ್ರೂಪ್-ಸಿ ಮತ್ತು ಡಿ ನೌಕರರುಗಳ ಸೇವಾ ವಿಷಯಗಳು, ಮುದ್ರಾಂಕ ಶುಲ್ಕದ ಮರುಪಾವತಿ. **ಇ) ಕಿರಿಯ ಸಹಾಯಕರು:** ಶಾಖೆಗೆ ಸಂಬಂಧಿಸಿದ ಸ್ವೀಕೃತಿಗಳನ್ನು ದಿನಚರಿ ಮಾಡಿ ವಿಷಯ ನಿರ್ವಾಹಕರಿಗೆ ನೀಡುವುದು, ಸಹಿಯಾದ ಆದೇಶ/ಪತ್ರಗಳನ್ನು ರವಾನಿಸುವುದು ಹಾಗೂ ಕಡತಗಳ ಚಲನವಲನ ನಿರ್ವಹಣೆ ಹಾಗೂ ಮುಕ್ತಾಯಗೊಳಿಸಿದ ಕಡತಗಳನ್ನು ದಾಖಲಾತಿ ಶಾಖೆಗೆ ಕಳುಹಿಸುವುದು
13	ಯು.ಪಿ.ಒ.ಆರ್. ಯೋಜನೆ(Urban Property Ownership Records) 2506-00-800-0-05	240.00	VII 37
	III. ಮುಜರಾಯಿ		
14	ಮಾನಸ ಸರೋವರ ಯಾತ್ರಿಕರಿಗೆ ಸಹಾಯ 2250-00-800-2-14	449.00	V 230
15	ಆರಾಧನಾ 2250-00-800-2-16 ವಿ.ಫ.ಯೋ. ಗಿ.ಉ.ಯೋ ಒಟ್ಟು	837.20 838.40 324.40 2000.00	V 230
	IV. ಇತರೆ ಸಾಮಾಜಿಕ ಸೇವೆಗಳು:		
16	ಬಸವಕಲ್ಯಾಣ ಅಭಿವೃದ್ಧಿ ಮಂಡಳಿ 2250-00-103-2-00	500.00	V 225
17	ಕಾಗಿನೆಲೆ ಅಭಿವೃದ್ಧಿ ಮಂಡಳಿ 2250-00-103-3-00	500.00	V 225
18	ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ 2250-00-800-2-15	170.00	V 230
19	ಯಡಿಯೂರು ಅಭಿವೃದ್ಧಿ 2250-80-051-0-30	100.00	V 226
	V. ಕಟ್ಟಡಗಳ ನಿರ್ಮಾಣ :		
20	ಮಿನಿವಿಧಾನಸೌಧ ಮತ್ತು ಉಪನೋಂದಣಿ ಕಛೇರಿಗಳ ನಿರ್ಮಾಣ 4059-80-051-0-30	2500.00	II 219-220
21	ಜಿಲ್ಲಾ ಕಛೇರಿ ಕಟ್ಟಡ ನಿರ್ಮಾಣ **4059-80-051-0-42**	3000.00	II 221

(xii) ಹಂಚಿಕೆ ಮಾಡಲಾದ ಮೊಬಲಗನ್ನೊಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿಯ ವಿಧಾನವನ್ನು ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳು:–

ಈ ಅಂಶದಡಿ ಸೂಚಿಸಿರುವ ವಿವರಗಳನ್ನು ಇಲಾಖಾ ಮುಖ್ಯಸ್ಥರ ಮತ್ತು ಪ್ರಾದೇಶಿಕ ಆಯುಕ್ತರ ಮಟ್ಟದಲ್ಲಿ ನೇರವಾಗಿ ನಿರ್ವಹಿಸುವುದರಿಂದ ಇವುಗಳ ವಿವರವನ್ನು ಇಲಾಖಾ ಮುಖ್ಯಸ್ಥರ ಮತ್ತು ಪ್ರಾದೇಶಿಕ ಆಯುಕ್ತರ ಹಂತದಲ್ಲಿ ಹೊರಡಿಸಲು ಸೂಚಿಸಿದೆ.

(xiii) ಇಲಾಖೆಯು ನೀಡಿರುವ ವಿನಾಯಿತಿಗಳನ್ನು, ಅನುಮತಿ ಪತ್ರಗಳನ್ನು ಅಥವಾ ಅಧಿಕಾರ ಪತ್ರಗಳನ್ನು ಪಡೆದವರ ವಿವರಗಳು:

ಈ ಅಂಶದಡಿ ಸೂಚಿಸಿರುವ ವಿವರಗಳನ್ನು ಇಲಾಖಾ ಮುಖ್ಯಸ್ಥರು ಮತ್ತು ಪ್ರಾದೇಶಿಕ ಆಯುಕ್ತರು ಮಟ್ಟದಲ್ಲಿ ನೇರವಾಗಿ ನಿರ್ವಹಿಸುವುದರಿಂದ ಇವುಗಳ ವಿವರವನ್ನು ಇಲಾಖಾ ಮುಖ್ಯಸ್ಥರು ಮತ್ತು ಪ್ರಾದೇಶಿಕ ಆಯುಕ್ತರು ತಮ್ಮ ಹಂತದಲ್ಲಿ ಹೊರಡಿಸಲು ಸೂಚಿಸಿದೆ.

(xiv) ಇಲಾಖೆಯ ಬಳಿ ಲಭ್ಯವಿರುವ ಅಥವಾ ಅದು ಹೊಂದಿರುವ ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ, ಮಾಹಿತಿಗೆ ಸಂಬಂಧಿಸಿದ ವಿವರಗಳು:

ಕಂದಾಯ ಇಲಾಖೆಯು revdept.kar.nic.in ವೆಬ್‌ಸೈಟ್ ಹೊಂದಿದ್ದು ಈ ವೆಬ್‌ಸೈಟ್‌ನಲ್ಲಿ ಇಲಾಖೆಯ ವಿಷಯಗಳನ್ನು ಆಗಿಂದಾಗ್ಗೆ ಅಳವಡಿಸಲಾಗುವುದು:ಪರಿಷ್ಕರಿಸಲಾಗುವುದು.

ಕಡತಗಳ ನಿರ್ವಹಣೆ ಮತ್ತು ಪತ್ರಗಳ ನಿರ್ವಹಣೆ ಹಾಗೂ ಚಲನವಲನದ ಬಗ್ಗೆ ಕಡತಗಳ ನಿರ್ವಹಣಾ ವ್ಯವಸ್ಥೆ ಮತ್ತು ಪತ್ರಗಳ ನಿರ್ವಹಣಾ ವ್ಯವಸ್ಥೆಯಲ್ಲಿ ಮಾಹಿತಿ ಲಭ್ಯವಿರುತ್ತದೆ.

(xv) ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದಲ್ಲಿ ಅದರ ಕೆಲಸ ಸಮಯವನ್ನೊಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ವಿವರಗಳು.

ಯಾವುದೂ ಇರುವುದಿಲ್ಲ.

(xvi) ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರುಗಳು, ಪದನಾಮಗಳು ಮತ್ತು ಇತರ ವಿವರಗಳು

ಕ್ರ ಸಂ.	ಇಲಾಖೆಗಳ ಹೆಸರು	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್19(1)ರಪ್ರಕಾರ ಮೇಲ್ಮನವಿ ಪ್ರಾಧಿಕಾರ
1	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಬಿ.ಎಂ.ಗೌಡ ಕಾನೂನು ಕೋಶದ ಮುಖ್ಯಸ್ಥರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ	ಶ್ರೀ ಆನಂದರಾಜ್ ಶಾಖಾಧಿಕಾರಿ (ಭೂಸ್ವಾಧೀನ ಪ್ರಕರಣ ಶಾಖೆ)	ಶ್ರೀ ಅಶೋಕ್‌ಕುಮಾರ್ ಸಿ. ಮನೋಳಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ
2	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಬಿ.ಎಂ.ಗೌಡ ಕಾನೂನು ಕೋಶದ ಮುಖ್ಯಸ್ಥರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ	ಶ್ರೀಹೆಚ್.ಎಸ್.ಉದಯಶಂಕರ್, ಅಧೀನ ಕಾರ್ಯದರ್ಶಿಗಳು ಕಂದಾಯ ಇಲಾಖೆ(ಕಾನೂನು ಕೋಶ)	ಶ್ರೀ ಅಶೋಕ್‌ಕುಮಾರ್ ಸಿ. ಮನೋಳಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ
3	ಕಂದಾಯ ಇಲಾಖಾ ಸಚಿವಾಲಯ	ಶ್ರೀಮತಿ ರಂಗಮಣಿ ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ	ಶ್ರೀ ಬಸವಲಿಂಗಪ್ಪ ಶಾಖಾಧಿಕಾರಿ	ಶ್ರೀ ಅಶೋಕ್‌ಕುಮಾರ್ ಸಿ. ಮನೋಳಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ
4	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಎಫ್.ಆರ್.ಜಮಾದಾರ್ ನಿರ್ದೇಶಕರು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ ಬೆಂಗಳೂರು	ಶ್ರೀಮತಿ ಎಸ್.ಕಾತ್ಯಾಯಿನಿದೇವಿ [illegible] ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯ ಬೆಂಗಳೂರು	ಶ್ರೀ ಅಶೋಕ್‌ಕುಮಾರ್ ಸಿ. ಮನೋಳಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ
5	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಹೆಚ್.ಎಂ.ನಾಗರಾಜ್ ಹಿರಿಯ ಲೆಕ್ಕಪರಿಶೋಧನಾಧಿಕಾರಿ ಆಡಿಟ್ ವರದಿ ಶಾಖೆ	ಶ್ರೀ ಎ.ಆರ್. ರವೀಂದ್ರ ಸಹಾಯಕ ಲೆಕ್ಕ ಪರಿಶೋಧನಾಧಿಕಾರಿ ಆಡಿಟ್ ವರದಿ ಶಾಖೆ	ಶ್ರೀ ಅಶೋಕ್‌ಕುಮಾರ್ ಸಿ. ಮನೋಳಿ ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ

ಕ್ರ. ಸಂ.	ಇಲಾಖೆಗಳ ಹೆಸರು	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್19(1)ರಪ್ರಕಾರ ಮೇಲ್ಮನವಿ ಪ್ರಾಧಿಕಾರ
6	ಕಂದಾಯ ಇಲಾಖಾ ಸಚಿವಾಲಯ	ಶ್ರೀಮತಿ ನಾಗರತ್ನಮ್ಮ.ಎಂ ಸರ್ಕಾರದ ಅಧೀನ ಕಾರ್ಯದರ್ಶಿ (ಭೂಸ್ವಾ.1,3)	ಶ್ರೀ ಕೆ.ರಮೇಶ್ ಶಾಖಾಧಿಕಾರಿ(ಭೂಸ್ವಾಧೀನ-1)	ಶ್ರೀ ಎಂ.ವೆಂಕಟೇಶಮೂರ್ತಿ ಸರ್ಕಾರದ ಉಪ ಕಾರ್ಯದರ್ಶಿ(ಪ್ರ) (ಭೂಸ್ವಾಧೀನ)
7	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಎಂ.ವೆಂಕಟೇಶಮೂರ್ತಿ ಸರ್ಕಾರದ ಅಧೀನ ಕಾರ್ಯದರ್ಶಿ (ಭೂಸ್ವಾಧೀನ-2/ಪುನರ್ವಸತಿ)	1) ಶ್ರೀಮತಿ ಸಿ.ಎಸ್.ಗೀತಮ್ಮ ಶಾಖಾಧಿಕಾರಿ(ಭೂಸ್ವಾಧೀನ-2) 2)ಶ್ರೀಮತಿ ಭಾಗ್ಯಲಕ್ಷ್ಮಿ.ಹೆಚ್.ಎಸ್ ಶಾಖಾಧಿಕಾರಿ(ಪುನರ್ವಸತಿ)	ಶ್ರೀ ಎಂ.ವೆಂಕಟೇಶಮೂರ್ತಿ ಸರ್ಕಾರದ ಉಪ ಕಾರ್ಯದರ್ಶಿ(ಪ್ರ) (ಭೂಸ್ವಾಧೀನ)
8	ಕಂದಾಯ ಇಲಾಖಾ ಸಚಿವಾಲಯ	ಶ್ರೀಮತಿ ನಾಗರತ್ನಮ್ಮ.ಎಂ ಸರ್ಕಾರದ ಅಧೀನ ಕಾರ್ಯದರ್ಶಿ (ಭೂಸ್ವಾ.-3)	ಹಿರಿಯ ಸಹಾಯಕರು (ವಿಷಯವಾರು)	ಶ್ರೀ ಎಂ.ವೆಂಕಟೇಶಮೂರ್ತಿ ಸರ್ಕಾರದ ಉಪ ಕಾರ್ಯದರ್ಶಿ(ಪ್ರ) (ಭೂಸ್ವಾಧೀನ)
9	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಎಂ.ಗಂಗಪ್ಪ ಪೀಠಾಧಿಕಾರಿ(ಭೂಸ್ವಾಧೀನ-3) (ವಿಷಯವಾರು)	ಸಹಾಯಕರು(ವಿಷಯವಾರು)	ಶ್ರೀ ಎಂ.ವೆಂಕಟೇಶಮೂರ್ತಿ ಸರ್ಕಾರದ ಉಪ ಕಾರ್ಯದರ್ಶಿ(ಪ್ರ) (ಭೂಸ್ವಾಧೀನ)
10	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಲಕ್ಷ್ಮೀನಾರಾಯಣ.ಹೆಚ್.ಜೆ. ಸರ್ಕಾರದ ಅಧೀನಕಾರ್ಯದರ್ಶಿ (ಸಮನ್ವಯ/ಪ.ಸ್ತ್ರೀ&.ರ)	1) ಶ್ರೀ ಮಲ್ಲಿಕಾರ್ಜುನ ಶಾಖಾಧಿಕಾರಿ(ಸಮನ್ವಯ) 2) ಶ್ರೀಮತಿ ರೇಣುಕಾ.ಎಸ್. ಶಾಖಾಧಿಕಾರಿ (ಪ.ಸ್ತ್ರೀ&.ರ)	ಶ್ರೀ ಎಂ.ವೆಂಕಟರಸಪ್ಪ ಸರ್ಕಾರದ ಉಪ ಕಾರ್ಯದರ್ಶಿ (ಸಮನ್ವಯ)
11	ಕಂದಾಯ ಇಲಾಖಾ ಸಚಿವಾಲಯ	ಶ್ರೀ ವಿ.ಶ್ರೀರಾಮರೆಡ್ಡಿ ಸರ್ಕಾರದಅಧೀನಕಾರ್ಯದರ್ಶಿ (ಭೂಕಂದಾಯ)	ಶ್ರೀ ವೆಂಕಟಗಿರಯ್ಯ ಶಾಖಾಧಿಕಾರಿ(ಭೂ.ಕಂ.)	ಶ್ರೀಮತಿ ಗೀತಾರಮೇಶ್, ಸರ್ಕಾರದ ಉಪ ಕಾರ್ಯದರ್ಶಿ (ಭೂ ಕಂದಾಯ)
12	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಜಿ.ಎಸ್.ಗುರುಸಿದ್ದಯ್ಯ ಸರ್ಕಾರದ ಅಧೀನಕಾರ್ಯದರ್ಶಿ (ವಿಶೇಷ ಕೋಶ)	ಹಿರಿಯ ಸಹಾಯಕರು (ವಿಶೇಷ ಕೋಶ)	ಶ್ರೀ ಎಂ.ವೆಂಕಟರಸಪ್ಪ ಸರ್ಕಾರದ ಉಪ ಕಾರ್ಯದರ್ಶಿ (ವಿಶೇಷ ಕೋಶ)
13	ಕಂದಾಯ ಇಲಾಖಾ ಸಚಿವಾಲಯ	ಶ್ರೀ ರಾಮಚಂದ್ರ ಸರ್ಕಾರದ ಅಧೀನ ಕಾರ್ಯದರ್ಶಿ (ಕೆ.ಎ.ಟಿ)	ಶ್ರೀ ನಾಗರಾಜು ಶಾಖಾಧಿಕಾರಿ(ಕೆ.ಎ.ಟಿ.)	ಶ್ರೀ ಎಂ.ವೆಂಕಟರಸಪ್ಪ ಸರ್ಕಾರದ ಉಪ ಕಾರ್ಯದರ್ಶಿ (ಕೆ.ಎ.ಟಿ.)
14	ಕಂದಾಯ ಇಲಾಖಾ ಸಚಿವಾಲಯ	1)ಶ್ರೀಮತಿ ಆರ್.ಲೀಲಾವತಿ ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-1) 2) ಶ್ರೀ ಬಾಲಕೃಷ್ಣಯ್ಯ.ಎಸ್. ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-2) 3) ಶ್ರೀ ಸಿದ್ಧಗಂಗಯ್ಯ.ಜಿ ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-3)	1) ಶ್ರೀ ಎಸ್.ವಿ.ಕಲಾವತಿ ಶಾಖಾಧಿಕಾರಿ(ಸೇವೆಗಳು-1) 2) ಶ್ರೀ ಎಸ್.ಎಂ.ಆನಂದಪ್ಪ ಶಾಖಾಧಿಕಾರಿ(ಸೇವೆಗಳು-2) 3) ಶ್ರೀ ಟಿ.ನಾರಾಯಣಪ್ಪ ಶಾಖಾಧಿಕಾರಿ(ಸೇವೆಗಳು-3)	ಶ್ರೀ ಗೀತಾರಮೇಶ್ ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-1,2,3)
15	ಕಂದಾಯ ಇಲಾಖಾ ಸಚಿವಾಳಯ	ಶ್ರೀ ನಾರಾಯಣಗೌಡ.ಟಿ.ಎನ್. ಸರ್ಕಾರದ ಅಧೀನ ಕಾರ್ಯದರ್ಶಿ (ಭೂಸುಧಾರಣೆ)	ಶ್ರೀಮತಿ ದಾಕ್ಷಾಯಣಮ್ಮ ಬಿ.ಎಂ. ಶಾಖಾಧಿಕಾರಿ(ಭೂಸುಧಾರಣೆ)	ಶ್ರೀ ಎಲ್.ಷಣ್ಮುಖ ಸರ್ಕಾರದ ಉಪ ಕಾರ್ಯದರ್ಶಿ (ಭೂ ಸು.)

ಕ್ರ ಸಂ.	ಇಲಾಖೆಗಳ ಹೆಸರು	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್19(1)ರಪ್ರಕಾರ ಮೇಲ್ಮನವಿ ಪ್ರಾಧಿಕಾರ
16	ಕಂದಾಯ ಇಲಾಖಾ ಸಚಿವಾಲಯ	ಶ್ರೀ ವಿ.ಶ್ರೀರಾಮರೆಡ್ಡಿ ಸರ್ಕಾರದ ಅಧೀನ ಕಾರ್ಯದರ್ಶಿ (ಭೂಸುಧಾರಣಾ ಕೋಶ)	ಶ್ರೀ ಪುಷ್ಪ.ಎನ್ ಶಾಖಾಧಿಕಾರಿ(ಭೂ.ಸು.ಕೋ)	ಶ್ರೀ ಎಲ್.ಷಣ್ಮುಖ ಸರ್ಕಾರದ ಉಪ ಕಾರ್ಯದರ್ಶಿ (ಭೂ.ಸು.ಕೋ)
17	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಬಿ.ಯು..ಚೌಕಿಮಠ್ ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್.ಎಸ್.ಎಲ್.ಆರ್)	ಶ್ರೀ ಶಂಕರಗೌಡ.ಸಿ.ದೊಡ್ಡಮನಿ ಶಾಖಾಧಿಕಾರಿ (ಎಸ್ಎಸ್.ಎಲ್ಆರ್)	ಶ್ರೀ ಎಂ.ವೆಂಕಟೇಶಮೂರ್ತಿ ಸರ್ಕಾರದ ಉಪ ಕಾರ್ಯದರ್ಶಿ(ಪ್ರ) (ಎಸ್.ಎಸ್.ಎಲ್.ಆರ್)
18	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಜಿ..ರಾಮಚಂದ್ರಯ್ಯ ಸರ್ಕಾರದ ಅಧೀನ ಕಾರ್ಯದರ್ಶಿ (ಮುಜರಾಯಿ)	ಹಿರಿಯ ಸಹಾಯಕರು/ ಸಹಾಯಕರು (ವಿಷಯವಾರು)	ಶ್ರೀ ಎಲ್.ಷಣ್ಮುಖ ಸರ್ಕಾರದ ಉಪ ಕಾರ್ಯದರ್ಶಿ (ಮುಜರಾಯಿ)
19	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಎಲ್.ಎಸ್.ಶ್ರೀಕಂಠಬಾಬು, ಪೀಠಾಧಿಕಾರಿ(ಮುಜರಾಯಿ) (ವಿಷಯವಾರು)	ಹಿರಿಯ ಸಹಾಯಕರು / ಸಹಾಯಕರು (ವಿಷಯವಾರು)	ಶ್ರೀ ಎಲ್.ಷಣ್ಮುಖ ಸರ್ಕಾರದ ಉಪ ಕಾರ್ಯದರ್ಶಿ (ಮುಜರಾಯಿ)
20	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಟಿ.ಕೆ.ರಾಮಚಂದ್ರ ಸರ್ಕಾರದ ಅಧೀನ ಕಾರ್ಯದರ್ಶಿ (ನೋಂದಣಿ ಮತ್ತು ಮುದ್ರಾಂಕ)	ಹಿರಿಯ ಸಹಾಯಕರು (ವಿಷಯವಾರು)	ಶ್ರೀ ಎಂ.ವೆಂಕಟರಸಪ್ಪ ಸರ್ಕಾರದ ಉಪ ಕಾರ್ಯದರ್ಶಿ (ನೋಂದಣಿ &ಮುದ್ರಾಂಕ)
21	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಜ.ವರದರಾಜು ಪೀಠಾಧಿಕಾರಿ(ನೋ.& ಮು.) (ವಿಷಯವಾರು)	ಸಹಾಯಕರು (ವಿಷಯವಾರು)	ಶ್ರೀ ಎಂ.ವೆಂಕಟರಸಪ್ಪ ಸರ್ಕಾರದ ಉಪ ಕಾರ್ಯದರ್ಶಿ (ನೋ.& ಮು.)
22	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಬಾಲಕೃಷ್ಣಯ್ಯ.ಎಸ್ ಸರ್ಕಾರದ ಅಧೀನಕಾರ್ಯದರ್ಶಿ (ವಿಪತ್ತು ನಿರ್ವಹಣೆ)	ಶ್ರೀ ಜಿ.ಜಯಣ್ಣ ಶಾಖಾಧಿಕಾರಿ (ವಿಪತ್ತು ನಿರ್ವಹಣೆ)	ಶ್ರೀ ಎಂ.ಎಸ್.ದೇಸಾಯಿ ಸರ್ಕಾರದ ಉಪ ಕಾರ್ಯದರ್ಶಿ (ವಿಪತ್ತು ನಿರ್ವಹಣೆ)
23	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಇ.ಈಶ್ವರನಾಯಕ್ ಸರ್ಕಾರದ ಅಧೀನ ಕಾರ್ಯದರ್ಶಿ (ಭೂ ಮಂಜೂರಾತಿ–1,2)	ಶ್ರೀ ಸಿ.ಹೆಚ್.ಶಿವಕುಮಾರ್ ಶಾಖಾಧಿಕಾರಿ (ಭೂ ಮಂಜೂರಾತಿ–1)	ಶ್ರೀಮತಿ ಗೀತಾರಮೇಶ್, ಸರ್ಕಾರದ ಉಪ ಕಾರ್ಯದರ್ಶಿ (ಭೂ ಮಂಜೂರಾತಿ)
24	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಇ.ಈಶ್ವರನಾಯಕ್ ಸರ್ಕಾರದ ಅಧೀನ ಕಾರ್ಯದರ್ಶಿ (ಭೂ ಮಂಜೂರಾತಿ–1,2)	ಹಿರಿಯ ಸಹಾಯಕರು (ವಿಷಯವಾರು)	ಶ್ರೀಮತಿ ಗೀತಾರಮೇಶ್, ಸರ್ಕಾರದ ಉಪ ಕಾರ್ಯದರ್ಶಿ (ಭೂ ಮಂಜೂರಾತಿ)
25	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಎಲ್.ಕೃಷ್ಣಪ್ಪ ಪೀಠಾಧಿಕಾರಿ(ಭೂ.ಮಂ.2) (ವಿಷಯವಾರು)	ಸಹಾಯಕರು(ವಿಷಯವಾರು)	ಶ್ರೀಮತಿ ಗೀತಾರಮೇಶ್, ಸರ್ಕಾರದ ಉಪ ಕಾರ್ಯದರ್ಶಿ (ಭೂ.ಮಂಜೂರಾತಿ)
26	ಕಂದಾಯ ಇಲಾಖಾ ಸಚಿವಾಲಯ	ಶ್ರೀ ಹೆಚ್.ಜೆ.ಲಕ್ಷ್ಮೀನಾರಾಯಣ ಸರ್ಕಾರದ ಅಧೀನ ಕಾರ್ಯದರ್ಶಿ (ಭೂ ಮಂಜೂರಾತಿ–3)	ಶ್ರೀಮತಿ ಲಕ್ಷ್ಮಿ ಶಾಖಾಧಿಕಾರಿ (ಭೂ ಮಂಜೂರಾತಿ–3)	ಶ್ರೀಮತಿ ಗೀತಾರಮೇಶ್, ಸರ್ಕಾರದ ಉಪ ಕಾರ್ಯದರ್ಶಿ (ಭೂ ಮಂಜೂರಾತಿ)

ಕ್ರ ಸಂ.	ಇಲಾಖೆಗಳ ಹೆಸರು	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್19(1)ರಪ್ರಕಾರ ಮೇಲ್ಮನವಿ ಪ್ರಾಧಿಕಾರ
27	ಪ್ರಾದೇಶಿಕ ಆಯುಕ್ತರ ಕಛೇರಿ	ಪ್ರಾದೇಶಿಕ ಆಯುಕ್ತರ ಕಛೇರಿಯ ತಹಸೀಲ್ದಾರರು (ವಿಷಯವಾರು)	ಪ್ರಾದೇಶಿಕ ಆಯುಕ್ತರ ಕಛೇರಿಯ ಶಿರಸ್ತೇದಾರರು (ವಿಷಯವಾರು)	ಪ್ರಾದೇಶಿಕ ಆಯುಕ್ತರ ಕಛೇರಿಯ ಹೆಚ್ಚುವರಿ ಆಯುಕ್ತರು (ವಿಷಯವಾರು)
28	ನೋಂದಣಿ ಮಹಾ ಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರ ಕಚೇರಿ	ಉಪ ನೋಂದಣಿ ಮಹಾ ಪರಿವೀಕ್ಷಕರು, ನೋಂದಣಿ ಮತ್ತು ಮುದ್ರಾಂಕ	ಸಹಾಯಕ ನೋಂದಣಿ ಮಹಾ ಪರಿವೀಕ್ಷಕರು. ನೋಂದಣಿ ಮತ್ತು ಮುದ್ರಾಂಕ	ನೋಂದಣಿ ಮಹಾ ಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು
29	ಜಿಲ್ಲಾ ನೊಂದಣಾಧಿಕಾರಿ ಕಛೇರಿ	ಜಿಲ್ಲಾ ನೋಂದಣಾಧಿಕಾರಿ	ಕೇಂದ್ರಸ್ಥಾನಿಕ ಸಹಾಯಕರು (ವಿಷಯವಾರು)	ಉಪ ನೋಂದಣಿ ಮಹಾ ಪರಿವೀಕ್ಷಕರು (ಆಡಳಿತ), ಬೆಂಗಳೂರು.
30	ಉಪ ನೋಂದಣಾಧಿಕಾರಿ ಕಛೇರಿ	ಹಿರಿಯ ಉಪ ನೋಂದಣಾಧಿಕಾರಿ/ ಉಪ ನೋಂದಣಾಧಿಕಾರಿ (ಸಂಬಂಧಪಟ್ಟ)	ಪ್ರಥಮ / ದ್ವಿತೀಯ ದರ್ಜೆ ಸಹಾಯಕರು (ವಿಷಯವಾರು)	ಜಿಲ್ಲಾ ನೋಂದಣಾಧಿಕಾರಿ
31	ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಕಛೇರಿ	ಜಿಲ್ಲಾ ನೋಂದಣಾಧಿಕಾರಿಗಳು (ಅಪಮೌಲ್ಯ ತನಿಖಾ ವಿಭಾಗ)	ಸಹಾಯಕ ಇಂಜಿನಿಯರ್ ಅಥವಾ ಪ್ರಥಮ ದರ್ಜೆ ಸಹಾಯಕರು. (ವಿಷಯವಾರು)	ಉಪ ನೋಂದಣಿ ಮಹಾ ಪರಿವೀಕ್ಷಕರು (ಆಡಳಿತ ಮತ್ತು ಕಾನೂನು) ಬೆಂಗಳೂರು.
32	ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಕಛೇರಿ	ಜಿಲ್ಲಾ ನೋಂದಣಾಧಿಕಾರಿಗಳು (ಸಂಘ ಸಂಸ್ಥೆಗಳು ಮತ್ತು ವ್ಯಾಪಾರ ಸಂಸ್ಥೆಗಳು)	ಪ್ರಥಮ ದರ್ಜೆ ಸಹಾಯಕರು ದ್ವಿತೀಯ ದರ್ಜೆ ಸಹಾಯಕರು (ವಿಷಯವಾರು)	ಉಪ ನೋಂದಣಿ ಮಹಾಪರಿವೀಕ್ಷಕರು (ಆಡಳಿತ ಮತ್ತು ಕಾನೂನು)ಬೆಂಗಳೂರು.
33	ಧಾರ್ಮಿಕ ಮತ್ತು ದತ್ತಿ ಇಲಾಖೆ	ಕೇಂದ್ರಸ್ಥಾನಿಕ ಸಹಾಯಕರು ಧಾರ್ಮಿಕ ಮತ್ತು ದತ್ತಿ ಇಲಾಖೆ	ಕಛೇರಿ ಸಹಾಯಕರು ಧಾರ್ಮಿಕ ಮತ್ತು ದತ್ತಿ ಇಲಾಖೆ	ಅಯುಕ್ತಕರು, ಧಾರ್ಮಿಕ ಮತ್ತು ದತ್ತಿ ಇಲಾಖೆ
34	ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ	ಕೇಂದ್ರ ಸ್ಥಾನಿಕ ಸಹಾಯಕರು• ಭೂ ಮಾಪನ/ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ,	ಸಹಾಯಕ ನಿರ್ದೇಶಕರು (ಆಡಳಿತ) ಭೂಮಾಪನ/ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ,	ಆಯುಕ್ತರು. ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ
35	ಆಯುಕ್ತರ ಕಛೇರಿ ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳಇಲಾಖೆ	ಸಿಬ್ಬಂದಿ ವಿಷಯಕ್ಕೆ ಭೂ ದಾಖಲೆಗಳ ಉಪ ನಿರ್ದೇಶಕರು (ಆಡಳಿತ) ಕೇಂದ್ರ ಕಛೇರಿ	ಸಿಬ್ಬಂದಿ ವಿಷಯಕ್ಕೆ ಭೂ ದಾಖಲೆಗಳ ಸಹಾಯಕ ನಿರ್ದೇಶಕರು (ಆಡಳಿತ) ಕೇಂದ್ರ ಕಛೇರಿ	ಆಯುಕ್ತರು. ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ
36	ಆಯುಕ್ತರ ಕಛೇರಿ ಭೂ ಮಾಪನ ಕಂದಾಯ ವ್ಯವಸ್ಥೆ &ಭೂ ದಾಖಲೆಗಳ ಇಲಾಖೆ	ಲೆಕ್ಕ ಪತ್ರ ವಿಷಯಕ್ಕೆ ಸಹಾಯಕ ಲೆಕ್ಕ ನಿಯಂತ್ರಣಾಧಿಕಾರಿಗಳು ಕೇಂದ್ರ ಕಛೇರಿ	ಲೆಕ್ಕ ಪತ್ರ ವಿಷಯಕ್ಕೆ ಭೂ ದಾಖಲೆಗಳ ಸಹಾಯುಕ ನಿರ್ದೇಶಕರು (ಲೆಕ್ಕ) ಕೇಂದ್ರ ಕಛೇರಿ	ಆಯುಕ್ತರು, ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ

ಕ್ರ. ಸಂ.	ಇಲಾಖೆಗಳ ಹೆಸರು	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(1)ರ ಪ್ರಕಾರ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್ 5(2)ರ ಪ್ರಕಾರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ	ಮಾಹಿತಿ ಹಕ್ಕು ಕಾಯ್ದೆ 2005ರ ಸೆಕ್ಷನ್19(1)ರಪ್ರಕಾರ ಮೇಲ್ಮನವಿ ಪ್ರಾಧಿಕಾರ
37	ಆಯುಕ್ತರ ಕಛೇರಿ ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ	ತಾಂತ್ರಿಕ ವಿಷಯಕ್ಕೆ ಭೂ ದಾಖಲೆಗಳ ಸಂಯುಕ್ತ ನಿರ್ದೇಶಕರು (ತಾಂತ್ರಿಕ) ಕೇಂದ್ರ ಕಛೇರಿ	ತಾಂತ್ರಿಕ ವಿಷಯಕ್ಕೆ ಭೂ ದಾಖಲೆಗಳ ಸಹಾಯಕ ನಿರ್ದೇಶಕರು (ತಾಂತ್ರಿಕ) ಕೇಂದ್ರ ಕಛೇರಿ	ಆಯುಕ್ತರು, ಭೂ ಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ
38	ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಛೇರಿ	ಅಪರ ಜಿಲ್ಲಾಧಿಕಾರಿಗಳು (ಸಂಬಂಧಪಟ್ಟ ಜಿಲ್ಲೆ)	ಕಛೇರಿ ಸಹಾಯಕರು, ಜಿಲ್ಲಾಧಿಕಾರಿಗಳ ಕಛೇರಿ. (ಸಂಬಂಧಪಟ್ಟ ಜಿಲ್ಲೆ)	ಜಿಲ್ಲಾಧಿಕಾರಿಗಳು (ಸಂಬಂಧಪಟ್ಟ ಜಿಲ್ಲೆ)
39	ಉಪ ವಿಭಾಗಾಧಿಕಾರಿಗಳ ಕಛೇರಿ	ಉಪ ವಿಭಾಗಾಧಿಕಾರಿಗಳು (ಸಂಬಂಧಪಟ್ಟ ಉಪ ವಿಭಾಗಗಳು)	ವ್ಯವಸ್ಥಾಪಕರು, ಉಪ ವಿಭಾಗಾಧಿಕಾರಿಗಳ ಕಛೇರಿ (ಸಂಬಂಧಪಟ್ಟ ಉಪ ವಿಭಾಗಗಳು)	ಜಿಲ್ಲಾಧಿಕಾರಿಗಳು (ಸಂಬಂಧಪಟ್ಟ ಜಿಲ್ಲೆ)
40	ತಹಶೀಲ್ದಾರ್ ಕಛೇರಿ	ತಹಶೀಲ್ದಾರ್ (ಸಂಬಂಧಪಟ್ಟ ತಾಲ್ಲೂಕು)	ತಾಲ್ಲೂಕು ಕಛೇರಿಯ ಸಂಬಂದಪಟ್ಟ ಶಿರಸ್ತೇದಾರರು,(ವಿಷಯವಾರು)	ಉಪ ವಿಭಾಗಾಧಿಕಾರಿಗಳು (ಸಂಬಂಧಪಟ್ಟ ಉಪ ವಿಭಾಗಗಳು)
41	ನಾಡ ಕಛೇರಿ (ಸಂಬಂಧಪಟ್ಟ ಹೋಬಳಿ)	ರಾಜಸ್ವನಿರೀಕ್ಷಕರು (ಸಂಬಂಧಪಟ್ಟ ಹೋಬಳಿ/ವೃತ್ತ	ಗ್ರಾಮಲೆಕ್ಕಾಧಿಕಾರಿ (ಸಂಬಂಧಪಟ್ಟ ವೃತ್ತ)	ಉಪ ತಹಶೀಲ್ದಾರ್ (ಸಂಬಂಧಪಟ್ಟ ಹೋಬಳಿ)

(xvii) ರಡಿ ನಿಯಮಿಸಬಹುದಾದಂತಹ ಇತರ ಮಾಹಿತಿಗಳನ್ನು ಪ್ರಕಟಿಸತಕ್ಕದ್ದು ಮತ್ತು ಆ ತರುವಾಯ ಪ್ರತಿವರ್ಷ ಈ ಪ್ರಕಟಣೆಗಳನ್ನು ಅಂದಿನ ವರೆಗೆ ಪರಿಷ್ಕರಿಸತಕ್ಕದ್ದು;

ಯಾವುದೇ ಇತರ ಮಾಹಿತಿಗಳನ್ನು ಪ್ರಕಟಿಸಲು ಇರುವುದಿಲ್ಲ. ಮಾರ್ಚ್ 2011ರವರೆಗೆ ಪರಿಷ್ಕೃತಗೊಂಡಿದೆ. ಬೇರೆ ಯಾವುದಾದರೂ ಮಾಹಿತಿಗಳನ್ನು ನಂತರ ನಿಗಧಿಗೊಳಿಸಿದಲ್ಲಿ ಅದನ್ನು ಕಾಲಕಾಲಕ್ಕೆ ಅಳವಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.419

ಹೆಚ್.ಜಿ. ಲಕ್ಷ್ಮೀನಾರಾಯಣ

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಸಮನ್ವಯ)

PERSONNEL AND ADMINISTRATIVE REFORMS SECRETARIAT

NOTIFICATION

No. DPAR 10 SAT 2011, Bangalore, Dated:17.05.2011

In exercise of the powers conferred under sub-section (2) of section 7 of the Administrative Tribunals Act, 1985, post facto sanction of the Government is accorded for the discharge of the functions of Justice Sri A.C. Kabbin, Chairman KAT by Sri Raju Premkumar, Administrative Member, KAT during his leave period from 20.01.2011 to 15.02.2011 (BDI) and from 21.02.2011 to 18.03.2011 (BDI)

By Order and in the name of the Governor of Karnataka,

P. MARKANDEYA

PR-456

Under Secretary to Government,

Department of Personnel and Administrative Reforms,

(Service Rules-2)

ಸಮಾಜ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಕಇ 283 ಸಮನ್ವಯ 2010, ಬೆಂಗಳೂರು, ದಿನಾಂಕ:06.04.2011

ಸಮಾಜ ಕಲ್ಯಾಣ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಇಲಾಖೆಗಳಿಗೆ ಸಂಬಂಧಿಸಿದಂತೆ ಹೊರಡಿಸುವ ಅಧಿನಿಯಮ/ ನಿಯಮಾವಳಿ/ ವೃಂದ ಮತ್ತು ನೇಮಕಾತಿ ನಿಯಮಾವಳಿ ಹಾಗೂ ಅಧ್ಯಾದೇಶ ಮತ್ತು ಇವುಗಳಿಗೆ ಸಂಬಂಧಿಸಿದಂತೆ ಹೊರಡಿಸುವ ತಿದ್ದುಪಡಿ ಆದೇಶ/ ಸೇರ್ಪಡೆ ಆದೇಶ/ಮಾರ್ಪಾಡು ಆದೇಶಗಳ ಪ್ರತಿಗಳನ್ನು ಸಕಾಲದಲ್ಲಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸುವ ಬಗ್ಗೆ ಕ್ರಮ ತೆಗೆದುಕೊಳ್ಳಲು ಮತ್ತು ಇಂತಹ ಪ್ರಕಟಣೆಯ ಕರ್ನಾಟಕ ರಾಜ್ಯಪತ್ರದ ಪ್ರತಿಗಳ 500 ಪ್ರತಿಗಳನ್ನು ಕರ್ನಾಟಕ ವಿಧಾನಸಭಾ ಸಚಿವಾಲಯಕ್ಕೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿಕೊಡುವ ಮತ್ತು ತತ್ಸಂಬಂಧದ ಕಾರ್ಯಗಳಿಗೆ ಸಂಬಂಧಿಸಿದಂತೆ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ-3 ಇವರನ್ನು ನೋಡಲ್ ಅಧಿಕಾರಿಯಾಗಿ ಕೂಡಲೇ ಜಾರಿಗೆ ಬರುವಂತೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.352

ಎಸ್. ಲೋಕನಾಥರಾವ್

ಸರ್ಕಾರದ ಅಧೀನ ಕಾರ್ಯದರ್ಶಿ-2,

ಸಮಾಜ ಕಲ್ಯಾಣ ಇಲಾಖೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 2 ಇಸಂಗ್ರ 2010(2), ಬೆಂಗಳೂರು, ದಿನಾಂಕ: 24.08.2010

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 18-ಎರ ಉಪಕಲಂ (2)ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮುದ್ರಣ, ಲೇಖನಾ ಸಾಮಗ್ರಿ ಮತ್ತು ಪ್ರಕಟಣೆಗಳ ನಿರ್ದೇಶನಾಲಯ, ಬೆಂಗಳೂರು ಇದರ ಎಲ್ಲಾ ಸಂಗ್ರಹಣೆಗಳನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ, ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ (through e-Procurement platform) ಸಂಗ್ರಹಿಸತಕ್ಕದೆಂದು ಕರ್ನಾಟಕ ಸರ್ಕಾರ, ಈ ಮೂಲಕ ಗೊತ್ತುಪಡಿಸುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಲಲಿತಾ ಹಾ. ಹಂದಿಗೋಳ

ಪೀಠಾಧಿಕಾರಿ-1, (ಇ-ಆಡಳಿತ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ.

PERSONNEL AND ADMINISTRATIVE REFORMS SECRETARIAT

NOTIFICATION

No. DPAR 2 EPR 2010(2), Bengaluru, Dated:24.08.2010

In exercise of the powers conferred by sub-section (2) of section 18A of the Karnataka Transparency in Public Procurements Act, 1999 (Karnataka Act 29 of 2000), the Government of Karnataka hereby specify that the Department of Printing, Stationery and Publications, Bengaluru, shall, with immediate effect, procure all its procurements through e-Procurement platform.

By Order and in the name of the Governor of Karnataka,

LALITHA H. HANDIGOL

PR-788

Desk Officer-1, (e-Governance)

Department of Personnel and Administrative Reforms.

ಆರ್ಥಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಇ 596 ವೆಚ್ಚ-12/10, ಬೆಂಗಳೂರು, ದಿನಾಂಕ: 20.08.2010

2010-11ನೇ ಸಾಲಿನ 'ಮಹಿಳಾ ತರಬೇತಿ ಯೋಜನೆ'ಯ ಅಡಿ ಮಹಿಳೆಯರಿಗೆ ರಾಜ್ಯದ 30 ಜಿಲ್ಲೆಗಳಲ್ಲಿ ರೂ.89.40 ಲಕ್ಷಗಳ ವೆಚ್ಚದಲ್ಲಿ ಸಿದ್ಧಉಡುಪು/ ವಸ್ತ್ರವಿನ್ಯಾಸ/ ಹೊಲಿಗೆ ಇತ್ಯಾದಿ ತರಬೇತಿಗಳನ್ನು ನೇರವಾಗಿ Apparel Training and Design Centre ಮೂಲಕ ಒದಗಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

Apparel Training and Design Centre ಸಂಸ್ಥೆಯು ಈ ಕಾಮಗಾರಿಗಳನ್ನು ಬೇರೆಯವರ ಮುಖಾಂತರ ಕೈಗೊಳ್ಳುವುದಾದಲ್ಲಿ ಕೆ.ಟಿ.ಪಿ.ಪಿ. ಅಧಿನಿಯಮ ಮತ್ತು ನಿಯಮಗಳನ್ನು ಪಾಲಿಸಬೇಕು. ಉತ್ತಮ ಗುಣಮಟ್ಟದ ಉತ್ಪನ್ನ/ ಸೇವೆಯನ್ನು ಸ್ಪರ್ಧಾತ್ಮಕ ದರದಲ್ಲಿ ಸಂಗ್ರಹಿಸುವುದನ್ನು ಸಂಗ್ರಹಣಾ ಸಂಸ್ಥೆಯು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.784

ಹೆಚ್. ಶೇಖರಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ,

ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

KA / :G-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಮೇ ೨೬, ೨೦೧೧ (ಜ್ಯೇಷ್ಠ ೫, ಶಕ ವರ್ಷ ೧೯೩೩)	ಸಂಚಿಕೆ ೨೧

ಭಾಗ – ೩

ಸರ್ಕಾರದ ಮತ್ತು ಖಾಸಗಿ ಜಾಹೀರಾತುಗಳು, ಲೋಕಸೇವಾ ಆಯೋಗದ ಜಾಹೀರಾತುಗಳು, ನೇಮಕಾತಿ ಸಮಿತಿಗಳ ಜಾಹೀರಾತುಗಳು

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಅಧಿಸೂಚನೆ

ಸಂಖ್ಯೆ: ವಾಕೈ 21 ರೇಸೇವಿ 2010, ಬೆಂಗಳೂರು, ದಿನಾಂಕ:12.05.2011

ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ಹಾಗೂ ತಿದ್ದುಪಡಿ ನಿಯಮಗಳು 2007ರ ಅಡಿಯಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಅಧಿಸೂಚನೆ ಸಂಖ್ಯೆ: ಪಿಎಸ್‌ಸಿ 34 ಆರ್‌ಟಿಬಿ 2009, ದಿನಾಂಕ:14.02.2010ರ ಅನ್ವಯ ರೇಷ್ಮೆ ಇಲಾಖೆಗೆ ರೇಷ್ಮೆ ವಿಸ್ತರಣಾಧಿಕಾರಿಗಳಾಗಿ ಆಯ್ಕೆಗೊಂಡ ಅಭ್ಯರ್ಥಿಗಳ ಪೈಕಿ ಒಬ್ಬರಾದ ಈ ಕೆಳಕಂಡ ಅಭ್ಯರ್ಥಿಯನ್ನು ರೂ.10800–300–12300–350–14400–400–16800–450–19500–525–20025ರ ವೇತನ ಶ್ರೇಣಿಯಲ್ಲಿ ರೇಷ್ಮೆ ವಿಸ್ತರಣಾಧಿಕಾರಿ ಹುದ್ದೆಯಲ್ಲಿ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರವು ನೇಮಿಸಿದೆ. ಮತ್ತು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳಕ್ಕೆ ನಿಯುಕ್ತಿಗೊಳಿಸಿದೆ.

ಅಭ್ಯರ್ಥಿಯ ಹೆಸರು ಮತ್ತು ವಿಳಾಸ	ಸ್ಥಳ ನಿಯುಕ್ತಿಗೊಳಿಸಿ ನೇಮಿಸಿರುವ ಹುದ್ದೆ
ಶ್ರೀ ಎಸ್. ಸಿದ್ದರಾಜು ಬಿನ್ ಶಿವಣ್ಣ, ಕೆಬ್ಬೇಹುಂಡಿ, ವ್ಯಾಸರಾಜಪುರ ಅಂಚೆ, ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.	ತಾಂತ್ರಿಕ ಸೇವಾ ಕೇಂದ್ರ, ಕೆ.ಆರ್.ನಗರ, ಮೈಸೂರು ಜಿಲ್ಲೆ.

ಷರತ್ತುಗಳು:

1) ಈ ಅಭ್ಯರ್ಥಿಯನ್ನು ರೂ.10800–300–12300–350–14400–400–16800–450–19500–525–20025ರ ವೇತನ ಶ್ರೇಣಿ ಬಿ. ವೃಂದದ ರೇಷ್ಮೆ ವಿಸ್ತರಣಾಧಿಕಾರಿ ಹುದ್ದೆಗೆ ಎರಡು ವರ್ಷಗಳ ಕಾಲ ಪರೀಕ್ಷಾರ್ಥಿಯಾಗಿ (on probation) ನೇಮಕಾತಿ ಮಾಡಲಾಗಿದೆ. ಈ ಅಭ್ಯರ್ಥಿಯ ನೇಮಕಾತಿ ತಾತ್ಕಾಲಿಕವಾಗಿರುತ್ತದೆ.
2) ಎಲ್ಲಾ ನೇಮಕಾತಿ ಮತ್ತು ಸೇವಾ ಷರತ್ತುಗಳು ಚಾಲ್ತಿಯಲ್ಲಿರುವ ನಿಯಮ/ ಆದೇಶಗಳ ಅಧೀನಕ್ಕೊಳಪಟ್ಟಿರುತ್ತವೆ.
3) ಈ ಅಭ್ಯರ್ಥಿಯು 1977ರ ಕರ್ನಾಟಕ ನಾಗರೀಕ ಸೇವಾ (ಪರೀಕ್ಷಾರ್ಥ) ನಿಯಮಾವಳಿಗೆ ಬದ್ದರಾಗಿ ಪರೀಕ್ಷಾರ್ಥ ಅವಧಿಯೊಳಗಾಗಿ ಸದರಿ ಹುದ್ದೆಗೆ ನಿಗದಿಪಡಿಸಿದ ಎಲ್ಲಾ ಇಲಾಖಾ ಪರೀಕ್ಷೆಗಳಲ್ಲಿ ತೇರ್ಗಡೆಯಾಗತಕ್ಕದ್ದು.
4) ಆಯ್ಕೆಯಾಗಿರುವ ಅಭ್ಯರ್ಥಿಗಳ ನೇಮಕಾತಿಯು ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:5442/2009ರ ಹಾಗೂ ಇತರೆ ನ್ಯಾಯಾಲಯಗಳ ಆದೇಶಗಳು ಯಾವುದಾದರೂ ಇದ್ದಲ್ಲಿ ಅದರ ಅಂತಿಮ ತೀರ್ಮಾನಕ್ಕೊಳಪಟ್ಟಿರುತ್ತದೆ
5) ಪರೀಕ್ಷಾರ್ಥ ಅವಧಿಯಲ್ಲಿ ಅಭ್ಯರ್ಥಿಯು 1974ರ ಕರ್ನಾಟಕ ನಾಗರೀಕ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆ ನಿಯಮಾವಳಿಯಲ್ಲಿ ಮೇಲ್ಕಂಡ ಹುದ್ದೆಗೆ ನಿಗದಿಪಡಿಸಿರುವ ಕನ್ನಡ ಭಾಷಾ ಮತ್ತು ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.
6) ಅಭ್ಯರ್ಥಿಯ ಜ್ಯೇಷ್ಠತೆಯನ್ನು ಕರ್ನಾಟಕ ಲೋಕಸೇವಾ ಆಯೋಗದ ಆಯ್ಕೆ ಪಟ್ಟಿಯಲ್ಲಿ ಸೂಚಿಸಿರುವ [illegible] ಹಾಗೂ ಸರ್ಕಾರ ಆಗಿಂದಾಗ್ಗೆ ಹೊರಡಿಸಿರುವ ಆದೇಶಾನುಸಾರ ನಿರ್ಧರಿಸಲಾಗುವುದು.
7) ನೇಮಕಾತಿ ಅಧಿಸೂಚನೆಯನ್ನು ನೊಂದಾಯಿತ ಅಂಚೆ ಮೂಲಕ ಸ್ವೀಕರಿಸಿದ 15 ದಿನಗಳೊಳಗಾಗಿ ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ರೇಷ್ಮೆ ನಿರ್ದೇಶನಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1. ಇವರ ಬಳಿ ಕಾರ್ಯವರದಿ

[illegible] ಅಭ್ಯರ್ಥಿಯೊಂದಿಗೆ [illegible] ಮತ್ತು ಅಭ್ಯರ್ಥಿಯು ಸರ್ಕಾರದೊಂದಿಗೆ ಪತ್ರ ವ್ಯವಹಾರ ಮಾಡಿದಲ್ಲಿ ಅದನ್ನು ಪರಿಗಣಿಸುವುದಿಲ್ಲ.

8) ರೇಷ್ಮೆ ಕೃಷಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಮೇಲ್ಕಂಡ ಅಭ್ಯರ್ಥಿಗೆ ಕಾಲಕಾಲಕ್ಕೆ ಅವಶ್ಯವಿರುವ ತರಬೇತಿ/ ಕಾರ್ಯಶಿಬಿರ, ಇತ್ಯಾದಿಗಳಿಗೆ ನಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.199

ಬಿ.ಡಿ ಓಬಪ್ಪ

ಸರ್ಕಾರದ ಉಪ ಕಾರ್ಯದರ್ಶಿ,

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ರೇಷ್ಮೆ & ಸಕ್ಕರೆ)

ನೋಂದಣಿ ಮತ್ತು ಮುದ್ರಾಂಕ ಇಲಾಖೆ

ಜಿಲ್ಲಾ ನೊಂದಣಾಧಿಕಾರಿಗಳ ಕಛೇರಿ, ಬಳ್ಳಾರಿ

ಅಧಿಕೃತ ಜ್ಞಾಪನ

ಸಂಖ್ಯೆ: ಸಿಬ್ಬಂದಿ/12/2009-10, ದಿನಾಂಕ:19.05.2011

ವಿಷಯ: ಕರ್ನಾಟಕ ಲೋಕ[illegible] ಆಯೋಗದಿಂದ ಆಯ್ಕೆಯಾದ ಅಭ್ಯರ್ಥಿಯನ್ನು ದ್ವಿತೀಯ ದರ್ಜೆ ಸಹಾಯಕರ ಹುದ್ದೆಯ ನೇಮಕಾತಿ ಆದೇಶವನ್ನು ರದ್ದುಗೊಳಿಸುವ ಕುರಿತು.

ಉಲ್ಲೇಖ: 1) ಕಾರ್ಯದರ್ಶಿಯವರು ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಅವರ ಪತ್ರ ಸಂಖ್ಯೆ:ಇ(3) 764-823/2009-10/ಪಿಎಸ್ಸಿ, ದಿನಾಂಕ:25.07.2009/ 03.08.2009.

2) ನೋಂದಣಿ ಮಹಾ ಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಬೆಂಗಳೂರು ಇವರ ಅಲಾಟ್‌ಮೆಂಟ್ ಪತ್ರ ಸಂಖ್ಯೆ: ಸಿಬ್ಬಂದಿ 2-144/05-06, ದಿನಾಂಕ:24.08.2009.

3) ಈ ಕಛೇರಿಯ ಇದೇ ಸಂಖ್ಯೆಯ ಅಧಿಕೃತ ಜ್ಞಾಪನ ಪತ್ರ ದಿನಾಂಕ:06.03.2010.

4) ಈ ಕಛೇರಿಯ ಇದೇ ಸಂಖ್ಯೆಯ ಅಧಿಕೃತ ಜ್ಞಾಪನ ಪತ್ರ ದಿನಾಂಕ:25.08.2010.

ಕರ್ನಾಟಕ ಲೋಕಸೇವಾ ಆಯೋಗದಿಂದ ದ್ವಿತೀಯ ದರ್ಜೆ ಸಹಾಯಕ ಹುದ್ದೆಗೆ ಆಯ್ಕೆಯಾಗಿ ಉಲ್ಲೇಖ (2)ರನ್ವಯ ಈ ಜಿಲ್ಲೆಗೆ ಹಂಚಿಕೆಯಾಗಿರುವ ಈ ಕೆಳಕಂಡ ಅಭ್ಯರ್ಥಿಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 4(i) ರನ್ವಯ ಷರತ್ತುಗಳಿಗೆ ಒಳಪಡಿಸಿ ತಾತ್ಕಾಲಿಕವಾಗಿ ದ್ವಿತೀಯ ದರ್ಜೆ ಸಹಾಯಕರಾಗಿ ವೇತನ ಶ್ರೇಣಿ ರೂ.5800-10500ರಲ್ಲಿ ನೇಮಕ ಮಾಡಿ ಅವರ ಹೆಸರಿನ ಮುಂದೆ ತೋರಿಸಲಾದ ಕಛೇರಿಗೆ ಸ್ಥಳ ನಿಯುಕ್ತಿಗೊಳಿಸಿ ಉಲ್ಲೇಖ (3)ರಲ್ಲಿ ಆದೇಶಿಸಲಾಗಿತ್ತು.

ಕ್ರ ಸಂ.	ಹೆಸರು ಮತ್ತು ವಿಳಾಸ ಶ್ರೀ/ ಶ್ರೀಮತಿ	ಕೆಪಿಎಸ್‌ಸಿ ಆಯ್ಕೆ ಪಟ್ಟಿಯ ಕ್ರಮ ಸಂಖ್ಯೆ	ದ್ವಿತೀಯ ದರ್ಜೆ ಸಹಾಯಕರೆಂದು ನೇಮಕಾತಿ ಮಾಡಿದ ಕಛೇರಿ
1.	ಶ್ರೀ ಪ್ರವೀಣ್ ಕುಮಾರ್ ಹನ್ನಿ, ತಂದೆ ವೀರಪ್ಪ ಹನ್ನಿ, ರೇಣುಕಾ ನಗರ, ಹೂವಿನಹಡಗಲಿ, ಬಳ್ಳಾರಿ ಜಿಲ್ಲೆ.	33 (ನೋಂದಣಿ ಸಂಖ್ಯೆ: 663208)	ಉಪ ನೋಂದಣಿ ಕಛೇರಿ, ಕುರುಗೋಡು.

ಅಭ್ಯರ್ಥಿಯು ನಿಗದಿತ 15 ದಿನಗಳ ಒಳಗ ಕೆಲಸಕ್ಕೆ ಹಾಜರಾಗಿರುವುದಿಲ್ಲವಾದ್ದರಿಂದ ಉಲ್ಲೇಖ (4)ರಲ್ಲಿ ಮತ್ತೊಮ್ಮೆ ಅವಕಾಶ ನೀಡಿ ನೇಮಕಾತಿ ಆದೇಶ ಹೊರಡಿಸಲಾಗಿತ್ತು. ಆದರೆ ಸದರಿ ಅಭ್ಯರ್ಥಿಯು ನೇಮಕಾತಿ ಆದೇಶದಲ್ಲಿನ ಷರತ್ತಿನಂತೆ ಹಾಗೂ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ ಸಂಖ್ಯೆ 18(1)ರ ಪ್ರಕಾರ ಅಭ್ಯರ್ಥಿಗೆ ನೇಮಕಾತಿ ಆದೇಶವು ತಲುಪಿದ್ದರೂ ಸಹ ಈವರೆವಿಗೆ ಕೆಲಸಕ್ಕೆ ಹಾಜರಾಗಿರುವುದಿಲ್ಲ. ಹಾಗೂ ಹಾಜರಾತಿಗಾಗಿ ಕಾಲಾವಕಾಶವನ್ನು ಸಹ ಕೋರಿರುವುದಿಲ್ಲ. ಕಾರಣ ಶ್ರೀ ಪ್ರವೀಣ್ ಕುಮಾರ್ ಹನ್ನಿ, ತಂದೆ: ವೀರಪ್ಪ ಹನ್ನಿ, ಹೂವಿನಹಡಗಲಿರವರ ಉಲ್ಲೇಖ (3) ಹಾಗೂ (4) ರ ನೇಮಕಾತಿ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಿ ಆದೇಶಿಸಿದೆ.

ಜಿ. ಗೋವಿಂದಾಚಾರ್

ಪಿ.ಆರ್.203

ಜಿಲ್ಲಾ ನೋಂದಣಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ.

ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ [illegible] ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ

ಅಧಿಸೂಚನೆ

ಸಂಖ್ಯೆ: ಇಎಸ್‌ಟಿ (1)ಇಎಸ್‌ಟಿ (1)205/2010-11, ದಿನಾಂಕ 20-04-2011

ಉಲ್ಲೇಖ:-(1) ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 299 ಬಿಎಸ್‌ಸಿ 2006 ದಿನಾಂಕ: 03-02-2009

(2) ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 299 ಬಿಎಸ್‌ಸಿ 2006 ದಿನಾಂಕ: 24-07-2009

(3) ಸರ್ಕಾರದ ಪತ್ರ ಸಂಖ್ಯೆ:ಕಂಇ 04 ಬಿಎಸ್‌ಸಿ 2011 ದಿನಾಂಕ: 25-02-2011

ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮ ಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On line ಮುಖಾಂತರ ಅರ್ಜಿಯನ್ನು ಅಹ್ವಾನಿಸಲಾಗಿದೆ.

ಅರ್ಜಿ ನಮೂನೆಗಳನ್ನು ಇಲಾಖೆಯ ಅಧಿಕೃತ ವೆಬ್ ಸೈಟ್ ವಿಳಾಸ-http://mandya-va.kar.nic.in ನಲ್ಲಿ ಅಳವಡಿಸಲಾಗಿದೆ. ಅರ್ಜಿಗಳು ದಿನಾಂಕ 25-04-2011ರಿಂದ ಸದರಿ ವೆಬ್ ಸೈಟ್‌ನಲ್ಲಿ ಚಾಲನೆಯಲ್ಲಿರುತ್ತದೆ. ಅರ್ಜಿಗಳನ್ನು ಆನ್-ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿಗಳನ್ನು ದಿನಾಂಕ 23-05-2011ರೊಳಗೆ ಸಲ್ಲಿಸತಕ್ಕದ್ದು.

ಕ್ರ. ಸಂ.	ಹುದ್ದೆಯ ಹೆಸರು	ಒಟ್ಟು ಹುದ್ದೆ	ವಿದ್ಯಾರ್ಹತೆ	ವೇತನ ಶ್ರೇಣಿ
01	ಗ್ರಾಮಲೆಕ್ಕಿಗ	59	ದ್ವಿತೀಯ ಪಿ.ಯು.ಸಿ ಅಥವಾ 12 ನೇ ತರಗತಿ (12th Standard Examination conducted by Central Board of Secondary Education or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು	5800-10500

ವರ್ಗೀಕರಣ

ಕ್ರ. ಸಂ.	ಹುದ್ದೆಯ ಹೆಸರು	ಒಟ್ಟು	ವರ್ಗೀಕರಣ								
	ಗ್ರಾಮ ಲೆಕ್ಕಿಗ	59		ಇತರೆ	ಮಹಿಳೆ	ಗ್ರಾಮೀಣ	ಅಂ.ವಿ	ಮಾ.ಸೈ	ಕ.ಮಾ.ಅ	ಯೋ.ನಿ.ರಾ	ಒಟ್ಟು
2009-10 ನೇ ಸಾಲಿನ ನೇರ ನೇಮಕಾತಿಯಿಂದ ಭರ್ತಿಯಾಗದೇ ಉಳಿದ ಹುದ್ದೆಗಳು											
01			ಪ.ಜಾ	00	00	01	01	00	00	00	02
			ಪ.ಪಂ	01	01	00	00	00	00	00	02
			ಪ್ರ-2ಎ	00	01	00	01	00	00	00	02
			ಪ್ರ-3ಬಿ	00	00	01	00	00	00	00	01
			ಸಾಮಾನ್ಯ ಅಭ್ಯರ್ಥಿ	00	00	00	01	00	00	00	01
			ಒಟ್ಟು	**01**	**02**	**02**	**03**	**0**	**0**	**0**	**08**
2010-11 ನೇ ಸಾಲಿನಲ್ಲಿ ಖಾಲಿ ಇರುವ ಹುದ್ದೆಗಳು											
02			ಪ.ಜಾ	01	02	02	00	01	01	01	08
			ಪ.ಪಂ	00	00	01	01	00	00	00	02
			ಪ್ರ-1	00	00	01	01	00	00	00	02
			ಪ್ರ-2ಎ	01	02	02	00	01	01	01	08
			ಪ್ರ-2ಬಿ	00	00	01	01	00	00	00	02
			ಪ್ರ-3ಎ	00	00	01	01	00	00	00	02
			ಪ್ರ-3ಬಿ	00	00	01	01	00	00	00	02
			ಸಾಮಾನ್ಯ ಅಭ್ಯರ್ಥಿ	05	08	06	01	02	02	01	25
			ಒಟ್ಟು	**07**	**12**	**15**	**06**	**04**	**04**	**03**	**51**
			ಜುಮ್ಲಾ	**08**	**14**	**17**	**09**	**04**	**04**	**03**	**59**

1) ಮಾ.ಸೈ-ಮಾಜಿ ಸೈನಿಕರು 2) ಕ.ಮಾ.ಅ-ಕನ್ನಡ ಮಾಧ್ಯಮ ಅಭ್ಯರ್ಥಿ

3) ಯೋ.ನಿ.ರಾ-ಯೋಜನಾ ನಿರಾಶ್ರಿತರು 4) ಅಂ.ವಿ-ಅಂಗವಿಕಲರು

ಅರ್ಜಿ ಶುಲ್ಕ:- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ -1 ಹಾಗೂ ಮಹಿಳೆಯರಿಗೆ ರೂ 100-00 ಸಾಮಾನ್ಯ ಅಭ್ಯರ್ಥಿಗಳು ರೂ 200-00 ಶುಲ್ಕವನ್ನು, ವೆಬ್ ಸೈಟ್ ವಿಳಾಸ- http://mandya-va.kar.nic.in ನಲ್ಲಿ ಲಭ್ಯವಾಗುವ ಚಲನ್ನಿನ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಜಿಲ್ಲೆಯ ಯಾವುದಾದರೂ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು ಬ್ಯಾಂಕಿನಲ್ಲಿ ಪಾವತಿಸಿ, ಸ್ವೀಕೃತಿಯನ್ನು ಪಡೆಯಬೇಕು.

ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:

1. ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಹಾಕತಕ್ಕದ್ದು. ಅಂಚೆ ಅಥವಾ ಕೊರಿಯರ್ ಅಥವಾ ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. ವಯೋಮಿತಿ: ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.

ಪ.ಜಾ / ಪ.ಪಂ., ಪ್ರವರ್ಗ-1	:	ಕನಿಷ್ಠ-18	ಗರಿಷ್ಠ - 40
ಹಿಂದುಳಿದ ವರ್ಗ	:	ಕನಿಷ್ಠ-18	ಗರಿಷ್ಠ - [illegible]
ಸಾಮಾನ್ಯ ವರ್ಗ	:	ಕನಿಷ್ಠ-18	ಗರಿಷ್ಠ - [illegible]

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸುವಷ್ಟರ ಮಟ್ಟಿಗೆ ನಿಗದಿಪಡಿಸಿದೆ.

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷ ಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3. ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

4. ನಿಗದಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

5. ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಭರ್ತಿ ಮಾಡಿದ ಅರ್ಜಿ ಪ್ರತಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.

6. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

7. ಅರ್ಜಿದಾರರೂಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

8. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

9. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ರವರು ಕಾಯ್ದಿರಿಸಿಕೊಂಡಿರುತ್ತಾರೆ.

10.ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

11. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:** – ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಸೀಲ್ದಾರ್ ರಿಂದ)ಪಡೆದು ಪರಿಶೀಲಿಸುವ ದಿನಾಂಕದಂದು ಹಾಜರುಪಡಿಸಬೇಕು ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು.

ಪ.ಜಾ / ಪ.ಪಂ. * ನಮೂನೆ– ಡಿ ಯಲ್ಲಿ, ಪ್ರವರ್ಗ –1 : * ನಮೂನೆ– ಇ ಯಲ್ಲಿ

ಪ್ರವರ್ಗ 2ಎ, 2ಬಿ, 3ಎ, 3ಬಿ : * ನಮೂನೆ– ಎಫ್ ನಲ್ಲಿ ಸಂಬಂಧಪಟ್ಟ ತಹೀಲ್ದಾರ್ ರವರಿಂದ ಚಾಲ್ತಿಯಲ್ಲಿರುವ ಪ್ರಮಾಣಪತ್ರ ವನ್ನು ಪಡೆದಿರಬೇಕು

12. ಯೋಜನೆ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:

ಯೋಜನಾ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿಡಲಾದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರು ನೀಡಿದ ಪ್ರಮಾಣ ಪತ್ರಗಳನ್ನು ಪಡೆದಿರಬೇಕು.

13. ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು :

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿ ಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

14. ಅಂಗವಿಕಲ ಅಭ್ಯರ್ಥಿಗಳು :ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9(1–ಎ) ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರ ಶೇಕಡಾ 5ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 128 ಸೆನೆನಿ 2006 ದಿನಾಂಕ 1–8–2009ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 52 ಎಸ್‌ಎಸ್‌ಆರ್ 99 ದಿನಾಂಕ 29–11–2002 ರೀತ್ಯಾ, ಗ್ರಾಮ ಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ. 1.ಕುಷ್ಠರೋಗದಿಂದ ಗುಣಮುಖರಾದವರು (Leprosy cured) 2.ಶ್ರವಣ ದೋಷವುಳ್ಳವರು (Hearing impaired) 3.ಮಾನಸಿಕ ಅಸ್ವಸ್ಥತೆ (Mentally ill) **ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ದೈಹಿಕ ಅಂಗವಿಕಲತೆವುಳ್ಳ ಅಭ್ಯರ್ಥಿಗಳು ಗ್ರಾಮ ಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯಡಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ**. ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 128 ಸೆನೆನಿ 2005 ದಿನಾಂಕ19–11–2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಲಗತ್ತಿಸಿದೆ.

15. ಗ್ರಾಮೀಣ ಅಭ್ಯರ್ಥಿಗಳು :

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್. ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಢೀಕೃತ ಗ್ರಾಮೀಣ ಧೃಡೀಕರಣ ಪತ್ರವನ್ನು ಪಡೆದಿರಬೇಕು ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು ಗ್ರಾಮೀಣ ಅಭ್ಯರ್ಥಿಗಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ–2ರ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ

ಸಂಬಂದಪಟ್ಟ ತಹಸೀಲ್ದಾರ್ ರವರಿಂದ ಪಡೆದು.. ಅಂತೆಯೆ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–1, ಪ್ರವರ್ಗ –2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ನಿಗದಿತ ಪ್ರಾಧಿಕಾರಿಗಳಿಂದ ಪಡೆದು ಸಂಬಂದಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿರಬೇಕು.

16. ಕನ್ನಡ ಮಾಧ್ಯಮ ಅಭ್ಯರ್ಥಿಗಳು.

ಸರ್ಕಾರದ ಅಧಿಸೂಚನೆ ಸಂ: ಡಿಪಿಎಆರ್ 71 ಎಸ್ ಆರ್ ಆರ್ 2001 ದಿ: 24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1) (ಸಿ) ರನ್ವಯ ಅಭ್ಯರ್ಥಿಯು 1ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಮಾಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು

17. ಅರ್ಹತಾ ಷರತ್ತುಗಳು :

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು. ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರ/ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ ಮತ್ತು ಆಯ್ಕೆ ಪ್ರಾಧಿಕಾರದ ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ನಿಗಧಿತ ಶೈಕ್ಷಣಿಕ ಅರ್ಹತೆ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರಬೇಕು.

18. ಕೆಳಕಂಡ ಮೂಲ ದಾಖಲೆಗಳನ್ನು ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು.

*. ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ದಾಖಲೆ

* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉಧೃತ ಭಾಗ.

* ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

* ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ, ಪ್ರವರ್ಗ–1, ಪ್ರವರ್ಗ –2ಎ, ಪ್ರವರ್ಗ –2ಬಿ, ಪ್ರವರ್ಗ– 3ಎ, 3ಬಿ, ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ).

* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ).

* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).

* ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).

* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).

* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರ್‌ಪಡಿಸತಕ್ಕದ್ದು.

19. ಇತರೆ ಸೂಚನೆಗಳು :

1) ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

3) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

4) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್ ಸೈಟ್‌ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.

5) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

6) ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸತಕ್ಕದ್ದು.

1) ಇ–ಮೇಲ್ :vamandya!@gmail.com

2) ದೂರವಾಣಿ :08232–231215

3) ಫ್ಯಾಕ್ಸ್ ನಂ : 08232–225596

ಅಧ್ಯಕ್ಷರು,
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ.

ಪಿ.ಆರ್.192

ಕರ್ನಾಟಕ ಲೋಕ ಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು–560 001.

ಅಧಿಸೂಚನೆ

ಸಂಖ್ಯೆ: ಪಿಎಸ್‌ಸಿ 1 ಆರ್‌ಟಿಬಿ–1/2011, ದಿನಾಂಕ: 17–05–2011

1. ಆಯೋಗವು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಹಾಗೂ ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಡಿಯಲ್ಲಿ ಕೆಳಕಂಡ ತಾಂತ್ರಿಕ ಹುದ್ದೆಗಳನ್ನು ಭರ್ತಿ ಮಾಡಲು ON-LINE ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ:–

ಕ್ರಮ ಸಂಖ್ಯೆ	ಇಲಾಖೆಯ ಹೆಸರು ಮತ್ತು ಪದನಾಮ	ಹುದ್ದೆಗಳ ಸಂಖ್ಯೆ
	ಗ್ರೂಪ್ – ' ಬಿ ' ಹುದ್ದೆಗಳು	
1	ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಉಪ ಅಭಿವೃದ್ಧಿ ಅಧಿಕಾರಿ	02
2	ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಸಹಾಯಕ ಅಭಿಯಂತರರು (ಸಿವಿಲ್)	14
3	ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಸಹಾಯಕ ಅಭಿಯಂತರರು(ವಿದ್ಯುತ್)	04
4	ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದಲ್ಲಿ ಸಹಾಯಕ ನಿರ್ದೇಶಕರು	20
5	ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ರಸಾಯನ ಶಾಸ್ತ್ರಜ್ಞ	02
6	ಲೋಕೋಪಯೋಗಿ ಇಲಾಖೆಯಲ್ಲಿ ಸಹಾಯಕ ಇಂಜಿನಿಯರ್(ವಿಭಾಗ–1)(ಸಿವಿಲ್)	100
7	ಔಷಧ ನಿಯಂತ್ರಣ ಇಲಾಖೆಯಲ್ಲಿ ಔಷಧ ಪರಿವೀಕ್ಷಕರು	11
8	ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯಲ್ಲಿ ಭೂದಾಖಲೆಗಳ ಸಹಾಯಕ ನಿರ್ದೇಶಕರು (ಕಾರ್ಯ ನಿರ್ವಾಹಕ)	51
9	ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಸಿವಿಲ್/ಟೆಲಿಕಮ್ಯೂನಿಕೇಷನ್(ಎಲೆಕ್ಟ್ರಾನಿಕ್ಸ್) /ಕಂಪ್ಯೂಟರ್ ಸೈನ್ಸ್/ಎಲೆಕ್ಟ್ರಿಕಲ್/ಮೆಕ್ಯಾನಿಕಲ್/ವಿಜ್ಞಾನ ಉಪನ್ಯಾಸಕರು	675
	ಗ್ರೂಪ್ – ' ಸಿ ' ಹುದ್ದೆಗಳು	
10	ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ನಿರ್ದೇಶನಾಲಯ, ಮೈಸೂರು, ಇಲ್ಲಿ ಪುರಾತತ್ವ ಸಹಾಯಕರು	03
11	ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ನಿರ್ದೇಶನಾಲಯ, ಮೈಸೂರು, ಇಲ್ಲಿ ಶಾಸನ ತಜ್ಞರು	01
12	ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯಗಳ ನಿರ್ದೇಶನಾಲಯ, ಮೈಸೂರು, ಇಲ್ಲಿ ಸಹಾಯಕ ಕ್ಯುರೇಟರ್	02
13	ಸಾರಿಗೆ ಇಲಾಖೆಯಲ್ಲಿ ಮೋಟಾರು ವಾಹನ ನಿರೀಕ್ಷಕರು	100
14	ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಜೂನಿಯರ್ ಇಂಜಿನಿಯರ್ (ಸಿವಿಲ್)	09
15	ಲೋಕೋಪಯೋಗಿ ಇಲಾಖೆಯಲ್ಲಿ ಕಿರಿಯ ಇಂಜಿನಿಯರ್(ಸಿವಿಲ್)	100
16	ಕರ್ನಾಟಕ ಗೃಹ ಮಂಡಳಿಯಲ್ಲಿ ಕಿರಿಯ ಅಭಿಯಂತರರು	01
17	ಔಷಧ ನಿಯಂತ್ರಣ ಇಲಾಖೆಯಲ್ಲಿ ಪ್ರಯೋಗಶಾಲಾ ತಂತ್ರಜ್ಞರು	08

ಟಿಪ್ಪಣಿ: ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.

ಅರ್ಜಿಗಳನ್ನು ಆನ್–ಲೈನ್ (ON-LINE) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

1) ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿ ಭರ್ತಿ ಮಾಡಲು On-Line ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು.

2) ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ವಿರುದ್ಧ ಆಯೋಗವು ಕಾನೂನಿನನ್ವಯ ಸೂಕ್ತ ಕ್ರಮ ಕೈಗೊಳ್ಳುವುದು.

ವಿಶೇಷ ಸೂಚನೆ:– ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿ ಶುಲ್ಕವನ್ನು ಪಾವತಿಸತಕ್ಕದ್ದು.

2. ಶುಲ್ಕ:–

ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ	₹ 300/–
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ	₹ 25/–

2.1 ನಿಗದಿತ ಶುಲ್ಕವನ್ನು ಸಿಂಡಿಕೇಟ್ ಬ್ಯಾಂಕಿನ ಯಾವುದೇ ಶಾಖೆಗಳಲ್ಲಿ ಚಲನ್ ಮುಖಾಂತರ ಪಾವತಿಸತಕ್ಕದ್ದು. ಈ ಸಂಬಂಧ ON-LINE ನಲ್ಲಿ ಅರ್ಜಿ ಸಲ್ಲಿಸಿ ಬ್ಯಾಂಕಿನ ಚಲನ್‌ಗಳನ್ನು ಡೌನ್‌ಲೋಡ್ ಮಾಡಿಕೊಂಡು ನಿಗದಿಪಡಿಸಿದ ಮೊಬಲಗನ್ನು ಸಂಬಂಧಿಸಿದ ಬ್ಯಾಂಕ್‌ಗೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

3. ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು

ಹಂತ–1

(1) ಅಭ್ಯರ್ಥಿಗಳು ಅಧಿಸೂಚನೆ ಹಾಗೂ ಸೂಚನೆಗಳನ್ನು ತಪ್ಪದೇ ಓದಿಕೊಂಡ ನಂತರ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

(2) ಆಯೋಗದ ವೆಬ್ ಸೈಟ್ "http://kpsc.kar.nic.in" ನ Home page ನಲ್ಲಿ On-line Application for Technical Posts (ತಾಂತ್ರಿಕ ಹುದ್ದೆಗಳು) ಮೇಲೆ ಕ್ಲಿಕ್ ಮಾಡಿದ ನಂತರ Fresh Application ಮೇಲೆ ಕ್ಲಿಕ್ ಮಾಡುವುದು.

(3) ಅರ್ಜಿ ಸಲ್ಲಿಸಬೇಕಿರುವ ಹುದ್ದೆಗಳ ಗುಂಪನ್ನು ಆರಿಸಿಕೊಂಡ ನಂತರ Apply button ಅನ್ನು ಕ್ಲಿಕ್ ಮಾಡಿ,ಯಾವ ಹುದ್ದೆಗಾಗಿ ಅರ್ಜಿ ಸಲ್ಲಿಸುತ್ತಿರುವುದಾಗಿ ಆರಿಸಿಕೊಂಡ ನಂತರ Apply button ಮೇಲೆ ಕ್ಲಿಕ್ ಮಾಡುವುದು.

(4) ಈಗ ಪರದೆಯ ಮೇಲೆ ಅರ್ಜಿಯ ನಮೂನೆಯು ಮೂಡುತ್ತದೆ. ಆಗ ಅಭ್ಯರ್ಥಿಯು ಎಲ್ಲಾ ವಿವರಗಳನ್ನು ಭರ್ತಿ ಮಾಡುವುದು. ಅರ್ಜಿಯಲ್ಲಿ ಭರ್ತಿ ಮಾಡಿದ ಎಲ್ಲಾ ವಿವರಗಳು ಪರದೆಯ ಮೇಲೆ ಮೂಡುತ್ತದೆ.

(5) ಅಭ್ಯರ್ಥಿಗಳು ಎಲ್ಲಾ ವಿವರಗಳನ್ನು ಭರ್ತಿ ಮಾಡಿದ ನಂತರ Preview button ಮೇಲೆ ಕ್ಲಿಕ್ ಮಾಡಿದ ನಂತರ Preview Page ಮೂಡುತ್ತದೆ.

(6) ಅಭ್ಯರ್ಥಿಗೆ Application ID ಮತ್ತು Password ಗಳನ್ನು ನೀಡಲಾಗುತ್ತದೆ. ಇವುಗಳನ್ನು ತಪ್ಪದೇ ಬರೆದಿಟ್ಟುಕೊಂಡಿರ ತಕ್ಕದ್ದು. ಇದರಿಂದ ಮುಂದಿನ ಹಂತದಲ್ಲಿ ID ಸಂಖ್ಯೆಯನ್ನು ನಮೂದಿಸುವುದರ ಮೂಲಕ Photo ಅನ್ನು Upload ಮಾಡತಕ್ಕದ್ದು.

(7) ಅಭ್ಯರ್ಥಿಗಳು ಭರ್ತಿ ಮಾಡಲಾದ ಎಲ್ಲಾ ವಿವರಗಳು ಪರದೆಯ ಮೇಲೆ ಮೂಡಿದ ನಂತರ ಮತ್ತೊಂದು ಸಲ ಕೂಲಂಕಷವಾಗಿ ಪರಿಶೀಲಿಸಿ, ಏನಾದರೂ ತಪ್ಪುಗಳಿದ್ದಲ್ಲಿ Edit button ಮೇಲೆ ಕ್ಲಿಕ್ ಮಾಡಿ ಅಗತ್ಯ ತಿದ್ದುಪಡಿಗಳನ್ನು ಮಾಡುವುದು.

(8) ಈ ಹಂತದಲ್ಲಿ ಶುಲ್ಕವನ್ನು ಪಾವತಿಸಬೇಕಿರುವ ಚಲನ್ ಮೂಡಿದಾಗ ಅಧಿಸೂಚನೆ/ಸೂಚನೆಗಳಲ್ಲಿ ತಿಳಿಸಿದಂತೆ ಸಿಂಡಿಕೇಟ್ ಬ್ಯಾಂಕಿನ ಯಾವುದೇ ಶಾಖೆಗಳಲ್ಲಿ ಶುಲ್ಕವನ್ನು ಪಾವತಿಸಿ, ಶುಲ್ಕದ ವಿವರಗಳನ್ನು ಚಲನ್‌ನಲ್ಲಿ ನಮೂದಿಸುವುದು.

(9) ಅಭ್ಯರ್ಥಿಗಳಿಗೆ ಚಲನ್‌ನ ಮುದ್ರಣವು ಕಾಣದೇ ಇದ್ದಲ್ಲಿ "Enter Journal Number" ಹಾಗೂ Applied Job ನ Upload Photo Button ಮೇಲೆ ಕ್ಲಿಕ್ ಮಾಡುವುದು. ಆಗ Application ID ಮತ್ತು Password ಅನ್ನು enter ಮಾಡಿದಾಗ ಚಲನ್ ಲಿಂಕ್ ಪ್ರಿಂಟ್ ಅನ್ನು ನೋಡಬಹುದಾಗಿದ್ದು, Print Challan Link ಅನ್ನು ಕ್ಲಿಕ್ ಮಾಡಿದಾಗ ಅದರ ಪ್ರಿಂಟ್ ಅನ್ನು ಅಭ್ಯರ್ಥಿಗಳು ತೆಗೆದುಕೊಳ್ಳಬಹುದು.

3.1 ಎರಡನೇ ಹಂತದಲ್ಲಿ ಈ ಕೆಳಕಂಡಂತೆ ಅಭ್ಯರ್ಥಿಗಳು ಸೂಚನೆಗಳನ್ನು ಪಾಲಿಸತಕ್ಕದ್ದು:–

ಹಂತ–2

(1) ಈ ಮೊದಲೇ ಆರಿಸಿಕೊಂಡ ಹುದ್ದೆಗಳ ಗುಂಪನ್ನು ಆಯ್ಕೆ ಮಾಡಿಕೊಳ್ಳುವುದು.

(2) ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುವ ಹುದ್ದೆಗಳಿಗೆ ಸಂಬಂಧಿಸಿದಂತೆ ಎಠಣಡಿಟಚಿಟ ಇಟಣಡಿಥಿ ಓಣಟಭಜಡಿ ಹಾಗೂ Photo Upload Button ಗಳನ್ನು ಕ್ಲಿಕ್ ಮಾಡತಕ್ಕದ್ದು.

(3) ಈ ಹಂತದಲ್ಲಿ ನಿಮ್ಮ Application ID ಮತ್ತು Password ಅನ್ನು entry ಮಾಡಲು ಅರ್ಜಿಯಲ್ಲಿ ಕೇಳಲಾಗುತ್ತದೆ.

(4) ಈ ಮೇಲಿನ ವಿವರಗಳನ್ನು ನಮೂದಿಸಿದ ನಂತರ, ಬ್ಯಾಂಕಿನ Journal Number ಮತ್ತು ಶುಲ್ಕ ಪಾವತಿಸಿದ ದಿನಾಂಕವನ್ನು ನಮೂದಿಸತಕ್ಕದ್ದು.

(5) ನಂತರ ಫೋಟೋ ಮತ್ತು ಪೂರ್ಣ ಸಹಿಯನ್ನು Upload ಮಾಡುವ ಪುಟವನ್ನು ನೋಡಬೇಕಿರುತ್ತದೆ.

(6) ಅಭ್ಯರ್ಥಿಗಳು ಫೋಟೋವನ್ನು Upload ಮಾಡಿ, ಅಂದರೆ ಅವರ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವ ಚಿತ್ರವನ್ನು ಒಂದು ಹಾಳೆಯ ಮೇಲೆ ಅಂಟಿಸಿ, ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್ ಪೆನ್ನಲ್ಲಿ ಪೂರ್ಣವಾಗಿ ಸಹಿ ಮಾಡಿ ಅದನ್ನು Scan ಮಾಡಿ ಅರ್ಜಿಗೆ Upload ಮಾಡತಕ್ಕದ್ದು. ನಂತರ ಭರ್ತಿ ಮಾಡಿರುವ ಪೂರ್ತಿ ಅರ್ಜಿಯನ್ನು ಪಡೆಯಲು Reprint Application Button ಅನ್ನು ಒತ್ತಿ ಅರ್ಜಿಯ ಪ್ರತಿ ಪಡೆಯಬಹುದು.

3.2 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ [illegible] ಬೇರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

* ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 18–05–2011.
* ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16–06–2011.
* ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 17–06–2011.
* ಶುಲ್ಕ ಪಾವತಿಸಲಾದ Journal Number ನಮೂದಿಸಲು ಕೊನೆಯ ದಿನಾಂಕ: 18–06–2011.

ವಿಶೇಷ ಸೂಚನೆ: On-line ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Help line) 8453242869, 8453247103, 8453248059 ಮತ್ತು 8453479899 ಅನ್ನು ಬೆಳಿಗ್ಗೆ 8:00 ಗಂಟೆಯಿಂದ ರಾತ್ರಿ 8.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

4. ಅರ್ಹತಾ ಷರತ್ತುಗಳು:–

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ವಿನಾಯಿತಿಯನ್ನು ಪಡೆಯದ ಹೊರತು ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ.

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

5 (1) ನೇಮಕಾತಿ ವಿಧಾನ:– ಸಂದರ್ಶನ ಮೂಲಕ ಆಯ್ಕೆ

ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006 ರಲ್ಲಿ ನಿರ್ದಿಷ್ಟಪಡಿಸಲಾದಂತೆ, ಆಯೋಗದಿಂದ ಅಧಿಸೂಚಿಸಲಾಗಿರುವ ಯಾವುದೇ ತಾಂತ್ರಿಕ ಹುದ್ದೆಗಳ ಸಂದರ್ಶನಕ್ಕೆ ಅರ್ಹರಾಗಲು ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ.ಯ ಕನ್ನಡ ಪ್ರಥಮ ಭಾಷೆಯ ಮಟ್ಟದ 150 ಅಂಕಗಳಿಗೆ ಪರೀಕ್ಷೆ ನಡೆಸಲಿದ್ದು, ಅದರಲ್ಲಿ ಕನಿಷ್ಠ 50 ಅಂಕಗಳೊಂದಿಗೆ ಕಡ್ಡಾಯವಾಗಿ ತೇರ್ಗಡೆ ಹೊಂದಲೇಬೇಕು. ನಿಗದಿಪಡಿಸಿದ ಕನಿಷ್ಠ 50 ಅಂಕಗಳನ್ನು ಪಡೆಯದ ಅಭ್ಯರ್ಥಿಗಳು ಸಂದರ್ಶನಕ್ಕೆ ಅರ್ಹರಾಗುವುದಿಲ್ಲ ಹಾಗೂ ಈ ಕನ್ನಡ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಆಯ್ಕೆಗೆ ಪರಿಗಣಿಸುವುದಿಲ್ಲ.

ಆದರೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ವಿನಾಯಿತಿ ಬಗ್ಗೆ ಕೆಳಕಂಡ ಷರತ್ತುಗಳನ್ನು ಸೇರ್ಪಡಿಸಲಾಗಿರುತ್ತದೆ.

"ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮಾನವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಅಥವಾ ಎಸ್.ಎಸ್.ಎಲ್.ಸಿ.ಗಿಂತ ಮೇಲ್ಪಟ್ಟದ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಮುಖ್ಯ ಭಾಷೆಯಾಗಿ. ಅಥವಾ ದ್ವಿತೀಯ ಭಾಷೆಯಾಗಿ ಅಥವಾ ಐಚ್ಛಿಕ ವಿಷಯವಾಗಿ (ಆದರೆ ಸಂಯುಕ್ತ ಪತ್ರಿಕೆಯ ವಿಷಯಗಳಲ್ಲೊಂದಾಗಿರಬಾರದು) ಅಥವಾ ಮೇಲಿನ ಪರೀಕ್ಷೆಗಳಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ತೇರ್ಗಡೆಯಾಗಿರುವ ಅಥವಾ ಕರ್ನಾಟಕ ಲೋಕ ಸೇವಾ ಆಯೋಗದಿಂದ ಇದೇ ನಿಯಮಗಳನ್ವಯ ಈ ಹಿಂದೆ ನಡೆಸಲ್ಪಟ್ಟ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯಲ್ಲಿ ತೇರ್ಗಡೆಯಾಗಿರುವ ಅಭ್ಯರ್ಥಿಗಳು. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲಿ ಉತ್ತೀರ್ಣರಾಗುವುದರಿಂದ ವಿನಾಯಿತಿ ಹೊಂದಿರುತ್ತಾರೆ ".

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯಿತಿ ಪಡೆಯಲು ಅರ್ಜಿಯ ನಿಗದಿತ ಸ್ಥಳದಲ್ಲಿ ವಿವರಗಳನ್ನು ನೀಡತಕ್ಕದ್ದು. ಸರಿಯಾದ ಮಾಹಿತಿ ಒದಗಿಸದಿದ್ದಲ್ಲಿ ಮೇಲಿನ ವಿನಾಯಿತಿಗಳನ್ನು ಪಡೆಯಲು ಅರ್ಹತೆ ನೀಡುವುದಿಲ್ಲ.

ಸೂಚನೆ:– ಕನ್ನಡ ಕಡ್ಡಾಯ ಭಾಷಾ ಪರೀಕ್ಷೆ ಬಗ್ಗೆ ಪಠ್ಯಕ್ರಮವನ್ನು ಆಯೋಗದ ವೆಬ್ ಸೈಟ್ " http://kpsc. kar.nic.in/SYLLABUS " ನಲ್ಲಿ ಬಿತ್ತರಿಸಲಾಗಿದೆ.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು 2006ರ ಉಪನಿಯಮ 6ರನ್ವಯ ಅಭ್ಯರ್ಥಿಗಳನ್ನು, ಅವರು ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಶೇಕಡವಾರು ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ 1:3 ಅನುಪಾತದಲ್ಲಿ ಸಂದರ್ಶನಕ್ಕೆ ಆಹ್ವಾನಿಸಲಾಗುವುದು. ಅಭ್ಯರ್ಥಿಗಳು ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

ಸಂದರ್ಶನ ನಡೆಸುವ ಉದ್ದೇಶ ಎಂದರೆ ಅಭ್ಯರ್ಥಿಗಳು ಆಯ್ಕೆ ಬಯಸಿದ ಹುದ್ದೆಗೆ ಅವರ ಅರ್ಹತೆ, ವ್ಯಕ್ತಿತ್ವ, ಸಂಬಂಧಿತ ವಿಷಯದಲ್ಲಿ ವ್ಯಕ್ತಪಡಿಸುವ ಸಾಮರ್ಥ್ಯ, ಸೂಕ್ಷ್ಮತೆ ಮತ್ತು ಕರ್ತೃತ್ವ ಶಕ್ತಿ, ಸಾಮಾನ್ಯ ಜ್ಞಾನ ಹಾಗೂ ವಿಷಯದಲ್ಲಿನ ಪರಿಜ್ಞಾನ ಹಾಗೂ ಇನ್ನಿತರ ವಿಶೇಷ ಗುಣಗಳನ್ನು ನಿರ್ಧರಿಸುವುದಾಗಿದ್ದು, ಅಭ್ಯರ್ಥಿಗಳು ಆಯಾ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳ ಮತ್ತು ಆಯೋಗವು ನಡೆಸುವ ಸಂದರ್ಶನದಲ್ಲಿ ಗಳಿಸಿದ ಅಂಕಗಳ ಜೇಷ್ಠತೆಯ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

ಸಂದರ್ಶನಕ್ಕೆ ನಿಗದಿಪಡಿಸಲಾದ ಗರಿಷ್ಠ ಅಂಕಗಳು 15 (ಹದಿನೈದು)

6. ಶೈಕ್ಷಣಿಕ ವಿದ್ಯಾರ್ಹತೆ, ವೇತನ ಶ್ರೇಣಿ, ವಯೋಮಿತಿ ಮತ್ತು ಹುದ್ದೆಗಳ ವರ್ಗೀಕರಣ:–

6(ಎ) ಶೈಕ್ಷಣಿಕ ವಿದ್ಯಾರ್ಹತೆ:– ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

ಈ ಹುದ್ದೆಗಳು ತಾಂತ್ರಿಕ ಹುದ್ದೆಗಳಾಗಿದ್ದು ಅಭ್ಯರ್ಥಿಯ ಆಯಾ ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯಲ್ಲಿ ಗಳಿಸಿರುವ ಶೇಕಡವಾರು ಅಂಕಗಳ ಆಧಾರದ ಮೇಲೆ ಸಂದರ್ಶನಕ್ಕೆ ಆಹ್ವಾನಿಸುವುದರಿಂದ ಅಭ್ಯರ್ಥಿಗಳು ಅರ್ಜಿಯಲ್ಲಿ ಎಲ್ಲಾ ಸೆಮಿಸ್ಟರ್ / ವರ್ಷಗಳಲ್ಲಿ ಗಳಿಸಿರುವ ಒಟ್ಟಾರು

ಅಂಕಗಳನ್ನು [illegible] ಗರಿಷ್ಠ ಮತ್ತು [illegible] ಅಂಕಗಳನ್ನು ಸ್ಪಷ್ಟವಾಗಿ ನಮೂದಿಸತಕ್ಕದ್ದು. ಕೆಲವು ವಿಶ್ವವಿದ್ಯಾಲಯಗಳು ಕೊನೆಯ ಬಾರಿ ಗಳಿಸಿರುವ ಅಂಕಗಳನ್ನು ಮಾತ್ರ ನಮೂದಿಸಿದ್ದು, ಒಂದಕ್ಕಿಂತ ಹೆಚ್ಚು ಬಾರಿ ಬರೆದು ಉತ್ತೀರ್ಣರಾಗಿರುವ ಅಂಕಗಳನ್ನು ಗಣನೆಗೆ ತೆಗೆದುಕೊಂಡಿರುವುದಿಲ್ಲ. ಅಭ್ಯರ್ಥಿಗಳು ಆ ಅಂಕಗಳನ್ನು ಸೇರಿಸಿಕೊಂಡು ಜೊತೆಗೆ ಗ್ರೇಸ್ ಮಾರ್ಕ್ಸ್‌ನ್ನು ನೀಡಿದ್ದಲ್ಲಿ ಅದನ್ನು ಒಟ್ಟು ಅಂಕಗಳೊಂದಿಗೆ ಸೇರಿಸಿಕೊಂಡು ಅಂಕಗಳನ್ನು ನಮೂದಿಸುವುದು. ಹಾಗೂ ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿ ವಿಶ್ವವಿದ್ಯಾಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡವಾರು ಅಂಕಗಳನ್ನು ತಪ್ಪದೇ ನಮೂದಿಸಬೇಕು. ಅಂಕಗಳು ವ್ಯತ್ಯಾಸ ಕಂಡುಬಂದಲ್ಲಿ ಅಭ್ಯರ್ಥಿಯೇ ಜವಾಬ್ದಾರರಾಗಿರುತ್ತಾರೆ. ತಪ್ಪಿದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

6(ಬಿ) ಯಾವುದೇ ಹುದ್ದೆಗೆ ಸೇವಾನುಭವವನ್ನು ನಿಗದಿಪಡಿಸಿದಾಗ ಅಭ್ಯರ್ಥಿಗಳು ವಿದ್ಯಾರ್ಹತೆ ಹೊಂದಿದ ನಂತರ ಸೇವಾನುಭವ ಹೊಂದಿರತಕ್ಕದ್ದು.

6(ಸಿ) ಯಾವುದೇ ಹುದ್ದೆಗೆ ಆದ್ಯತಾ ವಿದ್ಯಾರ್ಹತೆಯನ್ನು ನಿಗದಿಪಡಿಸಿದಾಗ ಆದ್ಯತಾ ವಿದ್ಯಾರ್ಹತೆ ಹೊಂದಿರುವ ಎಲ್ಲಾ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಪರಿಗಣಿಸಲಾಗುವುದು. ಆದರೆ ಆಯ್ಕೆಪಟ್ಟಿಯನ್ನು ಸಿದ್ಧಪಡಿಸುವಾಗ ಆದ್ಯತಾ ವಿದ್ಯಾರ್ಹತೆ ಹೊಂದಿರುವ ಮತ್ತು ಆದ್ಯತಾ ವಿದ್ಯಾರ್ಹತೆ ಹೊಂದದೇ ಇರುವ ಅಭ್ಯರ್ಥಿಗಳ ಅಂಕಗಳ ಜೇಷ್ಠತೆಯ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ ಮಾಡಲಾಗುವುದು.

6.2 **ವಯೋಮಿತಿ:–** ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿದಂತೆ, ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗದಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

(ಅ) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಆ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. (ಈ ಉಪ ಕಂಡಿಕೆಗೆ ಸಂಬಂಧಿಸಿದ ವಿವರಣೆಗಳಿಗೆ ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮಗಳು 2 ಮತ್ತು 9 ರನ್ವಯ ಅರ್ಥೈಸಿಕೊಳ್ಳುವುದು)

(ಇ) ಅಭ್ಯರ್ಥಿಗಳು ನ್ಯಾಷನಲ್ ಕ್ಯಾಡೆಟ್ ಕೋರ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂಥ ಕ್ಯಾಡೆಟ್ ಪರಿವೀಕ್ಷನಾಗಿ ಅವನು ಸೇವೆ ಸಲ್ಲಿಸಿದಷ್ಟು ವರ್ಷಗಳು.

(ಈ) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಹಾಯಕ ಪರಿವೀಕ್ಷಕರಾಗಿ ಈಗ ಕೆಲಸ ಮಾಡುತ್ತಿದ್ದಲ್ಲಿ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅವನು / ಅವಳು ಅಂತಹ ಗ್ರಾಮ ಸಹಾಯಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(ಉ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

(ಊ) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(ಋ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

(ೠ) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 6.2.(ೠ) ರ ಮೇರೆಗೆ ವಯೋಮಿತಿಯ ಸಡಿಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕ ನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದು ಅರ್ಜಿಯೊಂದಿಗೆ ಲಗತ್ತಿಸಬೇಕು.

7. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು :–

ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:–

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಡಿ'

ಆ) ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಇ'

ಇ) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:– ನಮೂನೆ 'ಎಫ್'

ಅರ್ಜಿ ಸಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ ಮತ್ತು ಪ್ರವರ್ಗ–3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳನ್ನು ಪಡೆದ ದಿನಾಂಕದಿಂದ ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಐದು ವರ್ಷಗಳ ಅವಧಿಯೊಳಗಿರಬೇಕು. ಅರ್ಜಿಯ ನಿಗದಿತ ಸ್ಥಳದಲ್ಲಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ನಮೂದಿಸತಕ್ಕದ್ದು. [illegible]

ಇದೇ ಪ್ರಮಾಣ ಪತ್ರವನ್ನು ಸಂದರ್ಶನ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಅರ್ಹರಾಗಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯಡಿಯಲ್ಲಿ ಪರಿಗಣಿಸಲಾಗುವುದು. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ. ಈ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

8. ಗ್ರಾಮೀಣ ಅಭ್ಯರ್ಥಿ

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೇನೆನಿ 2001 ದಿನಾಂಕ 13–02–2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-1ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-I ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–I, ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದಿಟ್ಟುಕೊಂಡಿರತಕ್ಕದ್ದು. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ).

9. ಕನ್ನಡ ಮಾಧ್ಯಮ ಅಭ್ಯರ್ಥಿ

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೇನೆನಿ 2001 ದಿನಾಂಕ 24–10–2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಭ್ಯರ್ಥಿಗಳ ಸೂಚನೆಗಳಲ್ಲಿ ತೋರಿಸಲಾಗಿದೆ).

10. ಅಂಗವಿಕಲ ಅಭ್ಯರ್ಥಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03–09–2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ –' ಎ ' ಮತ್ತು ' ಬಿ ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 21 ಎಸ್‌ಆರ್‌ಆರ್ 2008 ದಿನಾಂಕ 03–08–2009ರ ಅನುಸೂಚಿಯಡಿ ಸೇರ್ಪಡೆ ಮಾಡಲಾಗಿರುವ ಇಲಾಖೆಗಳು) ಮತ್ತು ಸಮೂಹ 'ಸಿ' ಗುಂಪಿನ ಹುದ್ದೆಗಳಿಗೆ ಶೇಕಡ 5 ರಷ್ಟು (ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 52 ಎಸ್‌ಆರ್‌ಆರ್ 99 ದಿನಾಂಕ:29–11–2002ರ ಅನುಸೂಚಿಯಡಿ ಸೇರ್ಪಡಿಸಲಾಗಿರುವ ಇಲಾಖೆಗಳು) ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ 19–11–2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಸೂಚನೆಗಳಲ್ಲಿ ಅನುಬಂಧಿಸಲಾಗಿದೆ. ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು.

11. ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ (PDP)

ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 23 ಸೇನೆನಿ 99 ದಿನಾಂಕ 23–11–2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು (ಗ್ರೂಪ್ 'ಸಿ' ಹುದ್ದೆಗಳಿಗೆ ಮಾತ್ರ) ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಸಂಬಂಧಪಟ್ಟ ಅಂಕಣದಲ್ಲಿ ನಮೂದಿಸತಕ್ಕದ್ದು ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು

